ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೩೮

# ಪಟ್ಟಿ – ೦೮

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಮಂಗಳವಾರ, ದಿನಾಂಕ: ೨೧ನೇ ಮಾರ್ಚ್, ೨೦೧೭

---

## ಸಮೂಹ – II

೧. ಇಂಧನ ಸಚಿವರು.

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು.

೪. ಕೃಷಿ ಸಚಿವರು.

೫. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು.

೬. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

---

## ವಿಜಯಪುರ ಕೃಷಿ ವಿಶ್ವ ವಿದ್ಯಾಲಯದ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೧೧೮೩ (೯೬೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಜಯಪುರ ಕೃಷಿ ವಿಶ್ವ ವಿದ್ಯಾಲಯದ ಸ್ನಾತಕೋತ್ತರ ಕೇಂದ್ರವನ್ನು ಸ್ಥಾಪನೆ ಮಾಡಿದ್ದು ಯಾವಾಗ ;

(ಆ) ಅಲ್ಲಿ ನಡೆಯುತ್ತಿರುವ ಸ್ನಾತಕ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳು ಯಾವುವು; ಪ್ರತಿ ವರ್ಷ ಎಷ್ಟು ವಿದ್ಯಾರ್ಥಿಗಳು ಸ್ನಾತಕ ಹಾಗೂ ಸ್ನಾತಕೋತ್ತರ ಪದವಿಯನ್ನು ಪಡೆಯಲು ಪ್ರವೇಶಾವಕಾಶ ಇದೆ;

(ಇ) ವಿಜಯಪುರ ಜಿಲ್ಲೆಯಲ್ಲಿ ಕೆರೆಗೆ ನೀರು ತುಂಬುವ ಯೋಜನೆಯ ಬೃಹತ್ ನೀರಾವರಿ ಇಲಾಖೆಯಿಂದ ನಡೆದಿದೆ; ವಿಶ್ವವಿದ್ಯಾಲಯವು ಈ ಸ್ನಾತಕೋತ್ತರ ಕೇಂದ್ರದಲ್ಲಿ ಕೆರೆ ನಿರ್ಮಿಸಿ ಅದಕ್ಕೆ ನೀರು ತುಂಬಿಸುವ ಯೋಜನೆಗೆ ಬೇಡಿಕೆ ಇಟ್ಟಿದೆಯೇ; ಇದಕ್ಕೆ ಇಲಾಖೆಯ ಕ್ರಮ ಏನು;

(ಈ) ವಿಶ್ವವಿದ್ಯಾಲಯದಲ್ಲಿ ರೈತರು ಬಂದು ವಾಸ್ತವ್ಯ ಹೂಡಿ ಅಧ್ಯಯನ ಮಾಡಲು ಯಾತ್ರಿ ನಿವಾಸದ ಮಾದರಿಯ ಹಾಸ್ಟೆಲ್ ನಿರ್ಮಾಣಕ್ಕೆ ಬೇಡಿಕೆ ಇದ್ದು, ಇಲಾಖೆಯು ತೆಗೆದುಕೊಂಡ ಕ್ರಮಗಳೇನು?

## ಪಶುಭಾಗ್ಯ ಯೋಜನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೮೪ (೧೦೨೯) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪಶುಭಾಗ್ಯ ಯೋಜನೆಯನ್ನು ಜಾರಿಗೊಳಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಫಲಾನುಭವಿಗಳಾಗಲು ಇರುವ ಮಾನದಂಡಗಳೇನು;

(ಇ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಗುರುತಿಸಲಾಗಿರುವ ಫಲಾನುಭವಿಗಳೆಷ್ಟು; ಮಂಜೂರಾತಿ ಪಡೆದ ಫಲಾನುಭವಿಗಳೆಷ್ಟು? (ತಾಲ್ಲೂಕುವಾರು ವಿವರ ನೀಡುವುದು)

## ಕೃಷಿ ಇಲಾಖೆಯಲ್ಲಿನ ಹೊಸ ಯೋಜನೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೮೫ (೧೦೩೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ರಾಜ್ಯದಲ್ಲಿ ತೋಟಗಾರಿಕೆ ಇಲಾಖಾ ವತಿಯಿಂದ ರೂಪಿಸಿರುವ ಹೊಸ ಯೋಜನೆಗಳಾವುವು; (ವರ್ಷವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಗಳಿಗೆ ನಿಗಧಿಪಡಿಸಿದ ಅನುದಾನ ಎಷ್ಟು; ಬಿಡುಗಡೆ ಮಾಡಿ ಖರ್ಚಾದ ಅನುದಾನವೆಷ್ಟು; (ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಹನಿ ನೀರಾವರಿ ವ್ಯವಸ್ಥೆಯನ್ನು ಅಳವಡಿಸಿಕೊಂಡ ರೈತರಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆಯೇ; ಹಾಗಿದ್ದಲ್ಲಿ, ನೀಡಲಾಗುವ ಮೊತ್ತವೆಷ್ಟು;

(ಈ) ಮಂಡ್ಯ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಇದರ ಲಾಭ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು? (ತಾಲ್ಲೂಕುವಾರು ಫಲಾನುಭವಿಗಳ ವಿವರ ಸಹಿತ ಮಾಹಿತಿ ನೀಡುವುದು)

## ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೮೬ (೧೦೩೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ರಸ್ತೆಗಳು ಹದಗೆಟ್ಟಿದ್ದು, ಸಾರ್ವಜನಿಕರ ಮತ್ತು ವಾಹನಗಳ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ದುರಸ್ಥಿ ಕಾಮಗಾರಿ ಕೈಗೊಂಡು ಸಾರ್ವಜನಿಕರು ಮತ್ತು ವಾಹನಗಳ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆಯೇ;

(ಇ) ಇಲ್ಲದಿದ್ದಲ್ಲಿ, ಯಾವ ಕಾರಣಕ್ಕಾಗಿ ರಸ್ತೆ ದುರಸ್ಥಿ ಕಾಮಗಾರಿ ಕೈಗೊಂಡಿರುವುದಿಲ್ಲ; (ವಿವರ ಒದಗಿಸುವುದು)

(ಈ) ಮಂಡ್ಯ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದ ರಸ್ತೆಗಳ ಅಭಿವೃದ್ಧಿಗಾಗಿ ಮಂಜೂರಾಗಿರುವ ಅನುದಾನ ಎಷ್ಟು; ಇದರಲ್ಲಿ, ಖರ್ಚಾಗಿರುವ ಮೊತ್ತವೆಷ್ಟು? (ವಿವರ ನೀಡುವುದು)

## ವಿದ್ಯುತ್ ಉತ್ಪಾದನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೮೭ (೧೦೩೩) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬೇಡಿಕೆಗನುಗುಣವಾಗಿ ವಿದ್ಯುತ್ ಉತ್ಪಾದನೆಯಾಗುತ್ತಿದೆಯೇ; ಹಾಗಿದ್ದಲ್ಲಿ, ಎಷ್ಟು ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆ;

(ಆ) ಕೇಂದ್ರ ಗ್ರೀಡ್‌ನಿಂದ ರಾಜ್ಯಕ್ಕೆ ಪಡೆಯುವ ವಿದ್ಯುತ್ ಎಷ್ಟು; ಹಾಗಿದ್ದಲ್ಲಿ, ರಾಜ್ಯದಲ್ಲಿನ ವಿದ್ಯುತ್ ಕೊರತೆ ನೀಗಿಸಲು ಇದು ಯಾವ ಪ್ರಮಾಣದಲ್ಲಿ ಸಹಾಯಕಾರಿಯಾಗುತ್ತದೆ; (ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ನೀರಾವರಿ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು;

(ಈ) ಈ ಪಂಪ್‌ಸೆಟ್‌ಗಳಲ್ಲಿ ಅಧಿಕೃತ ಹಾಗೂ ಅನಧಿಕೃತ ಪಂಪ್‌ಸೆಟ್‌ಗಳೆಷ್ಟು; ಹಾಗಿದ್ದಲ್ಲಿ, ಅನಧಿಕೃತ ಪಂಪ್‌ಸೆಟ್‌ಗಳು ಕಂಡು ಬಂದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಉ) ವಿದ್ಯುತ್ ಕೊರತೆ ನೀಗಿಸಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳಾವುವು? (ವಿವರ ನೀಡುವುದು)

## ಪಶು ಚಿಕಿತ್ಸಾಲಯದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೮೮ (೧೦೩೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಪಶು ಚಿಕಿತ್ಸಾಲಯ/ಆಸ್ಪತ್ರೆ/ಚಿಕಿತ್ಸಾ ಕೇಂದ್ರಗಳಿವೆ; (ವಿವರ ನೀಡುವುದು)

(ಆ) ಸದರಿ ಆಸ್ಪತ್ರೆಗಳು ಸ್ವಂತ ಕಟ್ಟಡ ಹೊಂದಿವೆಯೇ;

(ಇ) ಇಲ್ಲದಿದ್ದಲ್ಲಿ, ಸ್ವಂತ ಕಟ್ಟಡ ಮಂಜೂರಾತಿಗೆ ಸರ್ಕಾರ ಕೈಗೊಂಡ ಕ್ರಮವೇನು;

(ಈ) ಮಂಡ್ಯ ಜಿಲ್ಲೆಗೆ ಹೊಸದಾಗಿ ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು?

## ಹೈದ್ರಾಬಾದ್–ಕರ್ನಾಟಕ ಭಾಗದಲ್ಲಿ ೩ ವರ್ಷದ ಮುಂಗಾರು ಮತ್ತು ಹಿಂಗಾರು ಬೆಳೆಗಳ ವಿಮೆ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೧೯೯ (೧೦೦೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳ ಹಾಗೂ ಹರಪನಹಳ್ಳಿಯಲ್ಲಿ ೨೦೧೪–೨೦೧೭ನೇ ಸಾಲಿನಲ್ಲಿ ಮುಂಗಾರು ಹಾಗೂ ಹಿಂಗಾರು ಬೆಳೆಗಳ ಬೆಳೆ ವಿಮೆ ಮಾಡಿಸಿದ ರೈತರ ಸಂಖ್ಯೆ ಎಷ್ಟು; (ವರ್ಷವಾರು, ತಾಲ್ಲೂಕುವಾರು ಸಂಪೂರ್ಣ ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಪ್ರದೇಶದ ಆರು ಜಿಲ್ಲೆಗಳ ಹಾಗೂ ಹರಪನಹಳ್ಳಿಯಲ್ಲಿ ೨೦೧೪ ರಿಂದ ೨೦೧೭ ರವರೆಗೆ ಮುಂಗಾರು ಹಾಗೂ ಹಿಂಗಾರು ಬೆಳೆಗಳ ಬೆಳೆ ವಿಮೆ ಪಡೆದ ರೈತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು, ವರ್ಷವಾರು ಸಂಪೂರ್ಣ ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಭಾಗದಲ್ಲಿ ಬೆಳೆ ಹಾನಿಯಾಗಿದ್ದರೂ ಕೂಡ ಬೆಳೆ ವಿಮೆ ಪಡೆಯುವಲ್ಲಿ ರೈತರು ವಿಫಲವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದರೆ ಬೆಳೆ ವಿಮೆ ಸಿಗದೆ ಇದ್ದ ರೈತರಿಂದ ದೂರುಗಳೇನಾದರೂ ಬಂದಿವೆಯೇ; (ತಾಲ್ಲೂಕುವಾರು, ವರ್ಷವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಈ) ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು? (ಮಾಹಿತಿ ನೀಡುವುದು)

## ಕಲಬುರಗಿ ವಿಮಾನ ನಿಲ್ದಾಣದ ಕಾಮಗಾರಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೯೯೦ (೧೦೦೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ವಿಮಾನ ನಿಲ್ದಾಣದ ಕಾಮಗಾರಿ ಲೋಕೋಪಯೋಗಿ ಇಲಾಖೆಗೆ ವಹಿಸಲಾಗಿದೆಯೇ; (ಯೋಜನೆ ನಕಾಶೆಯೊಂದಿಗೆ ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಯೋಜನೆಯಡಿಯಲ್ಲಿ ಇಲಾಖೆಗೆ ವಹಿಸಿದ ಕಾಮಗಾರಿಗಳು ಯಾವುವು; (ಕಾಮಗಾರಿಗಳ ಪ್ರತ್ಯೇಕ ಮಾಹಿತಿ ಯೋಜನಾ ವೆಚ್ಚದೊಂದಿಗೆ ನೀಡುವುದು)

(ಇ) ಸದರಿ ಯೋಜನೆಯನ್ನು ಲೋಕೋಪಯೋಗಿ ಇಲಾಖೆಗೆ ವಹಿಸುವುದಕ್ಕಿಂತ ಮೊದಲು ಆದಂತಹ ಕಾಮಗಾರಿಗಳು ಯಾವುವು; (ಕಾಮಗಾರಿಗಳ ಪ್ರತ್ಯೇಕ ವಿವರ ವೆಚ್ಚದೊಂದಿಗೆ ನೀಡುವುದು)

(ಈ) ಸದರಿ ಯೋಜನೆಯ ಭೌತಿಕ ಹಾಗೂ ಆರ್ಥಿಕ ಗುರಿಗಳೇನು; ಇಲ್ಲಿಯವರೆಗೆ ಸಾಧಿಸಿದ ಭೌತಿಕ ಹಾಗೂ ಆರ್ಥಿಕ ಪ್ರಗತಿ ಎಷ್ಟು? (ಪ್ರತ್ಯೇಕ ಮಾಹಿತಿ ನೀಡುವುದು)

## ಕಲಬುರಗಿ ತಾಲ್ಲೂಕಿನ ಫಿರೋಜಾಬಾದ್, ಹೊನ್ನಕಿರಣಗಿ, ನದಿಸಿಣ್ಣೂರ ಶಾಖೋತ್ಪನ್ನ ವಿದ್ಯುತ್ ಸ್ಥಾವರ ಸ್ಥಾಪಿಸುವ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೯೯೧ (೧೦೦೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ತಾಲ್ಲೂಕಿನ ಫಿರೋಜಾಬಾದ್, ಹೊನ್ನಕಿರಣಗಿ, ನದಿಸಿಣ್ಣೂರ ವ್ಯಾಪ್ತಿಯಲ್ಲಿ ಶಾಖೋತ್ಪನ್ನ ವಿದ್ಯುತ್ ಸ್ಥಾವರ ಸ್ಥಾಪಿಸುವ ಯೋಜನೆಗಾಗಿ ಭೂ–ಸ್ವಾಧೀನಪಡಿಸಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸ್ವಾಧೀನಪಡಿಸಿಕೊಂಡ ಭೂಮಿ, ಪ್ರತಿ ಎಕರೆಗೆ ನೀಡಿದ ಪರಿಹಾರ, ಭೂಮಿ ಕಳೆದುಕೊಂಡ ರೈತರ ಸಂಖ್ಯೆ ಎಷ್ಟು; (ಪ್ರತ್ಯೇಕ ವಿವರ ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗಾಗಿ ೦೫ ರಿಂದ ೦೬ ವರ್ಷ ಕಳೆದಿದ್ದರೂ ಉದ್ದೇಶಿತ ಯೋಜನೆಗೆ ಸ್ವಾಧೀನಪಡಿಸಿಕೊಂಡ ಭೂಮಿಯ ಸದ್ಬಳಕೆ ಆಗದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಕಾರಣಗಳೊಂದಿಗೆ ಸಂಪೂರ್ಣ ವಿವರ ನೀಡುವುದು;

(ಇ) ಸರ್ವೋಚ್ಛ ನ್ಯಾಯಾಲಯದ ತೀರ್ಪಿನ ಪ್ರಕಾರ ಉದ್ದೇಶಿತ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡ ಭೂಮಿ ೦೫ ವರ್ಷದ ಒಳಗಡೆ ಸದ್ಬಳಕೆಯಾಗದೆ ಇದ್ದರೆ, ಜಮೀನುಗಳನ್ನು ಸಂಬಂಧಪಟ್ಟ ರೈತರಿಗೆ ಮರಳಿ ನೀಡುವ ತೀರ್ಪಿನ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ನಿಟ್ಟಿನಲ್ಲಿ ಮೇಲ್ಕಂಡ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡ ಭೂಮಿ ೦೫–೦೬ ವರ್ಷಕ್ಕೆ ಮೇಲ್ಪಟ್ಟು ಬಳಕೆಯಾಗದೆ ಇದ್ದು, ಅದನ್ನು ಸಂಬಂಧಪಟ್ಟ ರೈತರಿಗೆ ಹಿಂದಿರುಗಿಸಲು ಸರ್ಕಾರ ಮುಂದಾಗುವುದೇ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಉದ್ದೇಶಿತ ಯೋಜನೆಗಾಗಿ ಸ್ವಾಧೀನಪಡಿಸಿಕೊಂಡ ಭೂಮಿಯನ್ನು ಸದ್ಬಳಕೆ ಮಾಡುವ ದೃಷ್ಟಿಯಿಂದ ಕೇಂದ್ರದ NTPC ಸಂಸ್ಥೆಗೆ ವಹಿಸಿಕೊಟ್ಟು NTPC ಯಿಂದ ಯೋಜನೆಯನ್ನು ಕಾರ್ಯರೂಪಕ್ಕೆ ತರಲು ಸರ್ಕಾರ ಮುಂದಾಗುವುದೇ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ವಿದ್ಯುತ್ ಅವಘಡದಿಂದಾದ ಜೀವಹಾನಿಯ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೧೯೨ (೧೦೦೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿದ್ಯುತ್ ಅವಘಡದಿಂದ ತೀವ್ರ ಗಾಯ, ಮಾನವ ಜೀವಹಾನಿ ಹಾಗೂ ಜಾನುವಾರು ಜೀವ ಹಾನಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಕಳೆದ ೨೦೧೩ ರಿಂದ ೨೦೧೭ರವರೆಗೆ ವಿದ್ಯುತ್ ಅವಘಡದಿಂದಾಗಿ ಆದ ಜೀವಹಾನಿ ಹಾಗೂ ಅಪಘಾತಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ವರ್ಷವಾರು ಮಾನವ ಹಾಗೂ ಜಾನುವಾರುಗಳು ಸೇರಿದಂತೆ ಪ್ರತ್ಯೇಕ ಸಂಪೂರ್ಣ ಮಾಹಿತಿ ನೀಡುವುದು)

(ಆ) ಇಲಾಖೆಯಲ್ಲಿ ಸುರಕ್ಷತೆಗಾಗಿ ಕ್ರಮ ಕೈಗೊಳ್ಳಲಾಗಿದೆಯೇ; ಕೈಗೊಂಡ ಕ್ರಮಗಳ ಬಗ್ಗೆ ಹಾಗೂ ಸುರಕ್ಷಿತ ಕ್ರಮಗಳಿಗಾಗಿ ೨೦೧೩ ರಿಂದ ೨೦೧೭ರವರೆಗೆ ಮಾಡಿದಂತ ವೆಚ್ಚ ಎಷ್ಟು; (ವರ್ಷವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಇ) ಕಳೆದ ದಿನಾಂಕ: ೦೧–೦೨–೨೦೧೭ ರಂದು ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯಲ್ಲಿ (ಜೆಸ್ಕಾಂ) ಲೈನ್‌ಮನ್ ಆಗಿ ಆಫ್ಜಲ್‌ಪುರ ತಾಲ್ಲೂಕಿನ ಮಣ್ಣೂರ ಗ್ರಾಮದ ೨೧ ವರ್ಷದ ಮಾಧುರಾಯ ಎಂಬ ಯುವಕ ವಿದ್ಯುತ್ ಅವಘಡದಿಂದ ಪ್ರಾಣ ಕಳೆದುಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರದಿಂದ ನೌಕರನ ಕುಟುಂಬಕ್ಕೆ ಪರಿಹಾರ ನೀಡಲಾಗಿದೆಯೇ? (ಮಾಹಿತಿ ನೀಡುವುದು)

## ಶೀತಲ ಗೃಹ ನಿರ್ಮಾಣ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೯೩ (೯೨೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೧–೧೨ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಗೆ, ಶೀತಲ ಗೃಹ ನಿರ್ಮಾಣ ಮಾಡಲು ₹ ೨೨೫.೦೦ ಲಕ್ಷಗಳು ಮಂಜೂರಾಗಿರುವುದು ನಿಜವೇ; ಹಾಗಿದ್ದಲ್ಲಿ, ಇದುವರೆಗೆ ಕಾಮಗಾರಿ ಆರಂಭವಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಾಮಗಾರಿ ಅನುಷ್ಠಾನಗೊಳಿಸದೆ ಹಣವನ್ನು ಬ್ಯಾಂಕಿನಲ್ಲಿ ಇಟ್ಟಿದ್ದು, ಇಲ್ಲಿಯವರೆಗೆ ಎಷ್ಟು ಬಡ್ಡಿ ಬಂದಿರುತ್ತದೆ; ಬಂದ ಬಡ್ಡಿ ಹಣವನ್ನು ಈ ಕಾಮಗಾರಿಗೆ ಉಪಯೋಗಿಸಬಹುದೆ; ಬಂದ ಬಡ್ಡಿ ಹಣವನ್ನು ಸರ್ಕಾರದ ಯಾವ ಖಾತೆಗೆ ಜಮಾ ಪಡೆದಿದೆ; ಸರ್ಕಾರ ಯಾವ ಉದ್ದೇಶಕ್ಕೆ ಬಳಕೆ ಮಾಡಿಕೊಳ್ಳಲಾಗುವುದು; (ಸಂಪೂರ್ಣ ವಿವರ ನೀಡುವುದು)

(ಇ) ೨೦೧೧–೧೨ನೇ ಸಾಲಿನಲ್ಲಿ ಆರ್.ಕೆ.ವಿ.ವೈ. ಯೋಜನೆಯಡಿ ಬಿಡುಗಡೆಯಾದ ಅನುದಾನ ₹ ೨೨೫.೦೦ ಲಕ್ಷಗಳನ್ನು ಮಾರ್ಗಸೂಚಿಯನ್ವಯ ೨೦೧೧–೧೨ನೇ ಸಾಲಿನಲ್ಲಿಯೇ ಅನುಮೋದಿತ ಕಾರ್ಯಕ್ರಮಕ್ಕೆ ಖರ್ಚು ಮಾಡಲಾಗಿದೆ ಎಂದು ತೋಟಗಾರಿಕೆ ನಿರ್ದೇಶಕರು (ಜಿ.ಪಂ.) ವಿಜಯಪುರ, ಇವರು ಇಲಾಖೆಗೆ ಹಣ ಬಳಕೆ ಪ್ರಮಾಣ ಪತ್ರ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ಹಿಂದಿನ ಉದ್ದೇಶ ಏನು;

೫ ವರ್ಷಗಳ ವಿಳಂಬಕ್ಕೆ ಯಾವ ಅಧಿಕಾರಿಯನ್ನು ಜವಾಬ್ದಾರರನ್ನಾಗಿ ಮಾಡಲಾಗಿದೆ; ಮತ್ತು ಅವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಕ್ರಮ ತೆಗೆದುಕೊಳ್ಳದೆ ಇದ್ದರೆ ಕಾರಣ ಏನು; (ಸಂಪೂರ್ಣ ವಿವರ ನೀಡುವುದು)

(ಈ) ಹಿಂದಿನ ಮಾರುಕಟ್ಟೆಗಳಿಗಿಂತ ಈಗ ಹೆಚ್ಚು ದುಬಾರಿಯಾಗಿದ್ದು, ಈ ಕೊರತೆ ಬೀಳುವ ಮೊತ್ತವನ್ನು ಸರ್ಕಾರ ಯಾವ ರೀತಿ ಭರಿಸುವುದು ;

(ಉ) ತೋಟಗಾರಿಕೆ ಇಲಾಖೆ ಯೋಜನೆಗಳನ್ನು ಹಾಗೂ ತಾಂತ್ರಿಕ ಮಾಹಿತಿಗಳನ್ನು ಮತ್ತು ಸಲಹೆಗಳನ್ನು ತೋಟಗಾರಿಕೆ ಬೆಳೆಗಾರರಿಗೆ ತಿಳಿಸಲು ಮತ್ತು ಪ್ರವರ್ಧನ ಮಾಡಲು ತೋಟಗಾರಿಕೆ ಮಾಹಿತಿ ಮತ್ತು ಸಲಹಾ ಕೇಂದ್ರಗಳನ್ನು ಸ್ಥಾಪನೆ ಮಾಡುವ ಯೋಜನೆ ಸರ್ಕಾರಕ್ಕೆ ಇದೆಯೇ ;

(ಊ) ಮೇಲಿನ ಯೋಜನೆಯನ್ನು ಜಾರಿಗೆ ತರಲು ಇಲಾಖಾ ಸಿಬ್ಬಂದಿಗಳ ಕೊರತೆ ಇದ್ದಲ್ಲಿ, ಸ್ಥಳೀಯ ಸಂಘ ಸಂಸ್ಥೆ, ಎನ್.ಜಿ.ಓ. ಮತ್ತು ಹಾಪ್ ಕಾಮ್ಸ್ ಮುಂದೆ ಬಂದರೆ ವಹಿಸಿಕೊಡುವ ಇರಾದೆ ಸರ್ಕಾರಕ್ಕೆ ಇದೆಯೇ;

(ಋ) ಈ ಯೋಜನೆಯನ್ನು ಜಾರಿಗೆ ತರಲು ಸರ್ಕಾರಕ್ಕೆ ಅವಶ್ಯವಿರುವ ಅನುದಾನ ಎಷ್ಟು; ಇದಕ್ಕಾಗಿ ಯೋಜನೆಯನ್ನು ರೂಪಿಸಲಾಗಿದೆಯೇ; ಇದು ಯಾವಾಗ ಜಾರಿಗೆ ಬರುವುದು? (ವಿವರ ನೀಡುವುದು)

## ರಸ್ತೆಗಳ ಅಭಿವೃದ್ಧಿ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೪೪ (೯೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕೇಂದ್ರ ರಸ್ತೆ ನಿಧಿ ಯೋಜನೆ ಅಡಿಯಲ್ಲಿ ಕೇಂದ್ರ ಸರ್ಕಾರ ಕಳೆದ ೧ ವರ್ಷದಲ್ಲಿ ರಾಜ್ಯ ಸರ್ಕಾರವು ರಾಯಚೂರು ಜಿಲ್ಲೆಯಿಂದ ಸಲ್ಲಿಸಿರುವ ರಸ್ತೆಗಳ ಪ್ರಸ್ತಾವನೆ ಎಷ್ಟು; (ಅಂಕಿ ಅಂಶ ಸಮೇತ ಕಿಲೋ. ಮೀಟರ್ ಸಹಿತ ವಿವರ ಒದಗಿಸುವುದು)

(ಆ) ಈ ಪ್ರಸ್ತಾವನೆಗಳಿಗೆ ಕೇಂದ್ರ ಸರ್ಕಾರ ಒಪ್ಪಿಗೆ ನೀಡಿದೆಯೇ; ಇಲ್ಲದಿದ್ದಲ್ಲಿ, ಕಾರಣಗಳೇನು;

(ಇ) ಒಪ್ಪಿಗೆ ನೀಡಿದ್ದಲ್ಲಿ, ಯಾವ ಯಾವ ಕಾಮಗಾರಿಗಳಿಗೆ ಮಂಜೂರಾತಿ ನೀಡಿದೆ; (ಅಂಕಿ ಅಂಶಗಳ ಸಮೇತ ಮಾಹಿತಿ ನೀಡುವುದು)

(ಈ) ಕಳೆದ ೧ ವರ್ಷದಲ್ಲಿ ರಾಜ್ಯ ಸರ್ಕಾರವು ರಾಯಚೂರು ಜಿಲ್ಲೆಯಿಂದ ಕೇಂದ್ರ ರಸ್ತೆ ನಿಧಿ ಯೋಜನೆ ಅಡಿಯಲ್ಲಿ ರಸ್ತೆಗಳ ನಿರ್ಮಾಣಕ್ಕೆ ಎಷ್ಟು ಪ್ರಸ್ತಾವನೆ ಸಲ್ಲಿಸಿದೆ? (ಕಾಮಗಾರಿಗಳ ಸಂಪೂರ್ಣ ವಿವರ ನೀಡುವುದು)

## ಅಪೆಂಡಿಕ್ಸ್–ಇ ಕಾಮಗಾರಿ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೯೫ (೯೨೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯ, ದೇವದುರ್ಗ ತಾಲ್ಲೂಕಿನ Appendix-E ನಲ್ಲಿನ ಕಾಮಗಾರಿಗಳ ಪೈಕಿ ಎಷ್ಟು ಕಾಮಗಾರಿಗಳು ಪ್ರಾರಂಭಗೊಂಡಿವೆ;

(ಆ) ಎಷ್ಟು ರಸ್ತೆಗಳು ಪೂರ್ಣಗೊಂಡಿವೆ;

(ಇ) ಗೂಗಲ್–ದೇವದುರ್ಗ ಮತ್ತು ಗೂಗಲ್ ನಿಂದ ಜಾಲಹಳ್ಳಿ ವಾಯ ಅರಕೇರಾ ಈ ಎರಡು ರಸ್ತೆಗಳ ಟೆಂಡರಿನ ಮೊತ್ತವೆಷ್ಟು; ಎಷ್ಟು ಕಿ.ಮೀ. ಕಾಮಗಾರಿಗಳು ಪೂರ್ಣಗೊಂಡಿವೆ; ಇನ್ನೆಷ್ಟು ಕಿ.ಮಿ.ಬಾಕಿ ಇದೆ; ಪೂರ್ಣಗೊಳಿಸಲಾಗುವುದು ಯಾವಾಗ?

## ಕೃಷಿ ಉತ್ಪನ್ನ ಬೆಳೆಗಳಿಗೆ ಬೆಲೆ ನಿಗಧಿ ಪಡಿಸುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೯೯೬ (೯೩೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿ ಉತ್ಪನ್ನ ಬೆಳೆಗಳಿಗೆ ಬೆಂಬಲ ಬೆಲೆಯನ್ನು ನಿಗಧಿಪಡಿಸಲಾಗಿದೆಯೇ;

(ಆ) ನಿಗಧಿಪಡಿಸಿದ್ದಲ್ಲಿ, ಯಾವ ಯಾವ ಬೆಳೆಗಳಿಗೆ ಎಷ್ಟು ಬೆಂಬಲ ಬೆಲೆಯನ್ನು ನಿಗಧಿಪಡಿಲಾಗಿದೆ;

(ಇ) ಈ ಬೆಂಬಲ ಬೆಲೆ ನಿಗಧಿಗೆ ಇರುವ ಮಾನದಂಡಗಳೇನು;

(ಈ) ಸದರಿ ಕೃಷಿ ಉತ್ಪನ್ನ ಬೆಳೆಗಳ ಬೆಂಬಲ ಬೆಲೆ ನಿಗಧಿಗೆ ಸರ್ಕಾರ ಆಯೋಗ ರಚನೆ ಮಾಡಿದೆಯೇ;

(ಉ) ಮಾಡಿದ್ದಲ್ಲಿ, ಅದರ ಕಾರ್ಯ ವ್ಯಾಪ್ತಿ ಮತ್ತು ಸ್ವರೂಪವೇನು? (ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೯೯೭ (೯೯೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿ "ಪಶು ಭಾಗ್ಯ" ಯೋಜನೆಗೆ ಮಂಜೂರಾಗಿರುವ ಅನುದಾನ ಎಷ್ಟು; ಈ "ಪಶು ಭಾಗ್ಯ" ಯೋಜನೆಯ ಪ್ರಯೋಜನ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ರಾಯಚೂರು ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸಿಬ್ಬಂದಿಗಳನ್ನು ಭರ್ತಿ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು?

## ರಸ್ತೆಗಳ ಅಭಿವೃದ್ಧಿ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೧೮೯೮ (೯೨೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿ ಲೋಕೋಪಯೋಗಿ ಇಲಾಖೆ ಅಡಿಯಲ್ಲಿ ಬರುವ ರಸ್ತೆಗಳು ಯಾವುವು ಮತ್ತು ಅವುಗಳ ಅಂತರವೆಷ್ಟು; (ಪೂರ್ಣ ವಿವರ ಒದಗಿಸುವುದು)

(ಆ) ಕಳೆದ ೩ ವರ್ಷಗಳಲ್ಲಿ ಅಭಿವೃದ್ಧಿಗಾಗಿ ವಿವಿಧ ಲೆಕ್ಕಶೀರ್ಷಿಕೆ ಅಡಿಯಲ್ಲಿ ರಾಯಚೂರು ಜಿಲ್ಲೆಯ ಯಾವ ಕ್ಷೇತ್ರದಲ್ಲಿ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; (ಕಾಮಗಾರಿಗಳ ವಿವರ ಅನುದಾನ ಮತ್ತು ಅಂಕಿ ಅಂಶ ಸಮೇತ ವಿವರಣೆ ನೀಡುವುದು)

(ಇ) ಸದರಿ ಕ್ಷೇತ್ರದಿಂದ ಕಳೆದ ಸಾಲಿಗೆ ಯಾವ ಯಾವ ರಸ್ತೆ/ಕಟ್ಟಡ ಕಾಮಗಾರಿಗಳಿಗೆ ಮನವಿಗಳು/ಪ್ರಸ್ತಾವನೆಗಳು ಬಂದಿವೆ;

(ಈ) ಬಂದಿದ್ದಲ್ಲಿ, ಸದರಿ ಕಾಮಗಾರಿಗಳ ಮಂಜೂರಾತಿಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೯೯ (೯೮೯) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಯಚೂರು ಜಿಲ್ಲೆಯಲ್ಲಿರುವ ಪುರಸಭೆ, ನಗರಸಭೆ ಹಾಗೂ ಪಟ್ಟಣ ಪಂಚಾಯಿತಿಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು?

## ರಾಯಚೂರು ಜಿಲ್ಲೆಯಲ್ಲಿರುವ ವಿದ್ಯುತ್ ಯೋಜನೆಗಳ ಮತ್ತು ನೀರಾವರಿ ಪಂಪ್‌ಸೆಟ್‌ಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೦೦ (೯೮೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ಆರ್.ಟಿ.ಪಿ.ಎಸ್., ವೈ.ಟಿ.ಪಿ.ಎಸ್. ಸೋಲಾರ್ ಹಾಗೂ ಇತರೆ ಯೋಜನೆಗಳ ಮುಖಾಂತರ ಉತ್ಪತ್ತಿ ಆಗುತ್ತಿರುವ ವಿದ್ಯುತ್ ಎಷ್ಟು;

(ಆ) ಜಿಲ್ಲೆಯಲ್ಲಿ ಪ್ರಸ್ತುತ ಸರಬರಾಜು ಮಾಡುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು;

(ಇ) ರಾಯಚೂರು ಜಿಲ್ಲೆಯಲ್ಲಿರುವ ನೀರಾವರಿ ಪಂಪ್‌ಸೆಟ್‌ಗಳ ಸಂಖ್ಯೆ ಎಷ್ಟು; ಈ ನೀರಾವರಿ ಪಂಪ್‌ಸೆಟ್‌ಗಳಿಗೆ ದಿನದ ೨೪ ಗಂಟೆ ವಿದ್ಯುತ್ ಸರಬರಾಜಿಗೆ ಬೇಕಾಗುವ ವಿದ್ಯುತ್ ಪ್ರಮಾಣ ಎಷ್ಟು? (ವಿವರ ನೀಡುವುದು)

## ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೦೧ (೯೮೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ 'ರಿಂಗ್ ರೋಡ್' ನಿರ್ಮಾಣ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು;

(ಆ) ರಾಜ್ಯ ಹೆದ್ದಾರಿ–೨೦ ಹಾಗೂ ರಾಜ್ಯ ಹೆದ್ದಾರಿ–೨೩, ಇವುಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸಲು ಸರಕಾರ ತೆಗೆದುಕೊಂಡ ಕ್ರಮಗಳೇನು;

(ಇ) ರಾಯಚೂರು ನಗರದಿಂದ ಶಕ್ತಿನಗರದವರೆಗೂ (ಕೃಷ್ಣಾ ನದಿವರೆಗೂ) ಚತುಷ್ಪಥ (೪ ಲೇನ್) ರಸ್ತೆ ನಿರ್ಮಾಣ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು?

## ಕೃಷಿ ಇಂಜಿನೀಯರಿಂಗ್ ಪದವೀಧರರನ್ನು ಸರ್ಕಾರಿ ಇಲಾಖೆಗಳಲ್ಲಿ ನೇಮಕಾತಿ ಮಾಡಿಕೊಳ್ಳುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯತರಾದವರು):–**

೧೨೦೨ (೯೮೮)(ಎ) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಂಜಿನೀಯರಿಂಗ್‌ನಲ್ಲಿ ಪದವಿ ಪಡೆದಿರುವ ಪದವೀಧರರಿಗೆ ಕೃಷಿ ಇಲಾಖೆಯಲ್ಲಿ ಅಥವಾ ಸರ್ಕಾರಿ ಇಲಾಖೆಯಲ್ಲಿ ನೇಮಕಾತಿ ಮಾಡಿಕೊಳ್ಳಲು ಅವಕಾಶವಿದೆಯೇ;

(ಆ) ಹಾಗಿದ್ದಲ್ಲಿ, ಕೃಷಿ ಇಂಜಿನೀಯರಿಂಗ್‌ನಲ್ಲಿ ಪದವಿ ಪಡೆದಿರುವ ಪದವೀಧರರಿಗೆ ನೇಮಕಾತಿ ಮಾಡಿಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಜ್ಯದಲ್ಲಿ ರೈತರ ಜಮೀನುಗಳಿಗೆ ವಿದ್ಯುತ್ ಸರಬರಾಜು ಕಂಪನಿಗಳಿಂದ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕುರಿತು

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೧೨೦೩ (೯೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕುರಿತು ಸರ್ಕಾರಿ ಸುತ್ತೋಲೆ ಸಂಖ್ಯೆ ಇನ್/೪೧/ ವಿಎಸ್‌ಸಿ/೨೦೧೪ ದಿನಾಂಕ:೧೪/೦೭/೨೦೧೪ ಮತ್ತು ದಿನಾಂಕ:೦೨/೧೨/೨೦೧೪ರಂದು ಸರ್ಕಾರಿ ಆದೇಶ ಹೊರಡಿಸಲಾಗಿದೆಯೇ; ಹಾಗಿದ್ದಲ್ಲಿ, ಅವುಗಳ ಮುಖ್ಯಾಂಶಗಳೇನು;

(ಆ) ಈ ಸರಕಾರಿ ಆದೇಶ ಹೊರಡಿಸಿರುವ ಮೂಲ ಉದ್ದೇಶವೇನು; ಹಾಗೂ ಈ ಸೌಕರ್ಯ ಕಲ್ಪಿಸಿಕೊಳ್ಳಲು ರೈತರು ಲಕ್ಷಾಂತರ ಹಣ ವೆಚ್ಚ ಮಾಡಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಅದರಂತೆ ರಾಜ್ಯದಲ್ಲಿ ಎಷ್ಟು ರೈತರು ವಿದ್ಯುತ್ ಸರಬರಾಜಿಗಾಗಿ ಹಣ ಪಾವತಿಸಿರುತ್ತಾರೆ;

(ಇ) ರೈತರ ನೀರಾವರಿ ಪಂಪ್‌ಸೆಟ್‌ಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸುವ ೧೧ ಕೆ.ವಿ. ಎಚ್.ಟಿ. ಮಾರ್ಗ ಹಾಗೂ ಇತರೆ ಉಪಕರಣಗಳ ಒಟ್ಟಾರೆ ಅಂದಾಜು ಮೊತ್ತದಲ್ಲಿ ರೈತರು ಹಾಗೂ ಸರ್ಕಾರ ಭರಿಸಬೇಕಾದ ಶೇಕಡಾವಾರು ಮೊತ್ತ ಎಷ್ಟು;

(ಈ) ಈ ನಿಯಮದಂತೆ ರಾಜ್ಯದಲ್ಲಿ ವಿದ್ಯುತ್ ಸರಬರಾಜಿಗೆ ಹಣ ಪಾವತಿ ಮಾಡಿ ಸೌಲಭ್ಯ ಪಡೆದ ರೈತರ ಸಂಖ್ಯೆ ಎಷ್ಟು? (ವಿವರ ನೀಡುವುದು)

## ರಾಜ್ಯದಲ್ಲಿನ ನಗರ ಸ್ಥಳೀಯ ಸಂಸ್ಥೆಗಳ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ):–**

೧೨೦೪ (೧೦೦೦) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಇರುವ ಹಾಲಿ ನಗರ ಸ್ಥಳೀಯ ಸಂಸ್ಥೆಗಳ ಸಂಖ್ಯೆ ಎಷ್ಟು; (ವಿವರವಾಗಿ ಜಿಲ್ಲಾವಾರು ಮಾಹಿತಿ ಕೊಡುವುದು)

(ಆ) ಸದರಿ ಪ್ರದೇಶಗಳು ಯಾವ ದಿನಾಂಕದಿಂದ ಮುನಿಸಿಪಾಲಿಟಿ ಪ್ರದೇಶಗಳಾಗಿ ಕಾರ್ಯನಿರ್ವಹಿಸುತ್ತಿವೆ;

(ಇ) ದಿನಾಂಕ:೦೧-೦೧-೧೯೮೫ಕ್ಕೆ ರಾಜ್ಯದಲ್ಲಿ ಎಷ್ಟು ಮುನ್ಸಿಪಾಲಿಟಿಗಳಿದ್ದವು; (ವಿವರವಾಗಿ ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಮುನಿಸಿಪಾಲಿಟಿಗಳು ೦೧-೦೧-೧೯೯೬ಕ್ಕೆ ಯಾವ ಯಾವ ಪ್ರದೇಶಗಳಾಗಿ ಪರಿವರ್ತನೆಗೊಂಡಿರುತ್ತವೆ? (ವಿವರವಾಗಿ ಜಿಲ್ಲಾವಾರು ಮಾಹಿತಿ ನೀಡುವುದು)

## ಹೆಸ್ಕಾಂ ವಿಭಾಗದಲ್ಲಿ ಅನೇಕ ವರ್ಷಗಳಿಂದ ಕೆಲಸ ನಿರ್ವಹಿಸುತ್ತಿರುವ ನೌಕರರ ವಿವರ ಸಲ್ಲಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೨೦೫ (೯೭) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಹೆಸ್ಕಾಂ ವಿಭಾಗದಲ್ಲಿ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು ; (ಸಿಬ್ಬಂದಿಗಳ ವೃಂದವಾರು ಮಾಹಿತಿ ನೀಡುವುದು)

(ಆ) ಒಂದೇ ಜಿಲ್ಲೆ ಮತ್ತು ತಾಲ್ಲೂಕಿನಲ್ಲಿ ಅನೇಕ ವರ್ಷಗಳಿಂದ ಅದೆ ಸ್ಥಳದಲ್ಲಿ ಕೆಲಸ ನಿರ್ವಹಿಸುತ್ತಿರುವ ನೌಕರರಿಂದ ಜನರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಅಂತಹ ಅಧಿಕಾರಿಗಳು ಈ ಸಂಸ್ಥೆಯಲ್ಲಿ ಎಷ್ಟು ಜನ ಇದ್ದಾರೆ ; ಎಷ್ಟು ದಿನದಿಂದ ಕೆಲಸ ನಿರ್ವಹಿಸುತ್ತಿದ್ದಾರೆ ; (ಸದರಿ ನೌಕರರ ಸಂಪೂರ್ಣ ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಸದರಿ ಕಂಪನಿಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಮಾರ್ಗದಾಳು (ಲೈನ್ ಮನ್ ತಮ್ಮ ಕೆಲಸವನ್ನು ಬಿಟ್ಟು, ಅನಧಿಕೃತವಾಗಿ ಬಿಲ್ಲುಗಳನ್ನು ವಸೂಲು ಮಾಡಲು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಕಾರಣಗಳೇನು ; ಅದನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಜಲಾನಯನ ಯೋಜನೆಯಲ್ಲಿ ನಡೆದ ಭ್ರಷ್ಟಾಚಾರಕ್ಕೆ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಕೇಸ್ ದಾಖಲಿಸಲು ಶಿಫಾರಸ್ಸು ಮಾಡುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೨೦೬ (೯೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಲಾನಯನ ಯೋಜನೆ ಯಾವ ವರ್ಷದಲ್ಲಿ ಪ್ರಾರಂಭವಾಯಿತು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಯೋಜನೆ ಪ್ರಾರಂಭವಾದಾಗಿನಿಂದ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; (ವರ್ಷವಾರು ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯಡಿ ಕೈಗೊಂಡ ಕಾಮಗಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ಯೋಜನೆಯಲ್ಲಿ ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ;

(ಉ) ಈ ಯೋಜನೆಯಲ್ಲಿ ದುರುಪಯೋಗವಾಗಿರುವ ಹಣ ಎಷ್ಟು ; ಎಷ್ಟು ಭ್ರಷ್ಟಾಚಾರ ಪ್ರಕರಣಗಳು ಈ ಯೋಜನೆಯಲ್ಲಿ ದಾಖಲಾಗಿವೆ;

(ಊ) ಈ ಯೋಜನೆಯಡಿ ನಡೆದ ಭ್ರಷ್ಟಾಚಾರ ಪ್ರಕರಣದ ಬಗ್ಗೆ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳಲಿದೆ ?

## "ಸುವರ್ಣ ಕೃಷಿ ಗ್ರಾಮ" ಯೋಜನೆ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦೭ (೧೦೧೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ "ಸುವರ್ಣ ಕೃಷಿ ಗ್ರಾಮ" ಯೋಜನೆಯನ್ನು ಜಾರಿಗೆ ತರಲಾಗಿದೆಯೇ ; ಹಾಗಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳೇನು ; (ವಿವರ ನೀಡುವುದು)

(ಆ) ಇದಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಈ ಯೋಜನೆಯನ್ನು ಯಾವ ಜಿಲ್ಲೆಗಳಲ್ಲಿ ಹಾಗೂ ಗ್ರಾಮಗಳಲ್ಲಿ ಜಾರಿಗೆ ತರಲಾಗಿದೆ ? (ವಿವರ ನೀಡುವುದು)

## ಕಂದಾಯ ಅಧಿಕಾರಿಗಳು/ವ್ಯವಸ್ಥಾಪಕರು/ಹಿರಿಯ ಆರೋಗ್ಯ ನಿರೀಕ್ಷಕರನ್ನು KMAS ಗೆ ವಿಲೀನಗೊಳಿಸುವ ವಿಚಾರ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦೮ (೧೦೧೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಂದಾಯ ಅಧಿಕಾರಿಗಳು, ವ್ಯವಸ್ಥಾಪಕರು, ಹಿರಿಯ ಆರೋಗ್ಯ ನಿರೀಕ್ಷಕರುಗಳನ್ನು KMAS-II ಕ್ಕೆ ವಿಲೀನಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಕರ್ನಾಟಕ ಪೌರ ಸೇವಾ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ರಾಜ್ಯದಲ್ಲಿನ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುವ ಅರ್ಹ ನೌಕರರು ಎಷ್ಟು ; (ವೃಂದವಾರು ಪಟ್ಟಿಯನ್ನು ನೀಡುವುದು)

(ಇ) ವೃಂದವಾರು ಅರ್ಹರಿರುವ ನೌಕರರನ್ನು KMAS-II ಹುದ್ದೆಗಳಿಗೆ ವಿಲೀನಗೊಳಿಸುವ ಪ್ರಕ್ರಿಯೆ ಯಾವ ಹಂತದಲ್ಲಿದೆ ; ಯಾವಾಗ ಪೂರ್ಣಗೊಳ್ಳುತ್ತದೆ ? (ವಿವರ ನೀಡುವುದು)

## ಪಶುಚಿಕಿತ್ಸಾಲಯ ಸೌಲಭ್ಯಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೨೯ (೧೦೨೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರತಿ ತಾಲ್ಲೂಕಿಗೆ ಸಂಚಾರಿ ಪಶು ಚಿಕಿತ್ಸಾಲಯಗಳ ಸೌಲಭ್ಯ ಒದಗಿಸುವ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಯಿತು ;

(ಆ) ಈಗ ಒಟ್ಟು ಎಷ್ಟು ಸಂಚಾರಿ ಪಶು ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಲಿವೆ ;

(ಇ) ಈ ಸಂಚಾರಿ ಪಶುಚಿಕಿತ್ಸಾಲಯಗಳು ತಾಂತ್ರಿಕ ತೊಂದರೆ ಹಾಗೂ ಸಿಬ್ಬಂದಿಗಳ ಕೊರತೆಯಿಂದಾಗಿ ಸರಿಯಾಗಿ ಕಾರ್ಯ ನಿರ್ವಹಿಸದಿರುವುದು ನಿಜವೆ ;

(ಈ) ಹಾಗಿದ್ದಲ್ಲಿ, ರೈತರ ಜಾನುವಾರುಗಳ ಆರೋಗ್ಯ ರಕ್ಷಣೆಯಲ್ಲಿ ಸಂಜೀವಿನಿಯಾಗಿ ಕೆಲಸ ಮಾಡಬಲ್ಲ ಸಂಚಾರಿ ಪಶು ಚಿಕಿತ್ಸಾಲಯಗಳು ಸುಸಜ್ಜಿತವಾಗಿ ಕಾರ್ಯನಿರ್ವಹಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಅನುಕಂಪ ಆಧಾರಿತ ಕೆಲಸ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೨೧೦ (೧೦೨೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೇಷ್ಮೆ ಇಲಾಖೆಯಡಿ ಬರುವ ನಿಗಮ, ಮಂಡಳಿ, ಪ್ರಾಧಿಕಾರಗಳು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಇಲಾಖೆ ಹಾಗೂ ಅಂಗ ಸಂಸ್ಥೆಗಳಲ್ಲಿ ಅನುಕಂಪ ಆಧಾರಿತ ಕೆಲಸ ಕೋರಿರುವ ಹಾಗೂ ಇಲ್ಲಿಯವರೆಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; (ಮೃತ ನೌಕರನ ಹೆಸರು, ಅರ್ಜಿ ಸಲ್ಲಿಸಿರುವ ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಇಲಾಖೆಯಡಿ ಬರುವ ಅಂಗ ಸಂಸ್ಥೆಗಳ ಸೇವಾ (Work man) ನಿಯಮ ಏನಿದೆ ; ಇದರ ಸಂಬಂಧ ಅನುಕಂಪ ಆಧಾರಿತ ಹುದ್ದೆಗಳನ್ನು ನೀಡಲು ಇರುವ ನಿಯಮಗಳೇನು ;

(ಈ) ಯಾವ ಕಾಲಮಿತಿಯೊಳಗೆ ಈ ಹುದ್ದೆಗಳನ್ನು ಸರ್ಕಾರ ತುಂಬಲಾಗುವುದು ?

## ಸೋಲಾರ್ ವಿದ್ಯುತ್ ಉತ್ಪಾದನೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೨೧೧ (೧೦೪೦) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೋಲಾರ್‌ನಿಂದ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ಯಾವಾಗಿನಿಂದ ಜಾರಿಗೆ ಬಂದಿದೆ ;

(ಆ) ಸದರಿ ಯೋಜನೆಯಡಿ ಎಷ್ಟು ಜನ ರೈತರಿಗೆ ಕೃಷಿ ಜಮೀನಿನಲ್ಲಿ ಸೋಲಾರ್‌ನಿಂದ ವಿದ್ಯುತ್ (೦.೫ ಮೆಗಾವ್ಯಾಟ್‌ನಿಂದ ೧ ಮೆಗಾವ್ಯಾಟ್ ಅಥವಾ ಹೆಚ್ಚಿಗೆ) ಉತ್ಪಾದನೆ ಮಾಡಲು ಪಿ.ಪಿ.ಎ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ಕೊಡುವುದು)

(ಇ) ಪಿ.ಪಿ.ಎ ನೀಡಿದ ದಿನಾಂಕದಿಂದ ಇಲ್ಲಿಯವರೆಗೆ ಎಷ್ಟು ಜನ ರೈತರು ಈ ಪಿ.ಪಿ.ಎ ಯನ್ನು ಕಾರ್ಯಗತಗೊಳಿಸಿದ್ದಾರೆ ; ಉಳಿದ ಕಾಮಗಾರಿಗಳು ಯಾವ ಹಂತದಲ್ಲಿವೆ ; (ವಿವರವಾಗಿ ರೈತರ ಹೆಸರು, ವಿಳಾಸದೊಂದಿಗೆ ಮಾಹಿತಿ ಕೊಡುವುದು)

(ಈ) ಟ್ರೈಪಾರ್ಟಿ ಕರಾರು ಅಂದರೇನು ; ಪಿ.ಪಿ.ಎ ಪಡೆದ ರೈತರು ಟ್ರೈಪಾರ್ಟಿ ಕರಾರು ಮಾಡಿಕೊಳ್ಳಬಹುದೇ ; (ವಿವರವಾದ ಮಾಹಿತಿ ನೀಡುವುದು)

(ಉ) ಕೃಷಿ ಜಮೀನಿನಲ್ಲಿ ಸೋಲಾರ್ ಉತ್ಪಾದನೆ ಮಾಡುವ ರೈತರಿಗೆ ಸರ್ಕಾರವು ನೀಡುತ್ತಿರುವ ರಿಯಾಯಿತಿ ಹಾಗೂ ವಿಶೇಷ ಸೌಲಭ್ಯಗಳೇನು ;

(ಊ) ಈ ಯೋಜನೆ ನಿಧಾನ ಗತಿಯಲ್ಲಿ ಸಾಗಲು ಕಾರಣಗಳೇನು ?

## ಸಾರ್ವಜನಿಕ ಉದ್ದಿಮೆಗಳ ಆಡಳಿತ ನಿರ್ವಹಣೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೨೧೨ (೧೦೪೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳೆಷ್ಟು ; ಅವುಗಳನ್ನು ನಿಯಂತ್ರಿಸುವ ಆಡಳಿತ ಇಲಾಖೆಗಳಾವುವು ; (ವಿವರವಾಗಿ ಆಡಳಿತ ಇಲಾಖಾವಾರು ಮಾಹಿತಿ ಕೊಡುವುದು)

(ಆ) ಸಾರ್ವಜನಿಕ ಉದ್ದಿಮೆಗಳಲ್ಲಿ ಆಡಳಿತ ಇಲಾಖೆಗಳಿಗೆ ಇರುವ ಅಧಿಕಾರಗಳೇನು ; (ವಿವರವಾಗಿ ಆಡಳಿತ ಹಾಗೂ ಇತರ ಅಧಿಕಾರಿಗಳೊಂದಿಗೆ ಮಾಹಿತಿ ಕೊಡುವುದು)

(ಇ) ನಿಗಮದ ನೇಮಕಾತಿ ನಿಯಮಗಳನ್ನು ಆಡಳಿತ ಇಲಾಖೆಯು ಅನುಮೋದಿಸಬೇಕೆ ಅಥವಾ ಬೇಡವೇ ;

(ಈ) ಸಾರ್ವಜನಿಕ ಉದ್ದಿಮೆಗಳು ಯಾವ ಯಾವ ವಿಷಯಗಳಲ್ಲಿ ಆಡಳಿತ ಇಲಾಖೆಯ ಅನುಮೋದನೆ ಪಡೆಯಬೇಕಾಗಿರುತ್ತದೆ? (ವಿವರವಾದ ಮಾಹಿತಿ ಕೊಡುವುದು)

## ಪಶು ಚಿಕಿತ್ಸಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೨೧೩ (೧೦೨೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಶು ಆಸ್ಪತ್ರೆ ಹಾಗೂ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು ; (ಗ್ರಾಮವಾರು ವಿವರ ನೀಡುವುದು)

(ಆ) ಈ ಪಶು ಆಸ್ಪತ್ರೆ ಹಾಗೂ ಚಿಕಿತ್ಸಾಲಯಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಇ) ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ;

(ಈ) ಈ ಜಿಲ್ಲೆಗಳಲ್ಲಿ ಯಾವ ಪಶು ಚಿಕಿತ್ಸಾಲಯುಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಉದ್ದೇಶಿಸಿದೆ ; ಈ ಕುರಿತು ಸರ್ಕಾರ ಯಾವಾಗ ಆದೇಶ ಹೊರಡಿಸಲಿದೆ ?

## ಟೋಲ್ ಸಂಗ್ರಹಣೆಯಿಂದ ತೊಂದರೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೧೪ (೧೦೩೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರಾಜ್ಯ ಹೆದ್ದಾರಿ ಮತ್ತು ರಾಷ್ಟ್ರೀಯ ಹೆದ್ದಾರಿಗಳಲ್ಲಿ ವಾಹನ ಸವಾರರಿಂದ ಟೋಲ್ ಸಂಗ್ರಹ ಮಾಡುತ್ತಿರುವ ಏಜೆನ್ಸಿಗಳು ಯಾವುವು ;

(ಆ) ಶನಿವಾರ, ಭಾನುವಾರ ಮತ್ತು ರಜಾದಿನಗಳಲ್ಲಿ ಹೆಚ್ಚು ಜನ ವಾಹನಗಳಲ್ಲಿ ಓಡಾಡುತ್ತಿದ್ದು, ಟೋಲ್ ಸಂಗ್ರಹಕ್ಕಾಗಿ ಗಂಟೆಗಟ್ಟಲೆ ವಾಹನಗಳನ್ನು ನಿಲ್ಲಿಸುತ್ತಿರುವುದರಿಂದ ಪ್ರಯಾಣಿಕರಿಗೆ ಅದರಲ್ಲೂ ಮುಖ್ಯವಾಗಿ ಹೆಂಗಸರು ಮಕ್ಕಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕನಿಷ್ಠ ಶನಿವಾರ–ಭಾನುವಾರ ಮುಂತಾದ ರಜಾ ದಿನಗಳಲ್ಲಾದರೂ ಟೋಲ್ ಸಂಗ್ರಹಣೆಯಿಂದ ವಿನಾಯಿತಿ ನೀಡಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಾಗುವುದೇ ?

## ಎ.ಪಿ.ಎಂ.ಸಿ ಮಳಿಗೆಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೧೫ (೧೦೩೯) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಎ.ಪಿ.ಎಂ.ಸಿ ಮಳಿಗೆಗಳ ಸಂಖ್ಯೆ ಎಷ್ಟು ; ಸದರಿ ಮಳಿಗೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದು ನಿಜವೆ ; ಇದ್ದಲ್ಲಿ, ಇದರ ನಿವಾರಣೆಗೆ ಕೈಗೊಂಡಿರುವ ಕ್ರಮಗಳೇನು ;

(ಆ) ಮಳಿಗೆಗಳನ್ನು ಹಂಚಿಕೆ ಮಾಡುವಾಗ ಅನುಸರಿಸುವ ಮಾನದಂಡಗಳೇನು ; ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗಗಳವರಿಗೆ ಮೀಸಲಾತಿ ನೀಡಲಾಗುವುದೆ ;

(ಇ) ಎ.ಪಿ.ಎಂ.ಸಿ ಗಳಿಗೆ ತರುವ ತರಕಾರಿ, ಹೂವು, ಹಣ್ಣು ಮುಂತಾದ ತೋಟಗಾರಿಕಾ ಉತ್ಪನ್ನಗಳ ರೈತರಿಗೆ ಕಲ್ಪಿಸಿರುವ ಸೌಲಭ್ಯಗಳೇನು?

## ಕೃಷಿ ಭೂಮಿ ಬಳಕೆಯ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೧೬ (೧೦೩೮) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿ ಭೂಮಿಯನ್ನು ಗ್ರಾಮೀಣ ಪ್ರದೇಶವು ಸೇರಿದಂತೆ ಅನೇಕ ಕಡೆಗಳಲ್ಲಿ ಖಾಸಗಿಯವರು ನಿವೇಶನ ಮಾಡಲು ಉಪಯೋಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದ ಕೃಷಿ ಬಳಕೆಗೆ ತೊಂದರೆಯಾಗಿ ಆಹಾರ ಧಾನ್ಯಗಳ ಉತ್ಪಾದನೆಗೆ ಧಕ್ಕೆಯಾಗುವುದಿಲ್ಲವೆ ; ಇದನ್ನು ತಡೆಗಟ್ಟಲು ಸರ್ಕಾರ ಪ್ರಯತ್ನ ಮಾಡುತ್ತದೆಯೆ ;

(ಇ) ಈ ನಿಟ್ಟಿನಲ್ಲಿ ಸರ್ಕಾರ ಯಾವ ರೀತಿ ಕಾನೂನು ಕ್ರಮ ಕೈಗೊಂಡಿದೆ?

## ರಸಗೊಬ್ಬರ ಮತ್ತು ಕೀಟನಾಶಕಗಳ ಔಷಧಿ ಅಂಗಡಿಗಳ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೧೭ (೯೭೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಿಂದ ರಸಗೊಬ್ಬರ ಮತ್ತು ಕೀಟನಾಶಕ ಔಷಧಿಗಳ ಅಂಗಡಿಗಳನ್ನು ತೆರೆಯಲು ಅಳವಡಿಸಲಾಗಿರುವ ನಿಯಮಗಳೇನು ಹಾಗೂ ಸದರಿ ಅಂಗಡಿಗಳನ್ನು ತೆರೆಯಲು ಮಾಲೀಕರಿಗೆ ನಿಗಧಿಪಡಿಸಲಾದ ವಿದ್ಯಾರ್ಹತೆಗಳೇನು ; (ವಿವರ ನೀಡುವುದು)

(ಆ) ರಸಗೊಬ್ಬರ ಮತ್ತು ಕೀಟನಾಶಕ ಔಷಧಿಗಳಲ್ಲಿ ರೈತರು ಕೃಷಿ ಇಲಾಖೆಯು ಅಧಿಕಾರಿಗಳು ಮತ್ತು ಇನ್ನಿತರ ಕೃಷಿ ವಿಸ್ತರಣಾಧಿಕಾರಿಗಳ ಮಾರ್ಗದರ್ಶನದಂತೆ ಹಾಗೂ ಅವರು ನೀಡಲ್ಪಡುವ ಅಧಿಕೃತ ಚೀಟಿ ಮೇರೆಗೆ ರಸಗೊಬ್ಬರ ಮತ್ತು ಕೀಟನಾಶಕ ವಸ್ತುಗಳನ್ನು ಪಡೆಯಬೇಕು, ಆದರೆ ರೈತರು ನೇರವಾಗಿ ಕೃಷಿ ಚಟುವಟಿಕೆಗಳಿಗೆ ಬೇಕಾದ ರಸಗೊಬ್ಬರ ಮತ್ತು ಕೀಟನಾಶಕ ಔಷಧಿಗಳನ್ನು ನೇರವಾಗಿ ಖರೀದಿಸಿ ಕೃಷಿ ಚಟುವಟಿಕೆಗಳಿಗೆ ಬಳಸುತ್ತಿರುವುದರಿಂದ ಬೆಳೆದಿರುವ ವಸ್ತುಗಳು ಹಾಳಾಗುತ್ತಿರುವ ಹಾಗೂ ಬೆಳೆ ನಾಶಕ್ಕೂ ಕಾರಣವಾಗಿದ್ದು, ರೈತರು ಆತ್ಮಹತ್ಯೆ ಮಾಡಿಕೊಳ್ಳುವಂತ ಪರಿಸ್ಥಿತಿ ಬಂದಿರುತ್ತದೆ ; ಈ ಬಗ್ಗೆ ಇಲಾಖೆಯು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಬಗ್ಗೆ ರಾಜ್ಯಾದ್ಯಂತ ಕೃಷಿ ಇಲಾಖೆಯ ಅಧಿಕಾರಿಗಳು ರೈತರು ರಸಗೊಬ್ಬರ ಮತ್ತು ಕೀಟನಾಶಕ ಔಷಧಿಗಳನ್ನು ಯಾವ ರೀತಿ ಬಳಸಬೇಕು ಮತ್ತು ಈ ಬಗ್ಗೆ ಎಚ್ಚರಿಕೆ ಹೇಗೆ ವಹಿಸಬೇಕೆಂಬ ಬಗ್ಗೆ ರೈತರು ಮತ್ತು ಸ್ಥಳೀಯ ಕೃಷಿ ಇಲಾಖೆ ಅಧಿಕಾರಿಗಳು ಸಂವಾದ ಕಾರ್ಯಕ್ರಮಗಳನ್ನು ನಡೆಸುತ್ತಿದ್ದಾರೆಯೇ ? (ರಾಜ್ಯಾದ್ಯಂತ ಸಂವಾದ ಕಾರ್ಯಕ್ರಮ ನಡೆಸಿರುವ ವಿವರ ನೀಡುವುದು)

## ಮಲ್ಲಿಗೆ ಹೂವಿನ ಕೃಷಿಯನ್ನು ಪ್ರೋತ್ಸಾಹಿಸುವ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೨೧೮ (೯೮೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಲ್ಲಿಗೆ ಹೂವಿನ ಕೃಷಿಯನ್ನು ಪ್ರೋತ್ಸಾಹಿಸಲು ಇಲಾಖೆ ಕೈಗೊಂಡ ಕ್ರಮಗಳೇನು ;

(ಆ) ಮಲ್ಲಿಗೆ ಕೃಷಿಯು ಲಾಭಾದಾಯಕವಾಗಿದ್ದು, ಹೆಚ್ಚು ಬೇಡಿಕೆಯಿರುವ ಕೃಷಿಯಾಗಿದ್ದರೂ ಇದನ್ನು ಪ್ರೋತ್ಸಾಹಿಸಲು ಇಲಾಖೆ ಯಾವುದೇ ನಿರ್ದಿಷ್ಟ ಯೋಜನೆಗಳನ್ನು ಹಾಕಿಕೊಳ್ಳದಿರಲು ಕಾರಣ ಏನು ;

(ಇ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಮಲ್ಲಿಗೆ ಕೃಷಿ ಬೆಳೆಸಲಾಗುತ್ತಿದೆ; ಮತ್ತು ಎಷ್ಟು ಹೆಕ್ಟೇರ್ ಎಕರೆ ಪ್ರದೇಶದಲ್ಲಿ ಮಲ್ಲಿಗೆ ಕೃಷಿ ಬೆಳೆಸಲಾಗುತ್ತಿದೆ ;

(ಈ) ಮಲ್ಲಿಗೆ ಕೃಷಿಗೆ ಮಾರುಕಟ್ಟೆ ಒದಗಿಸಲು ಮಾರುಕಟ್ಟೆಯಲ್ಲಿ ದರನಿಗಧಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ ; ಮಲ್ಲಿಗೆ ಕೃಷಿಗೆ ರೋಗ ತಗುಲಿದಾಗ ಇಲಾಖೆ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಸೋಲಾರ್ ರೋಪ್‌ಟಾಪ್ ಮೇಲ್ಛಾವಣಿ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೨೧೯ (೯೮೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸೋಲಾರ್ ರೋಪ್‌ಟಾಪ್ [Solar Rooptop] ಮೇಲ್ಛಾವಣಿ ಘಟಕ ಅಳವಡಿಸಲು ನವೀಕರಿಸಲಾದ ಎಮ್.ಎನ್.ಆರ್.ಇ

ವತಿಯಿಂದ ಸಬ್ಸಿಡಿ ನೀಡಲು ಸತಾಯಿಸುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು ;

(ಆ) ಸೌರಶಕ್ತಿ ಮೇಲ್ಚಾವಣಿ ಘಟಕಗಳನ್ನು ಪ್ರೋತ್ಸಾಹಿಸಲು ಇಲಾಖೆಯು ಕೈಗೊಂಡಿರುವ ಕ್ರಮಗಳೇನು ; ಕ್ರಮ ಕೈಗೊಂಡಿದ್ದರೆ, ಫಲಿತಾಂಶ ಏನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಜಿಲ್ಲಾವಾರು ಅಳವಡಿಸಿರುವ ಸೋಲಾರ್ ಮೇಲ್ಚಾವಣಿ ಘಟಕಗಳ ಸಂಖ್ಯೆ ಎಷ್ಟು ; ಉತ್ಪಾದಿಸುವ ವಿದ್ಯುತ್ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಸೋಲಾರ್ ಮೇಲ್ಚಾವಣಿ ಘಟಕಗಳನ್ನು ಸ್ಥಾಪಿಸಲು ಸಾಲಗಳನ್ನು ಒದಗಿಸಲು ಬ್ಯಾಂಕುಗಳು ಹಿಂಜರಿಯುವುದರಿಂದ ಘಟಕಗಳ ಸ್ಥಾಪನೆಗಳ ಹಿನ್ನಡೆ ಉಂಟಾಗಿದ್ದು, ಈ ಬಗ್ಗೆ ಕೈಗೊಂಡ ಕ್ರಮಗಳೇನು ? (ವಿವರ ಒದಗಿಸುವುದು)

## ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಕೊಯಿಲಾದಲ್ಲಿ ಪಶುವೈದ್ಯಕೀಯ ಕಾಲೇಜು ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೨೨೦ (೯೮೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಕೊಯಿಲಾದಲ್ಲಿ ಪಶುವೈದ್ಯಕೀಯ ಕಾಲೇಜಿಗೆ ಗುದ್ದಲಿ ಪೂಜೆ ನಡೆದಿದ್ದು, ಕಾಮಗಾರಿ ಪ್ರಾರಂಭವಾಗುವುದು ಯಾವಾಗ ;

(ಆ) ಯಾವ ಕಾಲಮಿತಿಯೊಳಗೆ ಕಾಲೇಜನ್ನು ಪ್ರಾರಂಭಿಸಲಾಗುವುದು; ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶ ನೀಡಲಾಗುವುದು ; (ವಿವರ ನೀಡುವುದು)

(ಇ) ರಾಜ್ಯದ ಪಶುವೈದ್ಯಕೀಯ ಕಾಲೇಜುಗಳಲ್ಲಿ ಶಿಕ್ಷಣ ತರಬೇತಿ ಪಡೆಯುತ್ತಿರುವವರ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ;

(ಈ) ರಾಜ್ಯದಲ್ಲಿ ಪಶುವೈದ್ಯಕೀಯ ಪದವೀಧರರ ಕೊರತೆ ಇದೆಯೇ; ಇದ್ದಲ್ಲಿ, ಇಲಾಖೆ ಈ ಬಗ್ಗೆ ಕ್ರಮ ಕೈಗೊಂಡಿದೆಯೇ ?

## ಕರಾವಳಿ ಪ್ರದೇಶದಲ್ಲಿ ಭತ್ತದ ಕೃಷಿ ಬೇಡಿಕೆ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೨೨೧ (೯೮೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಪ್ರದೇಶಗಳಲ್ಲಿ ಭತ್ತದ ಕೃಷಿಗೆ ಬೇಡಿಕೆ ಇದ್ದರೂ ಭೂಮಿ ಫಲವತ್ತಾಗಿದ್ದರೂ ಭತ್ತದ ಕೃಷಿ ನಶಿಸಿ ಹೋಗುತ್ತಿರುವ ಬಗ್ಗೆ ಇಲಾಖೆ ಕೈಗೊಂಡ ಕ್ರಮವೇನು ;

(ಆ) ಭತ್ತದ ಬೆಳೆ ಬೆಳೆಸಲು ರೈತರಿಗೆ ಇಲಾಖೆ ನೀಡುತ್ತಿರುವ ಪ್ರೋತ್ಸಾಹಗಳೇನು ; (ವಿವರ ನೀಡುವುದು)

(ಇ) ಭತ್ತ ಬೆಳೆಯುತ್ತಿರುವ ಪ್ರದೇಶಗಳಲ್ಲಿ ನೀರಾವರಿ ಯೋಜನೆಗಳನ್ನು ಕೈಗೊಳ್ಳಲು ಇಲಾಖೆ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದರೆ, ವಿವರ ನೀಡುವುದು ;

(ಈ) ಭತ್ತದ ಕೃಷಿಗೆ ಬಿತ್ತನೆ ಬೀಜ ಮತ್ತು ಹೆಚ್ಚು ಇಳುವರಿ ಕೊಡುವ ಬಗ್ಗೆ ರೈತರಿಗೆ ತರಬೇತಿಗಳನ್ನು ನೀಡಲಾಗಿದೆಯೇ ? (ನೀಡಲಾಗಿದ್ದರೆ ವಿವರ ನೀಡುವುದು)

## ಶಿರಾಡಿ ಘಾಟ್ ೨ನೇ ಹಂತದ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ' ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೨೨೨ (೯೮೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿರಾಡಿ ಘಾಟ್ ೨ನೇ ಹಂತದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳದೆ ಇರುವುದರಿಂದ ರಸ್ತೆಯಲ್ಲಿ ಸಂಚರಿಸಲು ಅಸಾಧ್ಯವಾದ ಪರಿಸ್ಥಿತಿ ಉಂಟಾಗಿದ್ದು, ಕಾಮಗಾರಿಗಳನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಆ) ೨ನೇ ಹಂತದ ಕಾಮಗಾರಿಗೆ ಮೀಸಲಿಟ್ಟ ಅನುದಾನ ಎಷ್ಟು ; ಕಾಮಗಾರಿ ಪ್ರಾರಂಭಗೊಂಡರೆ ಸಂಚಾರಕ್ಕೆ ಪರ್ಯಾಯ ವ್ಯವಸ್ಥೆಯನ್ನು ಮಾಡಲಾಗಿದೆಯೇ ; ಮಾಡಲಾಗದಿದ್ದರೆ, ವಿವರ ನೀಡುವುದು ;

(ಇ) ಶಿರಾಡಿ ಘಾಟ್‌ನಲ್ಲಿ ಸುರಂಗ ಮಾರ್ಗಗಳ ಯೋಜನೆಯು ಯಾವ ಹಂತದಲ್ಲಿದೆ ; ಮತ್ತು ಯಾವಾಗ ಪ್ರಾರಂಭವಾಗುವುದು ?

## ಸೋಲಾರ್ ವಿದ್ಯುತ್ ಉತ್ಪಾದನೆ ಬಗ್ಗೆ

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೨೨೩ (೧೦೦೧) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ವಿಧಾನಸೌಧ, ವಿಕಾಸಸೌಧ, ಶಾಸಕರ ಭವನ, ಇತ್ಯಾದಿಗಳ ಕಟ್ಟಡಗಳ ಮೇಲ್ಭಾಗದಲ್ಲಿ ಸೋಲಾರ ವಿದ್ಯುತ್ ಉತ್ಪಾದನೆ ಮಾಡುವ ಉದ್ದೇಶ ಸರ್ಕಾರ ಹೊಂದಿದೆಯೇ ; ಇದ್ದಲ್ಲಿ, ರೂಪುರೇಷೆಗಳೇನು ; (ಪ್ರಗತಿಯ ಮಾಹಿತಿ ನೀಡುವುದು)

(ಆ) ಈ ಕಟ್ಟಡಗಳಲ್ಲಿ ಹಾಲಿ ಬಳಕೆಯಾಗುತ್ತಿರುವ ಅಂದಾಜು ವಿದ್ಯುತ್ ಪ್ರಮಾಣ ಎಷ್ಟು ; ಇದಕ್ಕಾಗಿ ಸರ್ಕಾರ ಭರಿಸುತ್ತಿರುವ ವೆಚ್ಚವೆಷ್ಟು; (ಕಟ್ಟಡಗಳವಾರು ವಿವರ ನೀಡುವುದು)

(ಇ) ಸೋಲಾರ್ ವಿದ್ಯುತ್ ಉತ್ಪಾದನೆ ನಂತರ ಸರ್ಕಾರಕ್ಕೆ ಎಷ್ಟು ವೆಚ್ಚ ಉಳಿತಾಯವಾಗಲಿದೆ ;

(ಈ) ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳಿಗೆ ಅಂತರರಾಷ್ಟ್ರೀಯ ಮಟ್ಟದ ಲೇಜರ್ ಲೈಟಿಂಗ್ ವ್ಯವಸ್ಥೆ ಮಾಡಿ, ವಾರದ ಕೊನೆಯ ದಿನಗಳಲ್ಲಿ ಪ್ರವಾಸಿಗರನ್ನು ಆಕರ್ಷಿಸಲು ಸರ್ಕಾರ ಚಿಂತಿಸುವುದೇ?

## ಪಶು ಚಿಕಿತ್ಸಾಲಯ ಸ್ಥಾಪಿಸುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೪ (೯೩೮) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯಾದ್ಯಂತ ಇರುವ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು ;

(ಆ) ೨೦೧೭–೧೮ನೇ ಸಾಲಿನಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ತೆರೆಯಲಾಗುವುದು ? (ಜಿಲ್ಲಾವಾರು ಮಾಹಿತಿ ಒದಗಿಸುವುದು)

## ಗೋಶಾಲೆಯನ್ನು ತೆರೆದಿರುವ ಬಗ್ಗೆ ಮಾಹಿತಿ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೫ (೧೦೧೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಭೀಕರ ಬರಗಾಲ ಕಾಣಿಸಿಕೊಂಡಿದ್ದು ದನಕರುಗಳಿಗೆ ಮೇವು ಒದಗಿಸಲು ಇದುವರೆವಿಗೂ ಎಷ್ಟು ಗೋಶಾಲೆಗಳನ್ನು ತೆರೆಯಲಾಗಿದೆ ;

(ಆ) ಹಾಗೆಯೇ ತುಮಕೂರು ಜಿಲ್ಲೆಯಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಗೋಶಾಲೆಗಳನ್ನು ತೆರೆಯಲಾಗಿದೆ ; (ಮಾಹಿತಿ ನೀಡುವುದು)

(ಇ) ತೆರೆದಿರುವ ಪ್ರತಿಯೊಂದು ಗೋಶಾಲೆಯಲ್ಲಿ ರೈತರು ಎಷ್ಟು ದನಕರುಗಳನ್ನು ಬಿಟ್ಟಿದ್ದಾರೆ. ಆ ದನಕರುಗಳಿಗೆ ಬೇಕಾಗುವ ಮೇವು ನೀರನ್ನು ಒದಗಿಸಲಾಗುತ್ತಿದೆಯೇ ;

(ಈ) ತೆರೆದಿರುವ ಗೋಶಾಲೆಯಲ್ಲಿ ಅಲ್ಲಿನ ದನಕರುಗಳ ಸಂಖ್ಯೆಗೆ ಅನುಗುಣವಾಗಿ ಎಷ್ಟು ದಿವಸಗಳಿಗೆ ಮೇವನ್ನು ಎಷ್ಟು ಪ್ರಮಾಣದಲ್ಲಿ ಸಂಗ್ರಹಿಸಿಡಲಾಗಿದೆ ; (ತಿಳಿಸುವುದು)

(ಉ) ರಾಜ್ಯದಲ್ಲಿ ಗೋಶಾಲೆಗಳನ್ನು ತೆರೆಯಲು ಇಲ್ಲಿಯವರೆಗೆ ಖರ್ಚು ಮಾಡಿರುವ ಹಣವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಊ) ತುಮಕೂರು ಜಿಲ್ಲೆಯಲ್ಲಿ ತೆರೆದಿರುವ ಗೋಶಾಲೆಗಳಿಗೆ (ಪ್ರತಿಯೊಂದಕ್ಕೂ) ಖರ್ಚು ಮಾಡಿರುವ ಹಣವೆಷ್ಟು ? (ವಿವರವಾಗಿ ಮಾಹಿತಿ ನೀಡುವುದು)

## ರಾಜ್ಯದ ಸ್ಥಳೀಯ ಸಂಸ್ಥೆಗೆ ೨೦೧೬–೧೭ನೇ ಸಾಲಿನಲ್ಲಿ ಬಿಡುಗಡೆ ಮಾಡಿರುವ ಅನುದಾನದ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೬ (೧೦೧೨) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪುರಸಭೆ ಮತ್ತು ಸ್ಥಳೀಯ ಸಂಸ್ಥೆಗಳಿಗೆ ವಿವಿಧ ಯೋಜನೆಗಳಡಿಯಲ್ಲಿ ೨೦೧೬–೧೭ನೇ ಸಾಲಿಗೆ ಒದಗಿಸಲಾದ ಅನುದಾನವೆಷ್ಟು ;

(ಆ) ಹಾಗೆಯೇ ತುಮಕೂರು ಜಿಲ್ಲೆಯಲ್ಲಿರುವ ಪುರಸಭೆ/ನಗರಸಭೆ/ ಪಟ್ಟಣ ಪಂಚಾಯಿತಿಗಳಿಗೆ ವಿವಿಧ ಯೋಜನೆಯಡಿಯಲ್ಲಿ ೨೦೧೬-೧೭ನೇ ಸಾಲಿನಲ್ಲಿ ಒದಗಿಸಿರುವ ಅನುದಾನವೆಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಅನುದಾನವನ್ನು ಒದಗಿಸಲು ಬಾಕಿ ಇರುವ ಮೊತ್ತವನ್ನು ಆ ಸಂಸ್ಥೆಗಳಿಗೆ ಯಾವಾಗ ಒದಗಿಸಲಾಗುವುದು ; (ಪ್ರತ್ಯೇಕವಾಗಿ ಪ್ರತಿಯೊಂದಕ್ಕೂ ವಿವರ ನೀಡುವುದು)

(ಈ) ಸರಿಯಾದ ಸಮಯಕ್ಕೆ ಅನುದಾನವನ್ನು ನೀಡದೆ ಇರುವುದರಿಂದ ಕಾಮಗಾರಿಗಳನ್ನು ಪೂರ್ಣಗೊಳಿಸದಿರುವುದರಿಂದ ಅಲ್ಲಿನ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಉ) ಪ್ರಸ್ತುತ ಗಂಭೀರವಾದ ಬರಗಾಲ ಇರುವುದರಿಂದ ತುಮಕೂರು ಜಿಲ್ಲೆಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿಗಾಗಿ ತೀವ್ರ ತರಹ ತೊಂದರೆ ಇರುವುದರಿಂದ ಮುಂಜಾಗ್ರತಾ ಕ್ರಮವಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; ತುಮಕೂರು ಜಿಲ್ಲೆಗೆ ಸಂಬಂಧಿಸಿದಂತೆ ಸ್ಥಳೀಯ ಸಂಸ್ಥೆಗಳ ವಿವರ ನೀಡುವುದು?

## ರಾಜ್ಯದಲ್ಲಿರುವ ಗಾರ್ಮೆಂಟ್ಸ್‌ಗಳ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೨೭ (೧೦೫೫) ಮಾನ್ಯ ಕಾರ್ಮಿಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಒಟ್ಟು ಗಾರ್ಮೆಂಟ್ಸ್ ಫ್ಯಾಕ್ಟರಿಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ತುಮಕೂರು ಜಿಲ್ಲೆಯಲ್ಲಿರುವ ಗಾರ್ಮೆಂಟ್ಸ್‌ಗಳ ಸಂಖ್ಯೆ ಎಷ್ಟು; ಅವು ಯಾವ ಯಾವ ತಾಲ್ಲೂಕಿನಲ್ಲಿವೆ ; (ಮಾಲೀಕರ/ಸಂಸ್ಥೆಯ ಹೆಸರು ವಿಳಾಸ, ದೂರವಾಣಿ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು)

(ಇ) ಅಲ್ಲಿ ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು) ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುತ್ತಿರುವ ನೌಕರರಿಗೆ ಇಂದಿನ ಮಾರುಕಟ್ಟೆ ಧಾರಣೆಯ ಅನುಸಾರ ಮತ್ತು ಸರ್ಕಾರದ ಮಾರ್ಗಸೂಚಿಗಳ ಪ್ರಕಾರ ವೇತನವನ್ನು ನೀಡಲಾಗುತ್ತಿದೆಯೇ; (ಮಾಹಿತಿ ನೀಡುವುದು)

(ಈ) ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುವ ನೌಕರರಿಗೆ ನೀಡಿರುವ ಮೂಲಭೂತ ಸೌಲಭ್ಯಗಳು ಯಾವುವು ; (ವಿವರ ನೀಡುವುದು)

(ಉ) ಗಾರ್ಮೆಂಟ್ಸ್‌ಗಳಲ್ಲಿ ಕೆಲಸ ಮಾಡುವ ಮಹಿಳಾ ನೌಕರರಿಗೆ ವಿಶೇಷವಾಗಿ ನೀಡಿರುವ ಸೌಲಭ್ಯಗಳು ಮತ್ತು ಸವಲತ್ತುಗಳು ಯಾವುವು ; (ವಿವರ ನೀಡುವುದು)

(ಊ) ಸರ್ಕಾರದ ಮಾರ್ಗಸೂಚಿಯಂತೆ ವೇತನ ಮತ್ತು ಇತರೆ ಸೌಲಭ್ಯಗಳನ್ನು ನೀಡದಿರುವ ಗಾರ್ಮೆಂಟ್ಸ್‌ಗಳ ಮಾಲೀಕರ ಮೇಲೆ ತೆಗೆದುಕೊಂಡಿರುವ ಕ್ರಮಗಳಾವುವು ?

## ೨೦೧೬–೧೭ನೇ ಪಶು ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೮ (೯೧೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೨೦೧೭ನೇ ಸಾಲಿನಲ್ಲಿ ಪಶು ಭಾಗ್ಯ ಯೋಜನೆಯಡಿ ಇಲಾಖೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; ಹಾಗೂ ಆಯಾ ಜಿಲ್ಲೆಗಳಿಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು; (ವಿವರವಾದ ಮಾಹಿತಿ ನೀಡುವುದು)

(ಆ) ತುಮಕೂರು ಜಿಲ್ಲೆಗೆ ಪಶು ಭಾಗ್ಯ ಯೋಜನೆಯಡಿ ಬಿಡುಗಡೆ ಮಾಡಿರುವ ಅನುದಾನದಲ್ಲಿ ರೈತರು ಮತ್ತು ಅತಿ ಸಣ್ಣ ರೈತರಿಗೆ ಮತ್ತು ಭೂರಹಿತ ಫಲಾನುಭವಿಗಳಿಗೆ ಯಾವ ಯಾವ ಪ್ರಯೋಜನವನ್ನು ಕಲ್ಪಿಸಿಕೊಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ನಂಜುಂಡಪ್ಪನವರ ವರದಿಯಂತೆ ತುಮಕೂರು ಜಿಲ್ಲೆಯಲ್ಲಿ ಅತಿ ಹಿಂದುಳಿದ ತಾಲ್ಲೂಕುಗಳಿಗೆ ವಿಶೇಷ ಅಭಿವೃದ್ಧಿ ಯೋಜನೆಯಡಿ ಹಾಗೂ ಆರ್.ಕೆ.ವಿವೈ. ಕಾರ್ಯಕ್ರಮದಡಿ ಗುರುತಿಸಿರುವ ಫಲಾನುಭವಿಗಳ ಸಂಖ್ಯೆ ಎಷ್ಟು;

(ಈ) ಗುರಿತಿಸಿರುವ ಫಲಾನುಭವಿಗಳಿಗೆ ಎಷ್ಟು ಹಣವನ್ನು ಖರ್ಚು ಮಾಡಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ; (ವಿವರ ನೀಡುವುದು)

(ಉ) ಅಮೃತ ಯೋಜನೆಯಡಿ ತುಮಕೂರು ಜಿಲ್ಲೆಗೆ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ; ಎಷ್ಟು ಫಲಾನುಭವಿಗಳಿಗೆ ಅನುಕೂಲ ಮಾಡಿಕೊಡಲಾಗಿದೆ; ಹಾಗೂ ಈ ಸೌಲಭ್ಯಕ್ಕಾಗಿ ಖರ್ಚು ಮಾಡಿರುವ ಹಣವೆಷ್ಟು? (ವಿವರವಾದ ಮಾಹಿತಿ ನೀಡುವುದು)

## ತುಮಕೂರು ಜಿಲ್ಲೆ ಮಧುಗಿರಿಯಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೨೯ (೯೧೩) ಮಾನ್ಯ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ ಮಧುಗಿರಿಯಲ್ಲಿ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ ೨೩೪ರ ಪಕ್ಕದಲ್ಲಿ ಚರಂಡಿ ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ಪಟ್ಟಣದ ರಾಷ್ಟ್ರೀಯ ಹೆದ್ದಾರಿಯ ೨೩೪ರ ಪಕ್ಕದಲ್ಲೇ ಚರಂಡಿಯಲ್ಲಿ ನೀರು ಹರಿಯದೆ ತ್ಯಾಜ್ಯ ಶೇಖರಣೆಯಾಗಿ ನೀರಿನಲ್ಲಿ ಸೊಳ್ಳೆಗಳು ಶೇಖರಣೆಯಾಗಿ, ಸಾಂಕ್ರಾಮಿಕ ರೋಗಗಳು ಹರಡುತ್ತಿರುವುದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಚರಂಡಿ ಕಾಮಗಾರಿಯನ್ನು ಅಪೂರ್ಣಗೊಳಿಸಿ, ಸಾಂಕ್ರಾಮಿಕ ರೋಗಗಳು ಹರಡಲು ಕಾರಣವಾಗಿರುವ ಜೆ.ಎಂ.ಸಿ.ಕಂಪನಿ ಮೇಲೆ ಸರ್ಕಾರ ತೆಗೆದುಕೊಂಡಿರುವ ಕಾನೂನು ರೀತಿಯ ಕ್ರಮಗಳೇನು? (ವಿವರ ನೀಡುವುದು)

## ಶಿರಾಡಿಘಾಟ್ ಸುರಂಗ ಮಾರ್ಗ ಯೋಜನೆ ಅನುಷ್ಠಾನದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೦ (೯೦೨) ಮಾನ್ಯ ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರಾವಳಿ ಜಿಲ್ಲೆ ಮತ್ತು ರಾಜ್ಯದ ರಾಜಧಾನಿಯ ನಡುವಿನ ಶಿರಾಡಿಘಾಟ್ ಸುರಂಗ ಮಾರ್ಗ ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿರುವುದು ನಿಜವೇ; (ಹೌದಾದಲ್ಲಿ, ಪ್ರಸ್ತಾವನೆ ಯಾವ ಹಂತದಲ್ಲಿದೆ, ವಿವರ ನೀಡುವುದು)

(ಆ) ಶಿರಾಡಿಘಾಟ್ ಸುರಂಗ ಮಾರ್ಗ ನಿರ್ಮಾಣದ ಸಮೀಕ್ಷಾ ವರದಿ ತಯಾರಿಸಲಾಗಿದೆಯೇ; ಶಿರಾಡಿ ಘಾಟ್ ಸುರಂಗ ನಿರ್ಮಾಣಕ್ಕೆ ಅಗತ್ಯವಿರುವ ಅನುದಾನವೆಷ್ಟು; ಯಾವ ರೀತಿಯಲ್ಲಿ ಅನುದಾನ ಒದಗಿಸಲಾಗುವುದು; (ಸಂಪೂರ್ಣ ವರದಿ ಹಾಗೂ ಸಮೀಕ್ಷೆಗೆ ಖರ್ಚಾದ ಅನುದಾನದ ಮತ್ತು ಸಂಸ್ಥೆಯ ವಿವರ ನೀಡುವುದು)

(ಇ) ಶಿರಾಡಿಘಾಟ್ ಸುರಂಗ ಮಾರ್ಗ ನಿರ್ಮಾಣದಿಂದ ರಾಜ್ಯದ ರಾಜಧಾನಿ ಮತ್ತು ಕರಾವಳಿ ಜಿಲ್ಲೆಗಳ ನಡುವಿನ ಪ್ರಮಾಣದ ಅವಧಿ ಕಡಿಮೆಯಾಗುವುದರೊಂದಿಗೆ, ಪ್ರವಾಸೋದ್ಯಮ ಮತ್ತು ವಾಣಿಜ್ಯ ಅಭಿವೃದ್ಧಿಗೆ ಪೂರಕವಾಗುವ ಅಂಶ ಸರ್ಕಾರದ ಗಮನಕ್ಕಿದೆಯೇ;

(ಈ) ಶಿರಾಡಿಘಾಟ್ ಸುರಂಗ ಮಾರ್ಗ ನಿರ್ಮಾಣದ ಯೋಜನೆಯನ್ನು ಸರ್ಕಾರ ಯಾವಾಗ ಕೈಗೆತ್ತಿಕೊಳ್ಳಲಿದೆ?

## ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೧ (೯೦೪) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳಲ್ಲಿ ಮಂಜೂರಾದ, ಖಾಲಿಯಿರುವ ಹುದ್ದೆಗಳೆಷ್ಟು;

(ಆ) ಒಟ್ಟು ಎಷ್ಟು ಹುದ್ದೆಗಳಲ್ಲಿ ಪ್ರಭಾರ ಅಧಿಕಾರಿಗಳನ್ನು ನಿಯೋಜನೆ ಮಾಡಲಾಗಿದೆ; ನಿಯೋಜನೆ ಮಾಡಲು ಇರುವ ಮಾನದಂಡ ಮತ್ತು ಅಧಿಕಾರ ಪ್ರತ್ಯಾಯೋಜನೆ ಹೊಂದಿರುವ ಅಧಿಕಾರಿಗಳಾರು; (ವಿವರ ನೀಡುವುದು)

(ಇ) ನಿಯಮ ಮೀರಿ ಉನ್ನತ ಹುದ್ದೆಗಳಿಗೆ ಅಧಿಕಾರಿಗಳನ್ನು ನಿಯೋಜನೆ ಮಾಡಿರುವುದು ನಿಜವೇ; ಎಷ್ಟು ಜನರನ್ನು ನಿಯಮ ಮೀರಿ ನಿಯೋಜನೆ ಮಾಡಲಾಗಿದೆ; (ನಿಯೋಜನೆಗೊಂಡ ಮತ್ತು ನಿಯೋಜನೆ ಆದೇಶ ಮಾಡಿರುವ ಅಧಿಕಾರಿಗಳ ವಿವರ ನೀಡುವುದು)

(ಈ) ವಿವಿಧ ಪೌರಾಡಳಿತ ಸ್ಥಳೀಯ ಸಂಸ್ಥೆಗಳಲ್ಲಿ ಖಾಲಿ ಹುದ್ದೆ ಇದ್ದಾಗ್ಯೂ ಅರ್ಹ ನೌಕರರಿಗೆ ಕಾಲಕಾಲಕ್ಕೆ ಪದೋನ್ನತಿ ನೀಡುವಲ್ಲಿ ವಿಳಂಬ ನೀತಿ ಅನುಸರಿಸಲು ಕಾರಣವೇನು; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಉ) ಪೌರಾಡಳಿತ ಸಂಸ್ಥೆಯಲ್ಲಿ ಖಾಲಿ ಹುದ್ದೆಗಳ ಭರ್ತಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು)

## ಕೃಷಿ ಇಲಾಖೆಯ ಖಾಲಿ ಹುದ್ದೆಗಳ ಮತ್ತು ಕಾರ್ಯಕ್ರಮ ಅನುಷ್ಠಾನದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೨ (೯೦೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಇಲಾಖೆಯಲ್ಲಿ ಮಂಜೂರಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಹೋಬಳಿ ಮಟ್ಟದಲ್ಲಿರುವ ರೈತ ಸಂಪರ್ಕ ಕೇಂದ್ರದಲ್ಲಿ ಕೃಷಿ ಅಧಿಕಾರಿ ಸಹಿತ ಅವರ ಸಹಾಯಕರಾಗಿ ಒಟ್ಟು ಎಷ್ಟು ಜನ ಸರ್ಕಾರಿ ಸಿಬ್ಬಂದಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ; (ಹೋಬಳಿವಾರು ಮಾಹಿತಿ ನೀಡುವುದು)

(ಇ) ಹೋಬಳಿ ಮಟ್ಟದ ರೈತ ಸಂಪರ್ಕ ಕೇಂದ್ರದಲ್ಲಿ ಸಿಬ್ಬಂದಿಗಳ ಕೊರತೆ ಇದ್ದು ಕೃಷಿ ಇಲಾಖೆಯ ಕಾರ್ಯಕ್ರಮಗಳು ಸಕಾಲದಲ್ಲಿ ಅನುಷ್ಠಾನವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹೋಬಳಿ ಮಟ್ಟದ ಕೃಷಿ ಅಧಿಕಾರಿಗಳಿಗೆ ಕ್ಷೇತ್ರ ಬೇಟಿಗಾಗಿ ವಾಹನ ವ್ಯವಸ್ಥೆಯನ್ನು ಮಾಡಲಾಗಿದೆಯೇ; ಮಾಡದೆ ಇದ್ದಲ್ಲಿ, ಪರ್ಯಾಯವಾಗಿ ಯಾವ ಕ್ರಮ ತೆಗೆದುಕೊಳ್ಳಲಾಗಿದೆ?

## ನಗರಸಭೆ, ಪುರಸಭೆ ಪಟ್ಟಣ ಪಂಚಾಯತಿಗಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೩ (೯೦೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‌ಗಳೆಷ್ಟು; ಅವು ಯಾವುವು;

(ಆ) ರಾಜ್ಯದಲ್ಲಿರುವ ಒಟ್ಟು ನಗರ ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳ ಸಂಖ್ಯೆ ಎಷ್ಟು; (ಪುರುಷ, ಮಹಿಳೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಪ್ರತಿನಿಧಿಗಳ ವಿವರ ನೀಡುವುದು)

(ಇ) ವಿವಿಧ ನಗರ ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳಿಗೆ ಪ್ರಸಕ್ತ ನೀಡುತ್ತಿರುವ ಗೌರವಧನವೆಷ್ಟು; ಗೌರವಧನ ನಿಗಧಿಗಿರುವ ಮಾನದಂಡವೇನು;

(ಈ) ನಗರ ಸ್ಥಳೀಯ ಸಂಸ್ಥೆಗಳ (ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್) ಪ್ರತಿನಿಧಿಗಳ ತರಬೇತಿ–ಸಾಮಾರ್ಥ್ಯಾಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು; ಕಳೆದ ೪ ವರ್ಷದಲ್ಲಿ ತರಬೇತಿ–ಸಾಮಾರ್ಥ್ಯಾಭಿವೃದ್ಧಿಗೆ ಸರ್ಕಾರ ಬಿಡುಗಡೆ ಮಾಡಿದ ಮತ್ತು ಖರ್ಚು ಮಾಡಿದ ಅನುದಾನವೆಷ್ಟು;

(ಉ) ಪೌರಾಡಳಿತ ಸಂಸ್ಥೆಗಳಲ್ಲಿ ಆಡಳಿತಾತ್ಮಕ ಸಮಸ್ಯೆಗಳು, ಪ್ರತಿನಿಧಿಗಳ ತರಬೇತಿ–ಸಾಮಾರ್ಥ್ಯಾಭಿವೃದ್ಧಿ ಹಾಗೂ ಕಾಯಿದೆಯಲ್ಲಿನ ಕೆಲವು ಪ್ರಕರಣಗಳನ್ನು ಪ್ರಸಕ್ತ ಕಾಲಘಟ್ಟಕ್ಕೆ ಅನುಗುಣವಾಗಿ ತಿದ್ದುಪಡಿಯ ಅಗತ್ಯತೆ ಕುರಿತು ಸಮಿತಿ ರಚನೆಯ ಬಗ್ಗೆ ಸರ್ಕಾರದ ನಿಲುವೇನು; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ನೀರಾ ಮತ್ತು ನೀರಾ ಉತ್ಪಾದನೆಗೆ ಪ್ರೋತ್ಸಾಹ ನೀಡುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೪ (೪೯೩) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಬಕಾರಿ ಕಾಯಿದೆಗೆ ತಿದ್ದುಪಡಿ ತಂದು ನೀರಾ ಮತ್ತು ತೆಂಗಿನ ಮೌಲ್ಯವರ್ಧಿತ ಉತ್ಪನ್ನಗಳಿಗೆ ಅನುಮತಿ ನೀಡಲಾಗಿದ್ದರೂ, ಇದುವರೆಗೂ ನಿಯಮಾವಳಿ ರೂಪಿಸದೆ ಇರುವುದಕ್ಕೆ ಕಾರಣಗಳೇನು;

(ಆ) ನೀರಾ ಪರಿಷ್ಕರಣೆ ಕಾರ್ಖಾನೆ ಆರಂಭಿಸುವವರಿಗೆ ಸರ್ಕಾರ ಯಾವ ಪ್ರೋತ್ಸಾಹಕ ಕ್ರಮಗಳನ್ನು ಕೈಗೊಂಡಿದೆ;

(ಇ) ತೆಂಗು ಅಭಿವೃದ್ಧಿ ಮಂಡಳಿಯಿಂದ "ನೀರಾ ಪರಿಷ್ಕರಣೆ" ಕಾರ್ಖಾನೆಗೆ ಎಷ್ಟು ಸಹಾಯಧನ ನೀಡಲಾಗುತ್ತಿದೆ;

(ಈ) ಪಕ್ಕದ ಕೇರಳ ರಾಜ್ಯದಲ್ಲಿ ಅಲ್ಲಿನ ರಾಜ್ಯ ಸರ್ಕಾರ ₹.೫೦.೦೦ ಲಕ್ಷ ಸಹಾಯಧನವನ್ನು "ನೀರಾ ಪರಿಷ್ಕರಣೆ" ಕಾರ್ಖಾನೆಗಳಿಗೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ರಾಜ್ಯದಲ್ಲಿ ತೆಂಗು ಬೆಳೆಗಾಗಿ ಎಷ್ಟು ಕಂಪನಿಗಳು ನೋಂದಣಿಗೊಂಡಿವೆ; ಅವು ಯಾವುವು;

(ಊ) ರಾಜ್ಯದಲ್ಲಿ ತೆಂಗು ಬೆಳೆಗಾರರ ಎಷ್ಟು ಸೊಸೈಟಿಗಳು, ಫೆಡರೇಷನ್‌ಗಳು ಹಾಗೂ ಕಂಪನಿಗಳು ನೋಂದಣಿಗೊಂಡಿವೆ;

(ಋ) ರಾಜ್ಯದಲ್ಲಿ ನೀರಾ ಮತ್ತು ತೆಂಗಿನ ಮೌಲ್ಯವರ್ಧಿತ ಉತ್ಪನ್ನಗಳ ತಯಾರಿಗೆ ಮತ್ತು ಮಾರಾಟಕ್ಕೆ ಪ್ರೋತ್ಸಾಹ ನೀಡಿ, ಈ ಮೂಲಕ ತೆಂಗು ಬೆಳೆಗಾರರ ಹಿತ ಕಾಪಾಡುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಎ) ರಾಜ್ಯದಲ್ಲಿರಬಹುದಾದ ನೀರಾ ತೆಗೆದು ಬದಕುವ ಕಾರ್ಮಿಕರ ಅಂದಾಜು ಸಂಖ್ಯೆ ಎಷ್ಟು; ಹಾಗೂ ಈ ಎಲ್ಲಾ ಕಾರ್ಮಿಕರನ್ನು "ಅಸಂಘಟಿತ ಕಾರ್ಮಿಕ ವಲಯಕ್ಕೆ" ಸೇರ್ಪಡೆಗೊಳಿಸಿ, ಅವರಿಗೆ ಪಿಂಚಣಿ, ಇ.ಎಸ್.ಐ. ಸೇರಿದಂತೆ ಕಾರ್ಮಿಕ ಇಲಾಖೆ ನಿಗಧಿಪಡಿಸುವ ಸೌಲಭ್ಯ ಒದಗಿಸುವ ನಿಟ್ಟಿನಲ್ಲಿ ಸರ್ಕಾರದ ನಿಲುವೇನು; ಈ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಟೋಲ್ ಸಂಗ್ರಹ ಕೇಂದ್ರಗಳಲ್ಲಿ ಟ್ರಾಫಿಕ್ ಜಾಮ್ ಹಾಗೂ ಸಾರ್ವಜನಿಕರೊಂದಿಗೆ ಗೂಂಡಾ ವರ್ತನೆಯ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೩೫ (೯೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಟೋಲ್‌ಗೇಟ್‌ಗಳಲ್ಲಿ ಕ್ಷುಲ್ಲಕ ಜಗಳದಿಂದ ಟ್ರಾಫಿಕ್‌ಜಾಮ್ ಮಾಡುತ್ತಾ ಮತ್ತು ಸಿಬ್ಬಂದಿಯ ಗೂಂಡಾ ವರ್ತನೆಯು ಸಾರ್ವಜನಿಕರಿಗೆ ದಿನನಿತ್ಯವೂ ಕಿರಿಕಿರಿಯುಂಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಟೋಲ್ ಸಂಗ್ರಹ ಸಿಬ್ಬಂದಿಯು ಸಾರ್ವಜನಿಕರೊಂದಿಗೆ ಹಾಗೂ ಗಣ್ಯವ್ಯಕ್ತಿಗಳೊಡನೆ ಸೌಜನ್ಯಯುತವಾಗಿ ನಡೆದುಕೊಳ್ಳುವಂತೆ ಮಾಡಲು ಸರ್ಕಾರ ಏನು ಕ್ರಮಗಳನ್ನು ತೆಗೆದುಕೊಂಡಿದೆ;

(ಇ) ಪ್ರತಿ ಟೋಲ್‌ಗಳಲ್ಲಿ ಗಣ್ಯ ವ್ಯಕ್ತಿಗಳಿಗೆ ಮತ್ತು ಆಂಬುಲೆನ್ಸ್‌ಗಳಿಗೆ ಪ್ರತ್ಯೇಕ ಲೈನ್ (ಮಾರ್ಗ) ಕಾಯ್ದಿರಿಸಲಾಗಿದೆಯೇ; ಅದು ಸದ್ಯ ಎಲ್ಲಾ ಟೋಲ್‌ಗಳಲ್ಲಿ ಚಾಲ್ತಿಯಲ್ಲಿದೆಯೇ; (ವಿವರ ನೀಡುವುದು)

(ಈ) ಸರ್ಕಾರದ ಮಾರ್ಗಸೂಚಿಗಳನ್ನು ಟೋಲ್ ಸಂಗ್ರಹ ಕೇಂದ್ರಗಳು ಪಾಲಿಸದಿದ್ದಲ್ಲಿ ಸಾರ್ವಜನಿಕರು ಯಾರಲ್ಲಿ ದೂರು ದಾಖಲಿಸಬೇಕು; (ವಿವರ ನೀಡುವುದು)

(ಉ) ಟೋಲ್ ಸಂಗ್ರಹ ಕೇಂದ್ರಗಳ ನಡವಳಿಗಳು ಮತ್ತು ಸಂಗ್ರಹದ ಇತಿಮಿತಿಗಳ ಬಗ್ಗೆ ಸರ್ಕಾರ ವಿಧಿಸಿರುವ ಮಾರ್ಗಸೂಚಿಗಳೇನು? (ವಿವರ ನೀಡುವುದು)

## ರಾಜ್ಯದಲ್ಲಿ ಪ್ರಾಣಿದಯಾ ಕೇಂದ್ರ ಮತ್ತು ಗೋಶಾಲೆಗಳು ಆರ್ಥಿಕ ಸಂಕಷ್ಟದಲ್ಲಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೩೬ (೯೮೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ಪ್ರಾಣಿದಯಾ ಕೇಂದ್ರಗಳು/ಗೋಶಾಲೆಗಳು ಆರ್ಥಿಕ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅವುಗಳ ಪುನಃಶ್ಚೇತನಕ್ಕೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ೨೦೧೪ರಿಂದ ೨೦೧೬–೧೭ನೇ ಸಾಲಿಗೆ ಬೆಳಗಾವಿ ಜಿಲ್ಲೆಯ ಗೋಶಾಲೆಗಳಿಗೆ ಸರ್ಕಾರವು ಎಷ್ಟು ಆರ್ಥಿಕ ನೆರವು ನೀಡಿದೆ ಹಾಗೂ ಆ ವಿಚಾರವಾಗಿ ತೆಗೆದುಕೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಎಲ್ಲೆಲ್ಲಿ ಎಷ್ಟು ಗೋಶಾಲೆಗಳು ಕಾರ್ಯನಿರ್ವಹಿಸುತ್ತಿವೆ; ಅವುಗಳ ನಿರ್ವಹಣೆ ಹೇಗೆ ನಡೆಯುತ್ತಿದೆ; ಯಾರು ಮಾಡುತ್ತಿದ್ದಾರೆ; (ವಿವರ ನೀಡುವುದು)

(ಈ) ಅವುಗಳಲ್ಲಿ ಯಾವ್ಯಾವ ಪ್ರಾಣಿಗಳನ್ನು ಮತ್ತು ಎಷ್ಟು ಪ್ರಾಣಿಗಳನ್ನು ರಕ್ಷಿಸಲಾಗುತ್ತಿದೆ? (ವಿವರ ನೀಡುವುದು)

## ರಾಜ್ಯದಲ್ಲಿ ಕಲಬೆರಕೆ ಹಾಲಿನ ದಂಧೆಯು ಅವ್ಯಾಹತವಾಗಿ ನಡೆಯುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೩೭ (೯೭೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಲಬೆರಕೆ ಹಾಲು ದಂಧೆಯು ಅವ್ಯಾಹತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ದಂಧೆಯನ್ನು ಪತ್ತೆ ಹಚ್ಚುವ ಮತ್ತು ತಡೆಯುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಈಗಾಗಲೇ ಇಂತಹ ಎಷ್ಟು ಪ್ರಕರಣಗಳನ್ನು ಪತ್ತೆಹಚ್ಚಲಾಗಿದೆ; ಹಾಗೂ ಅವರ ವಿರುದ್ಧ ಸರ್ಕಾರ ತೆಗೆದುಕೊಂಡ ಕಠಿಣ ಕ್ರಮಗಳೇನು; (ವಿವರ ನೀಡುವುದು)

(ಈ) ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಇಂತಹ ಹಾಲು ಕಲಬೆರಕೆ ಪ್ರಕರಣಗಳು ಮರುಕಳಿಸದಂತೆ ಸರ್ಕಾರ ಯಾವ ಮಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲಿದೆ? (ವಿವರ ನೀಡುವುದು)

## ಸಾವಿರಾರು ಜನ ಸಾಲು ಸಾಲಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೩೮ (೯೭೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಂದೇ ವರ್ಷದಲ್ಲಿ ಸಾವಿರಾರು ಜನ ರೈತರು ಆತ್ಮಹತ್ಯೆ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ೨೦೧೪–೨೦೧೭ನೇ ಸಾಲಿನಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಸದರಿ ಆತ್ಮಹತ್ಯೆ ಮಾಡಿಕೊಂಡ ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ; ಎಷ್ಟೆಷ್ಟು ಮೊತ್ತದ ಪರಿಹಾರ ನೀಡಲಾಗಿದೆ; (ಜಿಲ್ಲಾವಾರು ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡ ರೈತರ ಹಾಗೂ ಪರಿಹಾರ ಪಡೆದ ರೈತರುಗಳ ಸಂಖ್ಯೆ ಎಷ್ಟು; (ವಿವರಗಳನ್ನು ಹೆಸರು ವಿಳಾಸದೊಂದಿಗೆ ಒದಗಿಸುವುದು ಎಷ್ಟು ಜನ ರೈತರಿಗೆ ಪರಿಹಾರ ನೀಡಲು ಬಾಕಿ ಇದೆ ಅವರುಗಳ ವಿವರ ನೀಡುವುದು)

(ಉ) ಸದರಿ ರೈತರುಗಳ ಆತ್ಮಹತ್ಯೆಗಳಿಗೆ ಕಾರಣಗಳೇನು; ಹಾಗೂ ರೈತರುಗಳ ಆತ್ಮಹತ್ಯೆಗಳನ್ನು ತಡೆಯಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ನೊಂದ ರೈತರಿಗೆ ಆತ್ಮಸ್ಥೈರ್ಯ ತುಂಬಿ ಜೀವನದಲ್ಲಿ ಭರವಸೆ ಮೂಡಿಸಲು ಸರ್ಕಾರ ಏನೇನು ಕ್ರಮಗಳನ್ನು ಕೈಗೊಂಡಿದೆ? (ವಿವರ ನೀಡುವುದು)

## ತಳಿ ಸಂವರ್ಧನ ಉಪಕೇಂದ್ರದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೨೯೯ (೧೦೫೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚನ್ನರಾಯಪಟ್ಟಣ ತಾಲ್ಲೂಕಿನ ರಾಯಸಂದ್ರದ ತಳಿ ಸಂವರ್ಧನ ಉಪಕೇಂದ್ರದಲ್ಲಿ ಎಷ್ಟು ಹಸುಗಳನ್ನು ಪಾಲನೆ ಮಾಡಲಾಗುತ್ತಿದೆ:

(ಆ) ಫೆಬ್ರವರಿ ಮೊದಲನೆ ವಾರದಲ್ಲಿ ಈ ಉಪಕೇಂದ್ರದಲ್ಲಿ ೦೭ ಹಸುಗಳು ಮೇವು ಮತ್ತು ನೀರಿನ ಕೊರತೆಯಿಂದ ಮೃತಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ರೀತಿಯ ಪಶುಗಳಿಗೆ ಮೇವಿನ ಕೊರತೆ ಹಾಗೂ ಕನಿಷ್ಠ ಪಕ್ಷ ಸಾಕಷ್ಟು ಕುಡಿಯುವ ನೀರಿನ ಅನುಕೂಲತೆಗಳನ್ನು ಒದಗಿಸಲು ಸರ್ಕಾರಕ್ಕೆ ಇರುವ ಸಮಸ್ಯೆಗಳೇನು:

(ಈ) ಮೈಸೂರು ಮಹಾರಾಜರ ಕಾಲದಲ್ಲಿ ದೇಸಿ ರಾಸುಗಳ ತಳಿ ಅಭಿವೃದ್ಧಿಪಡಿಸಲು ಈ ಕೇಂದ್ರ ಸ್ಥಾಪಿಸಿದ್ದು, ಇದನ್ನು ಸಂರಕ್ಷಿಸಿ ಮುಂದುವರಿಸಿಕೊಂಡು ಹೋಗಲು ಸರ್ಕಾರ ಏನು ಕ್ರಮ ಕೈಗೊಂಡಿದೆ?

## ಲೋಕೋಪಯೋಗಿ ಇಲಾಖೆಯ ಅತಿಥಿ ಗೃಹಗಳನ್ನು ನಿರ್ಮಿಸಲು ಇರುವ ಮಾನದಂಡ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೨೪೦ (೯೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರ ಲೋಕೋಪಯೋಗಿ ಇಲಾಖೆಯಲ್ಲಿ ಅತಿಥಿ ಗೃಹಗಳನ್ನು ನಿರ್ಮಿಸಲು ಇರುವ ಮಾನದಂಡಗಳೇನು;

(ಆ) ರಾಜ್ಯಾದ್ಯಾಂತ ನಿರ್ಮಿಸಿರುವ ನಿರ್ಮಿಸುತ್ತಿರುವ ಅತಿಥಿ ಗೃಹಗಳನ್ನು ಒಂದೇ ವಿನ್ಯಾಸದಡಿ ನಿರ್ಮಿಸಲಾಗುತ್ತಿದೆಯೇ;

(ಇ) ಇತ್ತೀಚೆಗೆ ನಿರ್ಮಿಸಲಾಗಿರುವ ಅನೇಕ ಅತಿಥಿ ಗೃಹಗಳಲ್ಲಿ ಇರುವ ಅನೇಕ ಕೊರತೆಗಳು ಅಗತ್ಯಕ್ಕಿಂತ ಹೆಚ್ಚು ಸ್ಥಳದ ದುರುಪಯೋಗ, (ಅಗತ್ಯಕ್ಕಿಂತ ಹೆಚ್ಚು ನಿರ್ಮಾಣ ಅಗತ್ಯವಿರುವ ಸೌಲಭ್ಯಗಳ ಕೊರತೆ) ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇನ್ನು ಮುಂದೆ ಅತಿಥಿ ಗೃಹಗಳನ್ನು ನಿರ್ಮಾಣ ಮಾಡುವಾಗ ಅವಶ್ಯಕತೆ ಹಾಗೂ ಅಗತ್ಯಗಳಿಗನುಗುಣವಾಗಿ ಸಾರ್ವಜನಿಕ ಹಣ ದುರುಪಯೋಗವಾಗದಂತೆ ಕಟ್ಟಡ ನಿರ್ಮಿಸಲು ಮಾನದಂಡಗಳನ್ನು ಸಿದ್ಧಪಡಿಸಲಾಗುವುದೇ;

(ಉ) ಅತಿಥಿ ಗೃಹಗಳನ್ನು ನೋಡಿಕೊಳ್ಳುತ್ತಿರುವ ಸಿಬ್ಬಂದಿಗಳಿಗೆ ಸಾಕಷ್ಟು ತರಬೇತಿಯ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ಬಂದಿದ್ದಲ್ಲಿ, ಈ ಕುರಿತಾಗಿ ಸೂಕ್ತ ಕ್ರಮ ಕೈಗೊಂಡು ತರಬೇತಿ ನೀಡಲು ಇಲಾಖೆ ಕ್ರಮ ಕೈಗೊಳ್ಳುವುದೇ?

## ರಾಜ್ಯದಲ್ಲಿ ಯುವಕರಿಗೆ ಕೃಷಿ ಕಸುಬನ್ನು ಒಂದು ಕೌಶಲ್ಯವನ್ನಾಗಿ ಗುರುತಿಸಿ ವಿಶೇಷ ತರಬೇತಿ ನೀಡುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೨೪೧ (೯೯೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕೃಷಿ ರಾಜ್ಯದ ಬೆನ್ನೆಲುಬಾಗಿದ್ದರೂ ಇತ್ತೀಚಿನ ವರ್ಷಗಳಲ್ಲಿ ದೊಡ್ಡ ಸಂಖ್ಯೆಯ ಯುವಕರು ಕೃಷಿಯಿಂದ ದೂರ ಸರಿದು ಉದ್ಯೋಗಾಕಾಂಕ್ಷೆಯಿಂದ ನಗರಗಳಿಗೆ ವಲಸೆ ಹೋಗುತ್ತಿರುವುದರಿಂದಾಗಿ, ಕೃಷಿ ಕ್ಷೇತ್ರದ ಮೇಲೆ ಆಗುತ್ತಿರುವ ದುಷ್ಪರಿಣಾಮಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿವರ ನೀಡುವುದು;

(ಆ) ಗ್ರಾಮೀಣ ಪ್ರದೇಶದಲ್ಲಿ ಇರುವ ಯುವಕರು ಅನಿವಾರ್ಯ ಕಾರಣಗಳಿಂದ ಎಸ್.ಎಸ್.ಎಲ್.ಸಿ/ಪಿ.ಯು.ಸಿ. ನಂತರ ಶಿಕ್ಷಣವನ್ನು ಮುಂದುವರೆಸಲಾಗದೆ ದೊಡ್ಡ ಸಂಖ್ಯೆಯಲ್ಲಿ ನಿರುದ್ಯೋಗಿಗಳಾಗುತ್ತಿರುವುದರಿಂದ ಈ ಯುವಕರಿಗೆ ಕೃಷಿ ಕಸುಬನ್ನು ಒಂದು ಕೌಶಲ್ಯವನಾಗಿ ಗುರುತಿಸಿ ವಿಶೇಷ ತರಬೇತಿ ನೀಡಲು ಸರ್ಕಾರವು ಯೋಚಿಸಿದೆಯೇ; (ವಿವರ ನೀಡುವುದು)

(ಇ) ಯೋಜನೆಗಳು ಇಲ್ಲವಾದಲ್ಲಿ, ಗ್ರಾಮಾಂತರ ಪ್ರದೇಶದ ಯುವಕರಿಗೆ ಕೃಷಿಯ ಕಸುಬನ್ನು ಒಂದು ಕೌಶಲ್ಯವನ್ನಾಗಿ ಗುರುತಿಸಿ ಪೂರಕ ತರಬೇತಿ ನೀಡುವ (Catalog Course) ರೂಟ್‌ಸೆಟ್ ಮಾದರಿಯಲ್ಲಿ ಯೋಜಿಸಲು ಸರ್ಕಾರ ಮುಂದಾಗುವುದೇ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮತ್ತು ಇತರೆ ಮಹಾನಗರ ಪಾಲಿಕೆಗಳಲ್ಲಿ ಸೌರ ವಿದ್ಯುತ ಉತ್ಪಾದನೆ ಕಾರ್ಯಕ್ರಮದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೨೪೨ (೯೪೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮತ್ತು ಇತರೆ ಮಹಾನಗರ ಪಾಲಿಕೆಗಳಲ್ಲಿ ಸೌರ ವಿದ್ಯುತ್ ಉತ್ಪಾದನೆಗೆ ಸರ್ಕಾರವು ಹಮ್ಮಿಕೊಳ್ಳುವ ಕಾರ್ಯಕ್ರಮಗಳೇನು; (ವಿವರ ನೀಡುವುದು)

(ಆ) ಮುಂದಿನ ೫ ವರ್ಷಗಳಲ್ಲಿ ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ಮೇಲ್ಛಾವಣೆಯಲ್ಲಿರುವ ಲಭ್ಯ ಸ್ಥಳಗಳನ್ನು ಉಪಯೋಗಿಸಿ ಸೌರ ವಿದ್ಯುತ್ ಉತ್ಪಾದನೆಗೆ ಯೋಜನೆ ರೂಪಿಸಲಾಗಿದೆಯೇ; (ವಿವರ ನೀಡುವುದು)

(ಇ) ಇಲ್ಲವಾದಲ್ಲಿ, ಯೋಜನೆಯನ್ನು ಯಾವಾಗ ರೂಪಿಸಲಾಗುವುದು;

(ಈ) ರಾಜ್ಯದ ವಿಶೇಷವಾಗಿ ಉತ್ತರ ಕರ್ನಾಟಕದಲ್ಲಿ ಲಭ್ಯವಿರುವ ನೀರಾವರಿ ಯೋಜನೆಗಳ ನಾಲೆಗಳ ಮೇಲೆ ಗುಜರಾತ್ ರಾಜ್ಯದಲ್ಲಿ ನಿರ್ಮಿಸಿರುವಂತೆ ಸೌರ ವಿದ್ಯುತ್ ಘಟಕಗಳನ್ನು ಸೃಷ್ಟಿಸಲು ಚಿಂತನೆ ಮಾಡಲಾಗಿದೆಯೇ? (ವಿವರ ನೀಡುವುದು)

## ರಾಜ್ಯ ಹೆದ್ದಾರಿ , ಜಿಲ್ಲಾ ಮುಖ್ಯ ರಸ್ತೆಗಳ ಇಕ್ಕೆಲಗಳಲ್ಲಿ ಇರುವ ಟಾರ್ ಆಗದೆ ಇರುವಂತಹ ಚರಂಡಿ ಮತ್ತು ರಸ್ತೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೨೪೩ (೯೯೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಹೆದ್ದಾರಿ, ಜಿಲ್ಲಾ ಮುಖ್ಯ ರಸ್ತೆಗಳ ಇಕ್ಕೆಲಗಳಲ್ಲಿ ಇರುವ ಟಾರ್ ಆಗದೆ ಇರುವಂತಹ ಚರಂಡಿ ಮತ್ತು ರಸ್ತೆ ನಡುವಿನ ಭಾಗಕ್ಕೆ ಆಗಾಗ ಮಣ್ಣ ತುಂಬಿಸಿ ಸಮತಟ್ಟು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರಿಂದ ಮಳೆಗಾಲದಲ್ಲಿ ಮಣ್ಣ ತೊಳೆದುಕೊಂಡು ಹೋಗಿ ಚರಂಡಿ ಸೇರುವುದಲ್ಲದೆ ಬೇಸಿಗೆಯುಲ್ಲಿ ದೂಳಾಗಿ ಪರಿವರ್ತನೆಗೊಂಡು ವಾಹನಗಳ ಅಪಘಾತಗಳಿಗೂ ಹಾಗೂ ಜನರ ಆರೋಗ್ಯದ ಮೇಲೆ ಪರಿಣಾಮವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಸಮಸ್ಯೆಯ ಪರಿಹಾರಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಅಮೃತ ಮಹಲ್ ಕಾವಲ್ ಜಾಗವನ್ನು ರೈತರಿಗೆ ಮಂಜೂರು ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೨೪೪ (೧೦೨೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕು, ಕುಣಿಕೇನಹಳ್ಳಿ ಗ್ರಾಮ ಸರ್ವೆ ನಂ. ೧೪೧ ಅಮೃತ್ ಮಹಲ್ ಕಾವಲ್‌ನ ಒಟ್ಟು ಜಾಗ ಎಷ್ಟು;

(ಆ) ಸದರಿ ಜಾಗದಲ್ಲಿ ಕಂದಾಯ ಇಲಾಖೆಗೆ ಎಷ್ಟು ಎಕರೆ ಮಂಜೂರು ಮಾಡಿದೆ; (ಪೂರ್ಣ ಮಾಹಿತಿ ನೀಡುವುದು ಹಾಗೂ ಮಂಜೂರು ಮಾಡಿರುವ ನಕಲು ಒದಗಿಸುವುದು)

(ಇ) ಸರ್ವೆ ನಂ. ೧೪೧ ಅಮೃತ್ ಮಹಲ್ ಕಾವಲ್‌ನ ಜಾಗವನ್ನು ಯಾವ ಯಾವ ರೈತರಿಗೆ ಮಂಜೂರು ಮಾಡಲಾಗಿದೆ; (ದಿನಾಂಕ ಸಮೇತ ಪೂರ್ಣ ಮಾಹಿತಿ ನೀಡುವುದು)

(ಈ) ಸದರಿ ಜಾಗದಲ್ಲಿ ಹಲವಾರು ವರ್ಷದಿಂದ ಉಳುಮೆ ಮಾಡುತ್ತಿರುವ ರೈತರಿಗೆ ಉಚ್ಛ ನ್ಯಾಯಾಲಯದಿಂದ ನೋಟೀಸ್ ಜಾರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಮಾಹಿತಿ ನೀಡುವುದು?

## ಹಾಪ್‌ಕಾಮ್ಸ್ ಮಳಿಗೆ ಪ್ರಾರಂಭಿಸುವುದರ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೨೪೫ (೧೦೨೨) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಇರುವ ಹಾಪ್‌ಕಾಮ್ಸ್ ಮಳಿಗೆಗಳೆಷ್ಟು;

(ಆ) ಈ ಮಳಿಗೆಗಳು ಯಾವ ಸ್ಥಳದಲ್ಲಿವೆ; (ವಿಳಾಸ ಸಮೇತ ವಿವರ ನೀಡುವುದು)

(ಇ) ಬೇಡಿಕೆಗೆ ಅನುಗುಣವಾಗಿ ಹೊಸ ಮಳಿಗೆಗಳನ್ನು ಪ್ರಾರಂಭಿಸಲು ಸರ್ಕಾರ ಚಿಂತನೆ ನಡೆಸಿದೆಯೇ;

(ಈ) ಹಾಗಿದ್ದಲ್ಲಿ, ಮಳಿಗೆ ಪ್ರಾರಂಭಿಸಲು ಸರ್ಕಾರ ಅನುಸರಿಸುವ ಮಾನದಂಡವೇನು?

## ರೈತರ ಅಧ್ಯಯನ ಪ್ರವಾಸದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೨೪೬ (೧೦೨೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರಸಕ್ತ ಸಾಲಿನಲ್ಲಿ ರೈತರ ಅಧ್ಯಯನ ಪ್ರವಾಸ ಕಾರ್ಯಕ್ರಮದಡಿ ರಾಜ್ಯದ ರೈತರನ್ನು ಇತರೆ ರಾಜ್ಯಗಳಿಗೆ ಕೃಷಿ ಅಧ್ಯಯನ ಪ್ರವಾಸಕ್ಕಾಗಿ ಕಳುಹಿಸುವ ಪ್ರಸ್ತಾಪನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಕೃಷಿ ಅಧ್ಯಯನ ಪ್ರವಾಸಕ್ಕಾಗಿ ರೈತರನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು; ಆಯ್ಕೆ ಮಾಡುವ ಪ್ರಕ್ರಿಯೆ ಹೇಗೆ ನಡೆಯುತ್ತದೆ; ಈ ಅಧ್ಯಯನ ಪ್ರವಾಸದ ಉದ್ದೇಶವೇನು; (ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಕೃಷಿ ಅಧ್ಯಯನಕ್ಕಾಗಿ ಇತರೆ ರಾಜ್ಯ ಮತ್ತು ವಿದೇಶಗಳಿಗೆ ರೈತರನ್ನು ಕಳುಹಿಸಲಾಗಿದೆಯೇ;

(ಈ) ಹಾಗಿದ್ದಲ್ಲಿ, ಎಷ್ಟು ರೈತರುಗಳ ತಂಡಗಳನ್ನು ಯಾವ ಯಾವ ದೇಶಗಳಿಗೆ ಅಧ್ಯಯನ ಪ್ರವಾಸಕ್ಕೆ ಕಳುಹಿಸಲಾಗಿತ್ತು; (ವರ್ಷಾವಾರು ಹಾಗೂ ತಂಡವಾರು ಸಂಪೂರ್ಣ ವಿವರ ನೀಡುವುದು)

(ಉ) ಹಾಗಿದ್ದಲ್ಲಿ, ವರದಿಯಲ್ಲಿ ಮಾಡಿರುವ ಶಿಫಾರಸ್ಸುಗಳ ಮೇಲೆ ಸರ್ಕಾರ ಯಾವ ರೀತಿ ಕ್ರಮ ಕೈಗೊಂಡಿದೆ? (ವರದಿವಾರು ವಿವರ ನೀಡುವುದು)

## ಅನಧಿಕೃತ ರಸ್ತೆ ಉಬ್ಬುಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೨೪೭ (೧೦೨೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರಸ್ತೆ ಉಬ್ಬುಗಳನ್ನು ಹಾಕಲು ನಿರ್ದಿಷ್ಟವಾದ ನಿಯಮಗಳಿವೆಯೇ; (ವಿವರ ನೀಡುವುದು)

(ಆ) ಯಾವುದೇ ಮಾನದಂಡವಿಲ್ಲದೆ ಅನಧಿಕೃತವಾಗಿ ರಸ್ತೆ ಉಬ್ಬುಗಳನ್ನು ನಿರ್ಮಿಸಿದರೆ ಅಂಥವರ ಮೇಲೆ ಸರ್ಕಾರ ಕ್ರಮ ಕೈಗೊಂಡಿದೆಯೇ;

(ಇ) ರಸ್ತೆ ಉಬ್ಬುಗಳಿಗೆ ಬಿಳಿಪಟ್ಟೆಯನ್ನು ಬಳಿಯದ ಅಥವಾ ರಾತ್ರಿ ವೇಳೆ ಕಾಣುವಂತೆ ರಿಫ್ಲೆಕ್ಟರ್‌ಗಳನ್ನು ಹಾಕದೆ ಇರುವುದರಿಂದ, ಅಪಘಾತಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸಾರ್ವಜನಿಕ ಉದ್ದಿಮೆಗಳ ಕಾರ್ಯನಿರ್ವಹಣೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು):–**

೧೨೪೮ (೧೦೨೬) ಮಾನ್ಯ ಪೌರಾಡಳಿತ ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ಸರ್ಕಾರದ ಅಧೀನದಲ್ಲಿ ಒಟ್ಟು ಎಷ್ಟು ಸಾರ್ವಜನಿಕ ಉದ್ದಿಮೆಗಳು ಕಾರ್ಯನಿರ್ವಹಿಸುತ್ತಿವೆ; ಅವುಗಳು ಯಾವುವು; (ವಿಳಾಸ ಸಹಿತ ವಿವರ ನೀಡುವುದು)

(ಆ) ಈ ಸಾರ್ವಜನಿಕ ಉದ್ದೆಮೆಗಳಲ್ಲಿ ಲಾಭದಲ್ಲಿ ಹಾಗೂ ನಷ್ಟದಲ್ಲಿರುವ ಉದ್ದೆಮೆಗಳು ಎಷ್ಟು; ಮತ್ತು ಅವುಗಳು ಯಾವುವು; (ವಿವರಗಳನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಅಧ್ಯಕ್ಷರು, ನಿರ್ದೇಶಕರುಗಳ ಪೂರ್ಣ ಮಾಹಿತಿ ನೀಡುವುದು?

## ರಾಜ್ಯದ ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ಹಾರುಬೂದಿ ನಿರ್ವಹಣೆಯ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೪೯ (೧೦೪೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ಹಾರುಬೂದಿ ನಿರ್ವಹಣೆ ತಲೆದೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಯಚೂರು, ಬಳ್ಳಾರಿ ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ಹಾರುಬೂದಿ ಡಂಪ್ ಮಾಡಲು ಸ್ಥಳಾವಕಾಶ ತಲೆದೋರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಇ) ಮುಂದಿನ ದಿನಗಳಲ್ಲಿ ಉತ್ಪತ್ತಿ ಆಗುವ ಹಾರುಬೂದಿಯನ್ನು ನಿರ್ವಹಿಸಲು ಯಾವ ಯಾವ ಯೋಜನೆಗಳನ್ನು ಹಾಕಿಕೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ಉಷ್ಣ ವಿದ್ಯುತ್ ಸ್ಥಾವರಗಳ ಹಾರುಬೂದಿ ಸಮಸ್ಯೆ ನಿರ್ವಹಣೆಗಾಗಿ ಕಳೆದ ೧೦–ವರ್ಷಗಳಲ್ಲಿ ಸರ್ಕಾರದ ಎಷ್ಟು ಸಚಿವರುಗಳು ಮತ್ತು ಇಂಜಿನಿಯರ್‌ಗಳನ್ನು ಯಾವ ದೇಶಗಳಿಗೆ ಕಳುಹಿಸಲಾಗಿದೆ; ಮತ್ತು ಇದಕ್ಕೆ ಖರ್ಚು ಮಾಡಲಾದ ಮೊತ್ತವೆಷ್ಟು;

(ಉ) ವಿದೇಶಗಳಲ್ಲಿ ಹಾರುಬೂದಿ ನಿರ್ವಹಣೆಗೆ ಅಳವಡಿಸಲಾಗಿರುವ ಕ್ರಮಗಳನ್ನು ರಾಜ್ಯದಲ್ಲಿಯೂ ಅಳವಡಿಸಿಕೊಳ್ಳಲು ಯಾವುದಾದರೂ ನಿರ್ಧಾರ ಕೈಗೊಳ್ಳಲಾಗಿದೆಯೇ? (ವಿವರ ನೀಡುವುದು)

## ಪಶುಸಂಗೋಪನಾ ಇಲಾಖೆಯ ಕಾರ್ಯಕ್ರಮಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೦ (೯೨೩) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ಹಮ್ಮಿಕೊಂಡಿರುವ ಪಶುಸಂಗೋಪನಾ ಇಲಾಖೆಯ ಕಾರ್ಯಕ್ರಮಗಳಾವುವು;

(ಆ) ಸದರಿ ಕಾರ್ಯಕ್ರಮಗಳಿಗೆ ನಿಗಧಿಪಡಿಸಿದ ಒಟ್ಟು ಆರ್ಥಿಕ ಮತ್ತು ಭೌತಿಕ ಗುರಿಗಳೇನು; (ಜಿಲ್ಲಾವಾರು ವಿವರ ನೀಡುವುದು)

(ಇ) ೨೦೧೬–೧೭ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯ ಪಶುಭಾಗ್ಯ ಯೋಜನೆಯಡಿ ಸೌಲಭ್ಯ ಪಡೆದಿರುವ ಫಲಾನುಭವಿಗಳೆಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ೨೦೧೬–೧೭ನೇ ಸಾಲಿನಲ್ಲಿ ಚಿಕ್ಕಮಗಳೂರು ಜಿಲ್ಲೆಯ ಪಶುಸಂಗೋಪನಾ ಇಲಾಖೆಯ ವಿವಿಧ ಯೋಜನೆಗಳಿಗೆ ನಿಗಧಿಪಡಿಸಿದ ಆರ್ಥಿಕ ಭೌತಿಕ ಗುರಿಗಳಿಗೆ ಅನುಗುಣವಾಗಿ ಬಿಡುಗಡೆಯಾದ, ಖರ್ಚಾದ ಹಾಗೂ ಬಾಕಿ ಉಳಿದ ಅನುದಾನವೆಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಚಿಕ್ಕಮಗಳೂರು ಜಿಲ್ಲೆಯ ಕೃಷಿ ಭಾಗ್ಯ ಯೋಜನೆಯ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೫೧ (೯೨೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೃಷಿ ಭಾಗ್ಯ ಯೋಜನೆಯನ್ನು ಚಿಕ್ಕಮಗಳೂರು ಜಿಲ್ಲೆಯ ಯಾವ ಯಾವ ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸಲಾಗಿದೆ;

(ಆ) ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕು ಬರಪೀಡಿತ ಪ್ರದೇಶವೆಂದು ಸರ್ಕಾರ ಘೋಷಣೆ ಮಾಡಿದ್ದರೂ, ಕೃಷಿ ಭಾಗ್ಯ ಯೋಜನೆಯನ್ನು ಈ ತಾಲ್ಲೂಕಿಗೆ ನೀಡದಿರಲು ಕಾರಣವೇನು;

(ಇ) ಕೃಷಿ ಭಾಗ್ಯ ಯೋಜನೆಯನ್ನು ಉಳಿದ ತಾಲ್ಲೂಕುಗಳಿಗೆ ವಿಸ್ತರಿಸುವ ಯೋಜನೆ ಸರ್ಕಾರಕ್ಕಿದೆಯೇ;

(ಈ) ಕೃಷಿ ಭಾಗ್ಯ ಯೋಜನೆಯ ಅನುಷ್ಠಾನಕ್ಕಾಗಿ ಚಿಕ್ಕಮಗಳೂರು ಜಿಲ್ಲೆಗೆ ನಿಗಧಿಪಡಿಸಲಾಗಿರುವ ಅನುದಾನವೆಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕೆ.ಡಿ.ಪಿ ವರದಿ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೫೨ (೯೪೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ರಾಜ್ಯದಲ್ಲಿನ ನಗರಸಭೆಗಳು, ಪುರಸಭೆಗಳು, ಮತ್ತು ಪಟ್ಟಣ ಪಂಚಾಯತ್‌ಗಳ ಅಭಿವೃದ್ಧಿ ಕಾರ್ಯಕ್ರಮಗಳ ಪರಿಶೀಲನೆ ಮತ್ತು

ನಗರಾಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿಯನ್ನು ಪರಿಶೀಲಿಸಲು ಕೆ.ಡಿ.ಪಿ. ಸಮಿತಿಗಳ ಮಾದರಿಯಲ್ಲಿ ಅಭಿವೃದ್ಧಿ ಪರಿಶೀಲನಾ ಸಮಿತಿಯನ್ನು ರಚಿಸಲು ಆದೇಶ ಹೊರಡಿಸಲಾಗಿದೆಯೇ; (ಆದೇಶದ ಪ್ರತಿಯನ್ನು ಒದಗಿಸುವುದು)

## ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯಿತಿಯ ಸಿಬ್ಬಂದಿಯ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೫೩ (೧೦೪೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪುರಸಭೆ, ನಗರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪಟ್ಟಣ ಪಂಚಾಯಿತಿಗಳಲ್ಲಿ ಖಾಲಿ ಇರುವ ಕಿರಿಯ ಆರೋಗ್ಯ ನಿರೀಕ್ಷಕರ ಹುದ್ದೆಗಳೆಷ್ಟು;

(ಇ) ಖಾಲಿಯಿದ್ದಲ್ಲಿ, ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

## ಪಶು ಭಾಗ್ಯ ಯೋಜನೆಯ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೫೪ (೧೦೪೬) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ “ಪಶುಭಾಗ್ಯ” ಯೋಜನೆಗೆ ಮಂಜೂರಾಗಿರುವ ಅನುದಾನವೆಷ್ಟು;

(ಆ) ಈ ಪಶುಭಾಗ್ಯ ಯೋಜನೆಯಡಿ ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು? (ವಿವರ ನೀಡುವುದು)

## ಪಶು ಆಸ್ಪತ್ರೆಗಳಲ್ಲಿ ಚಿಕಿತ್ಸೆಯ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೫೫ (೧೦೪೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಅವಶ್ಯಕತೆಗೆ ಬೇಕಾಗಿರುವ ಸಾಮಗ್ರಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸಾಮಗ್ರಿಗಳ ಕೊರತೆ ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಪಶು ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಸಿಬ್ಬಂದಿಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ನೂತನವಾಗಿ ರಚಿಸಿರುವ ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳ ಕುರಿತು

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೫೬ (೧೦೪೫) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನೂತನವಾಗಿ ರಚಿಸಿರುವ ಪುರಸಭೆಗಳಿಗೆ ಮತ್ತು ಪಟ್ಟಣ ಪಂಚಾಯತ್‌ಗಳಿಗೆ ಹೆಚ್ಚಿನ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಪಟ್ಟಣ ಪಂಚಾಯುತ್ ಮತ್ತು ಪುರ ಸಭೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು;

(ಇ) ಸದರಿ ನೌಕರರಿಗೆ ನೀಡುತ್ತಿರುವ ವೇತನ ಭತ್ಯೆಗಳ ವಿವರ ನೀಡುವುದು;

(ಈ) ಸದರಿ ನೌಕರರಿಗೆ ಖಾಯಂಗೊಳಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

## ಸ್ವೈಪಿಂಗ್ ಮಿಷಿನ್ ಮತ್ತು ಆನ್‌ಲೈನ್ ವ್ಯವಸ್ಥೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೫೭ (೯೦೮) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ನಗರ ಸಭೆ, ಪುರಸಭೆ, ಪಟ್ಟಣ ಪಂಚಾಯತ್‌ಗಳಲ್ಲಿ ಸ್ವೈಪಿಂಗ್ ಮಿಷನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ಯೋಜನೆ ಸರ್ಕಾರದ; ಮುಂದೆ ಇದೆಯೇ;

(ಆ) ಹಾಗಿದ್ದಲ್ಲಿ, ಇಲ್ಲಿಯವರಗೆ ಚಿಕ್ಕಮಗಳೂರು ಜಿಲ್ಲೆಯ ಎಷ್ಟು ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್‌ಗಲ್ಲಿ ಸ್ವೈಪಿಂಗ್ ಮಿಷನ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆಯೇ; (ವಿವರಣೆ ನೀಡುವುದು)

(ಇ) ಸ್ವೈಪಿಂಗ್ ಮತ್ತು ಆನ್‌ಲೈನ್ ವ್ಯವಸ್ಥೆಯನ್ನು ಜಾರಿಗೆ ತರುವ ತರುವ ಬಗ್ಗೆ ನಗರಾಭಿವೃದ್ಧಿ ಇಲಾಖೆ ಯಾವುದಾದರೂ ಆದೇಶ ಹೊರಡಿಸಿದೆಯೇ; ಇಲ್ಲವಾದಲ್ಲಿ, ಈ ಕುರಿತು ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು? (ಸ್ಪಷ್ಟನೆ ನೀಡುವುದು)

## ಫೀಡರ್ ಎಕ್ಸ್‌ಪ್ರೆಸ್ ಮಾರ್ಗ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೫೮ (೯೦೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕಿನ ಬಣಕಲ್, ದಾರದಹಳ್ಳಿ, ಮಾಕೋನಹಳ್ಳಿ ಮತ್ತು ಗೋಣಿಬೀಡು ಫೀಡರ್ (ಟ್ರಾನ್ಸ್‌ಫಾರ್ಮರ್) ಗಳಿಗೆ ಎಕ್ಸ್‌ಪ್ರೆಸ್ ಮಾರ್ಗ ನಿರ್ಮಿಸುವ ಯೋಜನೆ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಯೋಜನೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;

(ಇ) ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು?

## ತೋಟಗಾರಿಕೆ ವಿಶ್ವವಿದ್ಯಾಲಯದ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೫೯ (೯೧೦) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆ ತಾಲ್ಲೂಕಿನಲ್ಲಿ " ತೋಟಗಾರಿಕೆ ವಿಶ್ವವಿದ್ಯಾಲಯ" ಸ್ಥಾಪಿಸುವ ವಿಚಾರ ಸರ್ಕಾರದ ಮುಂದಿದೆಯೇ;

(ಆ) ಹಾಗಿದ್ದಲ್ಲಿ, ಈ ವಿಚಾರವಾಗಿ ಸರ್ಕಾರ ಕೈಗೊಂಡ ಕ್ರಮಗಳೇನು; ಸ್ಪಷ್ಟನೆ ನೀಡುವುದು?

## ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೬೦ (೯೦೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಲ್ಲಿ ಇದುವರೆಗೆ ನೋಂದಾಯಿಸಿರುವ ರೈತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ನೋಂದಾಯಿತ ರೈತರಲ್ಲಿ ಬೆಳೆ ವಿಮೆ ಪಡೆದುಕೊಂಡ ರೈತರ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಯಾವ ಯಾವ ಬೆಳೆಗಳಿಗೆ ಎಷ್ಟು ಬೆಳೆ ವಿಮಾ ಹಣ ಪಾವತಿಸಲಾಗಿದೆ ಹಾಗೂ ಯಾವ ಮಾನದಂಡದ ಮೇಲೆ ಬೆಳೆ ನಷ್ಟ ಅಂದಾಜು ಮಾಡಲಾಗುತ್ತಿದೆ; ಈ ಯೋಜನೆಯಲ್ಲಿ ಪಡೆದುಕೊಳ್ಳಬಹುದಾದ ಇತರೆ ಸಹಾಯಧನಗಳು ಯಾವುವು? (ವಿವರ ನೀಡುವುದು)

## ಅಮೃತ್ ಮಹಲ್ ತಳಿ ಸಂವರ್ಧನಾ ಕೇಂದ್ರಗಳ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೬೧ (೯೦೭) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಮೃತ್ ಮಹಲ್ ತಳಿ ಸಂವರ್ಧನಾ ಕೇಂದ್ರದಲ್ಲಿ ರಾಸುಗಳು ಸಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅಮೃತ್ ಮಹಲ್ ತಳಿ ಸಂವರ್ಧನಾ ಕೇಂದ್ರದಲ್ಲಿ ಅಸಮರ್ಪಕ ಮೇವು ಪೂರೈಕೆ ಮಾಡುತ್ತಿರುವುದರಿಂದ, ರಾಸುಗಳು ಸಾಯುತ್ತಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಅಮೃತ್ ಮಹಲ್ ತಳಿ ಸಂವರ್ಧನಾ ಕೇಂದ್ರಕ್ಕೆ ಕಳೆದ ೨೦೧೪-೧೫ ರಿಂದ ೨೦೧೬-೧೭ನೇ ಸಾಲಿನವರೆಗೆ ಬಿಡುಗಡೆಯಾದ ಅನುದಾನ ಎಷ್ಟು; ಹಾಗೂ ಅನುದಾನವನ್ನು ಯಾವ ಯಾವ ರೀತಿ ಬಳಕೆ ಮಾಡಲಾಗುತ್ತದೆ; (ವಿವರ ನೀಡುವುದು)

(ಈ) ಅಮೃತ್ ಮಹಲ್ ತಳಿ ಸಂವರ್ಧನಾ ಕೇಂದ್ರದಲ್ಲಿರುವ ರಾಸುಗಳ ಸಂಖ್ಯೆ ಎಷ್ಟು; ಹಾಗೂ ಎಷ್ಟು ಅಧಿಕಾರಿಗಳು ಕಾರ್ಯನಿರ್ವಹಣೆ ಮಾಡುತ್ತಿದ್ದಾರೆ (ವಿವರ ನೀಡುವುದು)

(ಉ) ಅಮೃತ್ ಮಹಲ್ ತಳಿ ಸಂವರ್ಧನಾ ಕೇಂದ್ರದಲ್ಲಿ ಕಾಮಗಾರಿಗಳು ಅರ್ಧಕ್ಕೆ ನಿಂತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)

## ರೈತರ ಅಭಿವೃದ್ಧಿಗೆ ಸರ್ಕಾರದ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೨ (೯೩೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರ ಅಭಿವೃದ್ಧಿಗೆ ಸರ್ಕಾರ ಸುವರ್ಣ ಭೂಮಿ, ಭೂ–ಚೇತನ ಯೋಜನೆ ಮತ್ತು ಸಾವಯುವ ಕೃಷಿ ಯೋಜನೆಗಳನ್ನು ಜಾರಿಗೊಳಿಸಲಾಗಿದೆಯೇ;

(ಆ) ಹಾಗಿದ್ದರೆ, ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು; ಒಟ್ಟು ಭೌತಿಕವಾಗಿ ಖರ್ಚು ಮಾಡಿದ ಹಣ ಎಷ್ಟು; ಆಯವ್ಯಯದಲ್ಲಿ ಘೋಷಣೆ ಮಾಡಿದ ಹಣ ಎಷ್ಟು? (೨೦೧೩ ರಿಂದ ೨೦೧೭ ರವರೆಗಿನ ಯೋಜನೆಗಳವಾರು ಮತ್ತು ವರ್ಷಾವಾರು ಮಾಹಿತಿ ನೀಡುವುದು)

## ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ ನೀಡುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೩ (೯೩೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹೈನುಗಾರಿಕೆಗೆ ಪ್ರೋತ್ಸಾಹಿಸುವ ಸಲುವಾಗಿ ಹಾಲು ಉತ್ಪಾದಕರಿಗೆ ಸರ್ಕಾರ ಪ್ರತಿ ಲೀಟರ್ ಹಾಲಿಗೆ ಪ್ರೋತ್ಸಾಹ ಹಣ ನೀಡುತ್ತಿದೆಯೇ;

(ಆ) ಹಾಗಿದ್ದರೆ, ಫಲಾನುಭವಿಗಳ ಸಂಖ್ಯೆ ಎಷ್ಟು; ಇದುವರೆವಿಗೆ ಫಲಾನುಭವಿಗಳಿಗೆ ಪೂರ್ಣ ಹಣ ಯಾವ ತಿಂಗಳವರೆಗೆ ವಿತರಿಸಲಾಗಿದೆ? (ಬಾಕಿಯಿರುವ ಹಣದ ವಿವರ ನೀಡುವುದು)

## ಕೃಷಿ ಸಂಬಂಧಿ ಕಾರ್ಯಕ್ರಮಗಳ/ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೬೪ (೯೩೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರ ಕೃಷಿ ಸಂಬಂಧಿ ಕಾರ್ಯಕ್ರಮಗಳಿಗೆ ಯೋಜನೆಗಳಿಗೆ ಆಯವ್ಯಯದಲ್ಲಿ ಅನುದಾನ ಮೀಸಲಿರಿಸಲಾಗಿದೆಯೇ;

(ಆ) ಹಾಗಿದ್ದರೆ, ಕೃಷಿ ಸಂಬಂಧಿ ಕಾರ್ಯಕ್ರಮಗಳು/ ಯೋಜನೆಗಳು ಯಾವುವು; ಕೃಷಿ ಸಂಬಂಧಿ ವಿವಿಧ ಕಾರ್ಯಕ್ರಮಗಳಲ್ಲಿ / ಯೋಜನೆಗಳಲ್ಲಿ ಇದುವರೆವಿಗೆ ಖರ್ಚು ಮಾಡಿದ ಹಣ ಎಷ್ಟು; ೨೦೧೩ ರಿಂದ ೨೦೧೭ ರವರೆಗಿನ ಮಾಹಿತಿಯನ್ನು ಯೋಜನಾವಾರು ನೀಡುವುದು)

## ರೈತರ ಕೃಷಿ ಜಮೀನುಗಳಲ್ಲಿ ಮಣ್ಣಿನ ಪರೀಕ್ಷೆಯ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೫ (೧೦೦೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ/ರಾಜ್ಯ ಸರ್ಕಾರದಿಂದ ರೈತರ ಕೃಷಿ ಜಮೀನುಗಳಲ್ಲಿ ಕೃಷಿ ಮಣ್ಣಿನ ಪರೀಕ್ಷೆಯನ್ನು ಮಾಡುವುದಕ್ಕೆ ಮಣ್ಣಿನ ಆರೋಗ್ಯ ಕೇಂದ್ರ/ ಮಣ್ಣಿನ ಪರೀಕ್ಷೆ ಪ್ರಯೋಗಾಲಯ (Soil Health Centre/soil Testing Laboratory) ಗಳು ಇರುವುದು ನಿಜವೇ;

(ಆ) ಹಾಗಿದ್ದರೆ, ರಾಜ್ಯದಲ್ಲಿ ಒಟ್ಟು ಎಷ್ಟು ಕೇಂದ್ರಗಳಿವೆ; (ಜಿಲ್ಲಾವಾರು ವಿವರ ನೀಡುವುದು) ಈ ಯೋಜನೆಯಿಂದ ಕಳೆದ ೪ ವರ್ಷಗಳಲ್ಲಿ ಅಂದರೆ ೨೦೧೩ ರಿಂದ ೨೦೧೭ರವರೆಗೆ ಒಟ್ಟು ಎಷ್ಟು ಫಲಾನುಭವಿಗಳು ಈ ಯೋಜನೆಯಿಂದ ಮಣ್ಣಿನ ಪರೀಕ್ಷೆಯನ್ನು ಮಾಡಿಸಿಕೊಂಡಿರುತ್ತಾರೆ; ಈ ಮಣ್ಣಿನ ಪರೀಕ್ಷೆಯನ್ನು ಪರೀಕ್ಷಿಸಲು ಸರ್ಕಾರದಿಂದ ಹಣ ವಸೂಲಿ ಮಾಡಲಾಗುತ್ತಿದೆಯೇ;

(ಇ) ಈ ಯೋಜನೆಯಿಂದ ರೈತರ ಕೃಷಿ ಜಮೀನಿನ ಮಣ್ಣಿನ ಗುಣ, ಲಕ್ಷಣ ಹಾಗೂ ಸತ್ವತೆಯನ್ನು ತಿಳಿದು ಮುಂದಿನ ಬೆಳೆಯನ್ನು ಬೆಳೆಯುವುದಕ್ಕೆ ಯಾವ ರೀತಿ ಅನುಕೂಲವಾಗುತ್ತಿದೆ?

## ಬೆಳೆ ವಿಮೆ ಯೋಜನೆಗಳ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೬೬ (೧೦೧೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹಿಂಗಾರು ಮಳೆ, ಮುಂಗಾರು ಮಳೆ ಕೈಕೊಟ್ಟಾಗ ಹಾಗೂ ಪ್ರಕೃತಿ ವಿಕೋಪಗಳಾದ ಆಲಿಕಲ್ಲು ಮಳೆ (Hailstorm) ಭೂ ಕುಸಿತ (Land slide) ಮತ್ತು ಬೆಳೆ ಮುಳುಗಡೆ (Inundation) ಯಿಂದ ರೈತರು ಬೆಳೆದ ಬೆಳೆಗಳಿಗೆ ನಷ್ಟವಾದಾಗ ಹಾನಿಯಾದಾಗ ರಾಜ್ಯ ಸರ್ಕಾರದಿಂದ ಅಥವಾ ಕೇಂದ್ರ ಸರ್ಕಾರದಿಂದ ನಷ್ಟ/ಹಾನಿಯನ್ನು ಭರಿಸುವ ಬೆಳೆ ವಿಮೆ ಯೋಜನೆಗಳು ಇರುವುದು ನಿಜವೇ;

(ಆ) ಹಾಗಿದ್ದರೆ, ಫಲಾನುಭವಿಗಳ ಸಂಖ್ಯೆ ಎಷ್ಟು; ಕಳೆದ ೨ ವರ್ಷಗಳಲ್ಲಿ ಅಂದರೆ ೨೦೧೫–೧೬ ಮತ್ತು ೨೦೧೬–೧೭ರವರೆಗೆ ಪರಿಹಾರ ನೀಡಿದ ಹಣದ ಮೊತ್ತ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು) ಆ ಯೋಜನೆಯನ್ನು ಪಡೆಯಲು ರೈತರು ಮುಂಜಾಗೃತ ಕ್ರಮವಾಗಿ ಅನುಸರಿಸಬೇಕಾದ ನಿಯಮಗಳೇನು; (ವಿವರವನ್ನು ಒದಗಿಸುವುದು)

(ಇ) ರೈತರು ಬೆಳೆದ ಬೆಳೆಗಳಿಗೆ ಯಾವುದೇ ವಿಮೆಯನ್ನು ಮಾಡಿಸದೇ ನಷ್ಟವಾಗಿರುವ/ಹಾನಿಯಾಗಿರುವ ಬೆಳಗಳಿಗೆ ಸರ್ಕಾರದ ವತಿಯಿಂದ ಪರಿಹಾರ ನೀಡುವ ಅವಕಾಶ ಕಲ್ಪಿಸಲಾಗಿದೆಯೇ; ಹಾಗಿದ್ದರೆ, ಕಳೆದ ೨ ವರ್ಷಗಳಲ್ಲಿ ೨೦೧೫–೧೬ ಮತ್ತು ೨೦೧೬–೧೭ರವರೆಗೆ ಎಷ್ಟು ಫಲಾನುಭವಿಗಳು ಪರಿಹಾರವನ್ನು ಪಡೆದುಕೊಂಡಿರುತ್ತಾರೆ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿನ ಗೋಮಾಳಗಳ ರಕ್ಷಣೆ, ಬಳಕೆ ಪಶುಸಂಗೋಪನಾ ಇಲಾಖೆಗೆ ನೀಡುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೬೭ (೯೪೮) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗೋಮಾಳಗಳ ಒತ್ತುವರಿಯನ್ನು ತಡೆಯಲು ಪಶುಸಂಗೋಪನಾ ಇಲಾಖೆ ತೆಗೆದುಕೊಂಡ ಕ್ರಮಗಳೇನು;

(ಆ) ರಾಜ್ಯದಲ್ಲಿನ ಗೋಮಾಳಗಳ ರಕ್ಷಣೆ ಮತ್ತು ಬಳಕೆಗೆ ರಾಜ್ಯ ಮಟ್ಟದಲ್ಲಿ ಪಶುಸಂಗೋಪನಾ ಇಲಾಖೆಗಳಿಂದ ಕಾರ್ಯಕ್ರಮಗಳು ಇಲ್ಲದೇ ಇರತಕ್ಕಂತಹ ಹಿನ್ನೆಲೆಯಲ್ಲಿ ಹಾಲು ಉತ್ಪಾದಕರ ಸಹಕಾರಿ ಸಂಘಗಳಿಗೆ ಗೋಮಾಳಗಳ ರಕ್ಷಣೆ, ಬಳಕೆ ಮತ್ತು ನಿರ್ವಹಣೆಯ ಜವಾಬ್ದಾರಿಯನ್ನು ವಹಿಸುವ ಚಿಂತನೆ ಸರ್ಕಾರದ ಮುಂದಿದೆಯೇ; ಇಲ್ಲಾವಾದಲ್ಲಿ, ಕಾರಣಗಳೇನು;

(ಇ) ಪಶುಸಂಗೋಪನಾ ಇಲಾಖೆಯು ಸುಪರ್ಧಿಯಲ್ಲಿ ಇರಬೇಕಾದಂತಹ ಗೋಮಾಳ ಕಂದಾಯ ಇಲಾಖಾ ವ್ಯಾಪ್ತಿಯಲ್ಲಿ ಬಂದಿರುವುದರಿಂದ ಅದರ ಸದ್ಬಳಕೆಯಾಗದಿರುವುದನ್ನು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ, ಇದರ ಪರಿಹಾರಕ್ಕೆ ಸರ್ಕಾರದ ಕ್ರಮಗಳೇನು?

## ರಾಜ್ಯದಲ್ಲಿ ವಿದ್ಯುತ್ ಅಪಘಾತದಲ್ಲಿ ಮರಣ ಹೊಂದಿದವರ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೬೮ (೯೪೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿದ್ಯುತ್ ಅಪಘಾತದಿಂದ ಮರಣ ಹೊಂದಿದವರ ಸಂಖ್ಯೆ ಎಷ್ಟು; ಮತ್ತು ಅವರ ಕುಟುಂಬಗಳಿಗೆ ನೀಡಲಾದ ಪರಿಹಾರವೆಷ್ಟು; ಮತ್ತು ಈ ಅವಘಡಗಳಿಗೆ ಕಾರಣಗಳೇನು; (ತಾಲ್ಲೂಕುವಾರು, ವರ್ಷವಾರು, ಪ್ರಕರಣವಾರು ಪರಿಹಾರದ ಮೊತ್ತದೊಂದಿಗೆ ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿದ್ಯುತ್ ಅಪಘಾತದಿಂದ ಮರಣ ಹೊಂದಿದ ಜಾನುವಾರುಗಳ ಸಂಖ್ಯೆ ಮತ್ತು ನೀಡಲಾದ ಪರಿಹಾರವೆಷ್ಟು; ಮತ್ತು ಈ ಅವಘಡಗಳಿಗೆ ಕಾರಣಗಳೇನು; (ತಾಲ್ಲೂಕುವಾರು, ವರ್ಷವಾರು, ಪ್ರಕರಣವಾರು ಪರಿಹಾರ ಮೊತ್ತದೊಂದಿಗೆ ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ವಿದ್ಯುತ್ ತಂತಿಗಳು ಜೋತು ಬಿದ್ದಿರುವುದನ್ನು ಸರ್ಕಾರದ ಗಮನಿಸಿದೆಯೇ; ಇದರಿಂದ ಇತ್ತೀಚಿನ ದಿನಗಳಲ್ಲಿ ಕಾಡ್ಗಿಚ್ಚುಗಳು ಸಂಭವಿಸುತ್ತಿರುವುದು ಇಲಾಖೆ ಗಮನಿಸಿದೆಯೇ; ಗಮನಿಸಿದ್ದಲ್ಲಿ, ಕಾಲಮಿತಿಯೊಂದಿಗೆ ಸರಿಪಡಿಸಲು ಇಲಾಖೆ ಕ್ರಮ ಕೈಗೊಳ್ಳುವುದೇ; ಇಲ್ಲವಾದಲ್ಲಿ ಕಾರಣವೇನು?

## ಪ್ರಧಾನ ಮಂತ್ರಿ ಗ್ರಾಮ ಸಡಕ್ ಮತ್ತು ಮುಖ್ಯ ಮಂತ್ರಿ ಗ್ರಾಮ ಸಡಕ್ ಯೋಜನೆಯ ರಸ್ತೆಗಳ ನಿರ್ವಹಣೆಯ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೬ (೯೫೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಕಳೆದ ೬ ವರ್ಷಗಳಿಂದ ಉಡುಪಿ ಜಿಲ್ಲೆಯಲ್ಲಿ ಇಲಾಖೆಯಿಂದ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಮತ್ತು ಮುಖ್ಯ ಮಂತ್ರಿ ಗ್ರಾಮ ಸಡಕ್ ಯೋಜನೆಯಡಿ ನಿರ್ಮಿಸಲಾದ ರಸ್ತೆಗಳು ಯಾವುವು; ಅವುಗಳ ವಿಸ್ತೀರ್ಣವೆಷ್ಟು; ತಗುಲಿದ ವೆಚ್ಚವೆಷ್ಟು; ಈ ರಸ್ತೆಗಳನ್ನು ನಿರ್ಮಿಸಿದ ಗುತ್ತಿಗೆದಾರರು ಯಾರು; (ಹೆಸರು ಮತ್ತು ವಿಳಾಸ ವರ್ಷವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಈ ರಸ್ತೆಗಳ ನಿರ್ವಹಣೆಯಿಲ್ಲದೆ, ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರಸ್ತೆಗಳ ನಿರ್ವಹಣೆಗೆ ಸರ್ಕಾರದಿಂದ ಬಿಡುಗಡೆಯಾದ ಮತ್ತು ಬಳಕೆಯಾದ ಅನುದಾನದ ಮೊತ್ತವೆಷ್ಟು; (ವರ್ಷವಾರು ಮಾಹಿತಿ ನೀಡುವುದು)

(ಇ) ಈ ಯೋಜನೆಯಡಿ ರಸ್ತೆಗಳ ನಿರ್ವಹಣೆಗೆ ಮಾರ್ಗಸೂಚಿ ಹೊರಡಿಸಲಾಗಿದೆಯೇ? (ಪ್ರತಿ ಒದಗಿಸುವುದು)

## ರಾಜ್ಯದಲ್ಲಿನ ಕೃಷಿ ವಿಶ್ವವಿದ್ಯಾನಿಲಯಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೭೦ (೯೫೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಕೃಷಿ ವಿಶ್ವವಿದ್ಯಾನಿಲಯಗಳ ಒಟ್ಟು ಸಂಖ್ಯೆ ಎಷ್ಟು; ಮತ್ತು ರಾಜ್ಯದಲ್ಲಿ ಕೃಷಿ ವಿಶ್ವವಿದ್ಯಾನಿಲಯಗಳ ತಿದ್ದುಪಡಿ ಅಧಿನಿಯಮ ೨೦೧೩ರನ್ನು ಎಂದಿನಿಂದ ಜಾರಿಗೊಳಿಸಲಾಗಿದೆ;

(ಆ) ರಾಜ್ಯದಲ್ಲಿನ ಕೃಷಿ ವಿಶ್ವವಿದ್ಯಾನಿಲಯಗಳ ವ್ಯವಸ್ಥಾಪನಾ ಮಂಡಳಿಗಳಲ್ಲಿನ ಸದಸ್ಯರುಗಳ ಸಂಖ್ಯೆ ಎಷ್ಟು; ಮತ್ತು ಇವರುಗಳ ನಾಮನಿರ್ದೇಶನಕ್ಕೆ ಇರುವ ಮಾರ್ಗಸೂಚಿಗಳೇನು; (ಮಾರ್ಗಸೂಚಿಯ ಪ್ರತಿ ಒದಗಿಸುವುದು)

(ಇ) ರಾಜ್ಯದಲ್ಲಿನ ಕೃಷಿ ವಿಶ್ವವಿದ್ಯಾನಿಲಯಗಳ ವ್ಯವಸ್ಥಾಪನಾ ಮಂಡಳಿಗೆ ನಾಮನಿರ್ದೇಶನಗೊಂಡ ವಿಧಾನ ಪರಿಷತ್ತು ಹಾಗೂ ವಿಧಾನ ಸಭೆ ಸದಸ್ಯರುಗಳು ಯಾರು; ಮತ್ತು ಇವರುಗಳ ಅಧಿಕಾರಾವಧಿ ಎಷ್ಟು; (ತಿದ್ದುಪಡಿ ಅಧಿನಿಯಮ ೨೦೧೩ ಜಾರಿಗೊಂಡದಿನದಿಂದ ಇಲ್ಲಿಯತನಕ ಕರ್ತವ್ಯನಿರ್ವಹಿಸುತ್ತಿರುವ ನಾಮನಿರ್ದೇಶನ ಸದಸ್ಯರುಗಳ ವಿವರ ನೀಡುವುದು)

(ಈ) ರಾಜ್ಯದಲ್ಲಿನ ಕೃಷಿ ವಿಶ್ವವಿದ್ಯಾನಿಲಯಗಳಿಗೆ ನಾಮನಿರ್ದೇಶನಗೊಂಡ ಮೂವರು ಪ್ರಗತಿಪರ ರೈತರುಗಳು ಯಾರು; ಮತ್ತು ರೈತರಲ್ಲದೆ, ನಾಮನಿರ್ದೇಶನಗೊಂಡ ಇತರೆ ಸದಸ್ಯರು ಯಾರು? (ಕೃಷಿ ವಿಶ್ವವಿದ್ಯಾನಿಲಯಗಳವಾರು ವಿವರ ನೀಡುವುದು)

## ರಾಜ್ಯದಲ್ಲಿ ಕೃಷಿಕರಿಗೆ ಅಂತರಗಂಗೆಯಿಂದಾಗುತ್ತಿರುವ ತೊಂದರೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೭೧ (೯೫೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಂತರಗಂಗೆ (Salvinia Malesta) ಇರುವ ಪ್ರದೇಶಗಳು ಯಾವುವು; (ತಾಲ್ಲೂಕುವಾರು ವಿವರ ನೀಡುವುದು) ಮತ್ತು ಅವುಗಳಿಂದ ಕೃಷಿಯ ಮೇಲೆ ಪರಿಣಾಮ ಉಂಟಾಗುವುದೇ; ಅದರ ಪರಿಹಾರಕ್ಕೆ ಇಲಾಖೆ ತೆಗೆದುಕೊಂಡ ಕ್ರಮಗಳೇನು;

(ಆ) ಅಂತರಗಂಗೆ (Salvinia Malesta) ಯನ್ನು ನಿಯಂತ್ರಿಸಲು ಮತ್ತು ಅವುಗಳನ್ನು ನಾಶಪಡಿಸಲು ಕೃಷಿ ಇಲಾಖೆ ಯಾವುದಾದರೂ ಕಾರ್ಯಕ್ರಮಗಳನ್ನು ಹಾಕಿಕೊಂಡಿದೆಯೇ; ಇಲ್ಲವಾದಲ್ಲಿ ಕಾರಣವೇನು;

(ಇ) ಅಂತರಗಂಗೆ (Salvinia Malesta) ಯನ್ನು ನಿಯಂತ್ರಣಕ್ಕೆ ತರಲು ವಿಜ್ಞಾನಿಗಳ ಸಹಾಯ ಪಡೆಯಲಾಗುವುದೇ; ಇಲ್ಲವಾದಲ್ಲಿ ಕಾರಣವೇನು;

(ಈ) ಅಂತರಗಂಗೆ (Salvinia Malesta) ಯನ್ನು ನಿಯಂತ್ರಿಸಲು ತಾತ್ಕಾಲಿಕ ಆವೇಮಣ್ಣಿನ ಗಣಿಗಾರಿಕೆಗೆ ಹೊಂಡ ಮಾಡಲು ಕೆಂಪು ಹಾಗೂ ಶಿಲೆಕಲ್ಲು ಗಣಿಗಾರಿಕೆ ಹೊಂಡ ಮಾಡಲು ಹಾಗೂ ತಾತ್ಕಾಲಿಕ ಕೆರೆಗಳನ್ನು ನಿರ್ಮಿಸುವ ಪೂರ್ವ ಕೃಷಿ ಇಲಾಖೆಯ ಅನುಮತಿ ಪಡೆಯುವಂತೆ ಸೂಚಿಸಲಾಗುವುದೇ?

## ರಾಜ್ಯದಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿ ತಡೆಗಟ್ಟಲು ಸರ್ಕಾರವೇ ವಿಮೆ ಮಾಡಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೨೭೨ (೯೭೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರ ವರ್ಷಗಳಲ್ಲಿ ರಾಜ್ಯದಲ್ಲಿ ಅತಿವೃಷ್ಟಿ ಮತ್ತು ಅನಾವೃಷ್ಟಿ ಹಾಗೂ ಇನ್ನಿತರೆ ಕಾರಣಗಳಿಂದಾಗಿ ಒಟ್ಟಾರೆ ಕೃಷಿಯಲ್ಲಿ ಒಟ್ಟು ಎಷ್ಟು ಪ್ರಮಾಣದ ನಷ್ಟವಾಗಿದೆ; (ವರ್ಷಾವಾರು ಮಾಹಿತಿ ನೀಡುವುದು)

(ಆ) ಇದಕ್ಕೆ ಪ್ರತಿಫಲವಾಗಿ ಆಗಿರುವ ನಷ್ಟವನ್ನು ಭರಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಒಟ್ಟಾರೆ ಎಷ್ಟು ಪರಿಹಾರ ನೀಡಲಾಗಿದೆ; (ವರ್ಷಾವಾರು ವಿವರ ನೀಡುವುದು)

(ಇ) ರಾಜ್ಯದ ಒಟ್ಟಾರೆ, ಕೃಷಿಗೆ, ಕೃಷಿ ವಿಮೆ ಮಾಡಿಸಿದಲ್ಲಿ, ವರ್ಷಕ್ಕೆ ಅಂದಾಜು ಎಷ್ಟು ಹಣ ಬೇಕಾಗಬಹುದು;

(ಈ) ರಾಜ್ಯದ ಒಟ್ಟು ಕೃಷಿಗೆ, ಸರ್ಕಾರವೇ ಪ್ರತಿ ವರ್ಷ ಕೃಷಿ ವಿಮೆ ಮಾಡಿಸುವ ಸಂಬಂಧ ಸರ್ಕಾರದ ನಿಲುವೇನು? (ವಿವರ ನೀಡುವುದು)

## ಚನ್ನಪಟ್ಟಣ ತಾಲ್ಲೂಕಿನ ಹೊಂಗನೂರು ಕೆರೆ ಏರಿ ರಸ್ತೆ ಅಗಲೀಕರಣ ಬೇಡಿಕೆ ಇರುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೨೭೩ (೯೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚನ್ನಪಟ್ಟಣ ತಾಲ್ಲೂಕಿನ ಹೊಂಗನೂರು ಕೆರೆ ಏರಿ ರಸ್ತೆ ಅಭಿವೃದ್ಧಿ ಮಾಡಲು ಉದ್ದೇಶಿಸಲಾಗಿದೆಯೇ ಮುಂದಾಗಿರುವುದು ನಿಜವೇ;

(ಆ) ಕೆರೆ ಏರಿ ರಸ್ತೆಯ ಆಗಲು ಎಷ್ಟಿದೆ; ಸಾಮಾನ್ಯವಾಗಿ ಕೆರೆ ಏರಿಯ ರಸ್ತೆಯ ಅಗಲ ಎಷ್ಟಿರಬೇಕು;

(ಇ) ಕೆರೆ ಏರಿ ರಸ್ತೆಯನ್ನು ಅಗಲ ಮಾಡಿ ನಂತರ ರಸ್ತೆ ಅಭಿವೃದ್ಧಿ ಮಾಡುವಂತೆ ಹೊಂಗನೂರು ಹಾಗೂ ಕೋಡಿಪುರ ಗ್ರಾಮಸ್ಥರು ಸರ್ಕಾರವನ್ನು ಒತ್ತಾಯಿಸಿ ಪ್ರತಿಭಟನೆಗೆ ಮುಂದಾಗಿದ್ದುದು ನಿಜವೇ;

(ಈ) ಸುತ್ತಮುತ್ತಲಿನ ಗ್ರಾಮಸ್ಥರ ಬೇಡಿಕೆಯಂತೆ, ಸದರಿ ಕೆರೆ ಏರಿ ರಸ್ತೆಯ ಅಗಲೀಕರಣ ಮಾಡಿ, ನಂತರವೇ ರಸ್ತೆ ಅಭಿವೃದ್ಧಿ ಮಾಡುವ ಕುರಿತು ಸರ್ಕಾರದ ನಿಲುವೇನು?

## ವಿದ್ಯುತ್ ಉಳಿಸುವ ವಿಶೇಷ ಎಲ್‌ಇಡಿ ಬಲ್ಬುಗಳ ವಿತರಣೆಯಿಂದ ಬೆಸ್ಕಾಂಗೆ ಆಗಿರುವ ಆರ್ಥಿಕ ಹೊರೆ ಮತ್ತು ಅವುಗಳಿಂದ ಆಗಿರುವ ವಿದ್ಯುತ್ ಉಳಿತಾಯ ಕುರಿತಂತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೨೭೪ (೯೧೫) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎಲ್‌ಇಡಿ ವಿಶೇಷ ಬಲ್ಬುಗಳನ್ನು ಸಾರ್ವಜನಿಕರಿಗೆ ಕಡಿಮೆ ದರದಲ್ಲಿ ಸರ್ಕಾರದಿಂದ ವಿತರಣೆ ಮಾಡಿರುವ ಯೋಜನೆಯ ಕುರಿತು ವಿವರ ನೀಡುವುದು ;

(ಆ) ಇದುವರೆವಿಗೂ ಬೆಸ್ಕಾಂನಿಂದ ಎಷ್ಟು ವಿದ್ಯುತ್ ಉಳಿಸುವ ಬಲ್ಬುಗಳನ್ನು ವಿತರಣೆ ಮಾಡಲಾಯಿತು ; ಇದರಿಂದ ಆಗಿರುವ ಆರ್ಥಿಕ ಹೊರೆ ಎಷ್ಟು ;

(ಇ) ಸದರಿ ಬಲ್ಬುಗಳನ್ನು ಬೆಸ್ಕಾಂ ವ್ಯಾಪ್ತಿಗೆ ಒಳಪಡುವ ಸಾರ್ವಜನಿಕರು ಉಪಯೋಗಿಸಿದ ಪರಿಣಾಮ ಎಷ್ಟು ಪ್ರಮಾಣದ ವಿದ್ಯುತ್ ಉಳಿತಾಯವಾಗಿದೆ ; (ವಿವರ ನೀಡುವುದು)

(ಈ) ಈ ಯೋಜನೆಯಿಂದ ಆಗಿರುವ ಪ್ರಯೋಜನದ ಬಗ್ಗೆ ಅಂಕಿ ಅಂಶಗಳಲ್ಲಿ ನೀಡುವುದು ?

## ೧೫ನೇ ಕೃಷಿ ವಿಜ್ಞಾನ ಸಮಾವೇಶದಲ್ಲಿ ತೆಗೆದುಕೊಂಡ ನಿರ್ಣಯಗಳು ಹಾಗೂ ಬರಗಾಲವನ್ನು ಎದುರಿಸಲು ಸರ್ಕಾರಕ್ಕೆ ನೀಡಿರುವ ಸಲಹೆಯ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ):–**

೧೨೭೫ (೯೧೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನಲ್ಲಿ ನಡೆದ ೧೩ನೇ ಕೃಷಿ ವಿಜ್ಞಾನ ಸಮಾವೇಶದಲ್ಲಿ ತೆಗೆದುಕೊಂಡ ಪ್ರಮುಖ ನಿರ್ಣಯಗಳು ಯಾವುವು ;

(ಆ) ಸದರಿ ಸಮಾವೇಶದಲ್ಲಿ ಕೃಷಿಯನ್ನು ಅಭಿವೃದ್ಧಿಪಡಿಸುವ ವಿಷಯದಲ್ಲಿ ಸರ್ಕಾರಕ್ಕೆ ಮಾಡಿದ ಸಲಹೆಗಳೇನು ; (ವಿವರ ನೀಡುವುದು)

(ಇ) ಬರದ ಸಂದರ್ಭದಲ್ಲಿ ಕೃಷಿ ಚಟುವಟಿಕೆಗಳನ್ನು ನಡೆಸಲು ಯಾವ ರೀತಿಯ ಕ್ರಮ ಕೈಗೊಳ್ಳಲು ಸಲಹೆ ನೀಡಲಾಗಿದೆ ;

(ಈ) ಈ ಸಂಬಂಧ ಸರ್ಕಾರವು ಕೈಗೊಳ್ಳುವ ಮುಂದಿನ ಕ್ರಮಗಳೇನು ?

## ಚಿತ್ರದುರ್ಗ ದಾವಣಗೆರೆ ಜಿಲ್ಲೆಗಳಲ್ಲಿ ಈರುಳ್ಳಿ ಬೆಳೆ ಪರಿಹಾರ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೭೬ (೯೩೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ೨೦೧೬–೧೭ನೇ ಸಾಲಿನಲ್ಲಿ ಎಷ್ಟು ಎಕರೆ ಪ್ರದೇಶದಲ್ಲಿ ಹಾಗೂ ಎಷ್ಟು ಪ್ರಮಾಣದಲ್ಲಿ ಈರುಳ್ಳಿ ಬೆಳೆ ಬೆಳೆಯಲಾಗಿದೆ ; (ಮಾಹಿತಿ ಒದಗಿಸುವುದು)

(ಆ) ಈರುಳ್ಳಿ ಬೆಳೆಗಾರರು ನಷ್ಟ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅವರಿಗೆ ಬೆಂಬಲ ಬೆಲೆ ನೀಡಿ ನಷ್ಟ ಭರಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ ? (ಮಾಹಿತಿ ಒದಗಿಸುವುದು)

## ಕೃಷಿ ಭಾಗ್ಯ ಯೋಜನೆ ಫಲಾನುಭವಿಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೭೭ (೯೩೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ಕೃಷಿ ಭಾಗ್ಯ ಯೋಜನೆಯಡಿ ಪ್ರಯೋಜನ ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕೃಷಿ ಭಾಗ್ಯ ಯೋಜನೆಯಡಿ ೨೦೧೬–೧೭ನೇ ಸಾಲಿನಲ್ಲಿ ಅತಿ ಹೆಚ್ಚು ಆಯ್ಕೆಗೊಂಡ ತಾಲ್ಲೂಕು ಯಾವುದು; (ಮಾಹಿತಿ ಒದಗಿಸುವುದು)

(ಇ) ಚಿತ್ರದುರ್ಗ ಜಿಲ್ಲೆಯಲ್ಲಿ ೨೦೧೬–೧೭ನೇ ಸಾಲಿನಲ್ಲಿ ಕೃಷಿ ಭಾಗ್ಯ ಯೋಜನೆಯಡಿ ಆಯ್ಕೆಗೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು? (ಮಾಹಿತಿ ಒದಗಿಸುವುದು)

## ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್‌ಗಳ ವ್ಯಾಪ್ತಿಯ LED ಲೈಟಿಂಗ್ ಅಳವಡಿಕೆ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೭೮ (೯೩೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿದ್ಯುತ್ ಮಿತವ್ಯಯದ ದೃಷ್ಟಿಯಿಂದ ಕಳೆದ ಮೂರು ವರ್ಷಗಳಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಬರುವ ನಗರಸಭೆ, ಪುರಸಭೆ, ಪಟ್ಟಣ ಪಂಚಾಯುತ್‌ಗಳ ವ್ಯಾಪ್ತಿಯುಲ್ಲಿ ಬೀದಿ ದೀಪಗಳಿಗೆ ಅಳವಡಿಸಲಾಗಿರುವ ಎಲ್‌ಇಡಿ ಲೈಟುಗಳ ಸಂಖ್ಯೆ ಎಷ್ಟು; (ಮಾಹಿತಿ ಒದಗಿಸುವುದು)

(ಆ) ಎಲ್‌ಇಡಿ ಲೈಟುಗಳ ಖರೀದಿಗೆ ಈ ಮೂರು ವರ್ಷಗಳಲ್ಲಿ ವೆಚ್ಚ ಮಾಡಲಾದ ಅನುದಾನ ಎಷ್ಟು? (ಮಾಹಿತಿ ಒದಗಿಸುವುದು)

## ಕೃಷಿ ಭಾಗ್ಯ ಯೋಜನೆ ಫಲಾನುಭವಿಗಳ ಬಗ್ಗೆ

**ಶ್ರೀ ಜಿ. ರಘು ಆಚಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೭೯ (೯೩೬) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೬–೧೭ನೇ ಸಾಲಿನ ಬಜೆಟ್‌ನಲ್ಲಿ ಘೋಷಿತಗೊಂಡ ಕರ್ನಾಟಕ ರಾಜ್ಯ ಕೃಷಿ ಮತ್ತು ರೈತರ ಕಲ್ಯಾಣ ಸಮಿತಿ ರಚನೆಗೊಂಡಿದೆಯೇ ; (ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ರಚನೆಗೊಂಡಿದ್ದು ಯಾವಾಗ ; ಕಾರ್ಯಾರಂಭ ಗೊಳ್ಳಲಿರುವುದು ಯಾವಾಗ ? (ಮಾಹಿತಿ ಒದಗಿಸುವುದು)

## ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೮೦ (೯೪೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ನಾಲ್ಕು ವರ್ಷಗಳ ಅವಧಿಯಲ್ಲಿ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಅಡಿಯಲ್ಲಿ ನಿರ್ಮಾಣಗೊಂಡ ರಸ್ತೆಗಳ ಈಗಿನ ಸ್ಥಿತಿಗತಿಗಳೇನು ;

(ಆ) ಈ ಯೋಜನೆ ಅಡಿಯಲ್ಲಿ ಹದಗೆಟ್ಟ ರಸ್ತೆಗಳನ್ನು ಪುನರ್ ನಿರ್ಮಿಸಲು ಯಾವುದಾದರೂ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆಯೇ ;

(ಇ) ಹಾಗಿದ್ದಲ್ಲಿ, ಯಾವ ಕಾಲ ಮಿತಿಯೊಳಗೆ ಈ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದು ?

## ಹನಿ ನೀರಾವರಿ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೮೧ (೯೪೧) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ತೋಟಗಾರಿಕೆ ಬೆಳೆಗಳಿಗೆ ತುಂತುರು / ಹನಿ ನೀರಾವರಿ ಅಳವಡಿಸಲು ಸಹಾಯಧನ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇದರಲ್ಲಿ ಸಹಾಯಧನ ಪಡೆದ ರೈತರ ಸಂಖ್ಯೆ ಎಷ್ಟು; ಸಹಾಯಧನ ಪಡೆದ ಫಲಾನುಭವಿ ರೈತರ ಹೆಸರು / ಸಹಾಯಧನ ನೀಡಿದಲ್ಲಿ, ಅದರ ಮೊತ್ತವೆಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಾಕಿ ರೈತರಿಗೆ ಸಹಾಯಧನ ಪಾವತಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಟಾರ್ಪಾಲ್‌ಗಳನ್ನು ವಿತರಿಸಲು ಬಿಡುಗಡೆಯಾದ ಅನುದಾನದ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೮೨ (೯೪೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಕೃಷಿ ರೈತರಿಗೆ ಎಷ್ಟು ಟಾರ್ಪಾಲ್ ವಿತರಿಸಲಾಗಿದೆ; ವಿತರಣೆಯಾದ ಟಾರ್ಪಾಲ್‌ಗಳ ಒಟ್ಟು ಅನುದಾನವೆಷ್ಟು? (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದವರನ್ನು ಒಳಗೊಂಡಂತೆ ವಿತರಿಸಲಾದ ಟಾರ್ಪಾಲ್‌ಗಳ ಫಲಾನುಭವಿಗಳೆಷ್ಟು ; (ತಾಲ್ಲೂಕುವಾರು, ಫಲಾನುಭವಿಗಳ ಪೂರ್ಣ ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಟಾರ್ಪಾಲ್ ಸರಬರಾಜು ಮಾಡಲು ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಏಜೆನ್ಸಿಗಳಾವುವು ? (ಇವುಗಳ ಪೂರ್ಣ ವಿವರ ನೀಡುವುದು)

## ಸ್ವಚ್ಛತೆಗಾಗಿ ಪೌರ ಕಾರ್ಮಿಕರನ್ನು ನೇಮಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೮೩ (೯೪೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬರುವ ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ವಾರ್ಡ್‌ಗಳಲ್ಲಿ ಸ್ವಚ್ಛತೆಗಾಗಿ ಎಷ್ಟು ಪೌರ ಕಾರ್ಮಿಕರನ್ನು ನೇಮಿಸಲಾಗಿದೆ ; (ಕಾರ್ಮಿಕರವಾರು, ಸಂಸ್ಥೆಗಳವಾರು, ವಾರ್ಡ್‌ವಾರು ವಿವರ ನೀಡುವುದು)

(ಇ) ಇವರುಗಳಿಗೆ ನೀಡಲಾಗುತ್ತಿರುವ ವೇತನವನ್ನು ಸಕಾಲಕ್ಕೆ ಪಾವತಿಸಲಾಗುತ್ತಿದೆಯೇ ; ಇಲ್ಲವಾದಲ್ಲಿ, ಇದನ್ನು ಸಕಾಲಕ್ಕೆ ಪಾವತಿಸಲು ಕೈಗೊಂಡಿರುವ ಕ್ರಮಗಳೇನು ? (ಸಂಸ್ಥೆಗಳವಾರು ಸ್ಪಷ್ಟ ಮಾಹಿತಿ ನೀಡುವುದು)

## ಕಲಬೆರಕೆ ಹಾಲಿನ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೮೪ (೧೦೫೧) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಿನನಿತ್ಯ ಬೇಕಾದ ಬಹು ಉಪಯೋಗಿ ಹಾಲನ್ನು ಕಲಬೆರಕೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ದಾಖಲಾದ ಇಂತಹ ಪ್ರಕರಣಗಳೆಷ್ಟು ; (ಪೂರ್ಣ ವಿವರ ನೀಡುವುದು)

(ಇ) ಎಳೆಯ ಹಸುಳೆಗಳಿಂದ ಇಳಿ ವಯಸ್ಸಿನ ವಯೋವೃದ್ಧರವರಿಗೆ ಹಾಲನ್ನು ಅವಲಂಬಿಸಿದ್ದು, ಹಾಲಿಗೆ ರಾಸಾಯನಿಕ ಮಿಶ್ರಣ ಮಾಡಿ ಕಲಬೆರಕೆ ಮಾಡುವವರ ಮೇಲೆ ಯಾವ ಸೆಕ್ಷನ್‌ನಡಿ ಪ್ರಕರಣ ದಾಖಲಿಸಲಾಗಿದೆ ; (ಪೂರ್ಣ ವಿವರ ನೀಡುವುದು)

(ಈ) ಬ್ರಾಂಡೆಡ್ ಹಾಲನ್ನು ಕಲಬೆರಕೆ ಮಾಡುವ ಘಟಕಗಳ ಪರವಾನಗಿಯನ್ನು ರದ್ದುಪಡಿಸಿ, ಭಾರಿ ದಂಡವನ್ನು ವಿಧಿಸುವುದರ ಜೊತೆಗೆ ಕ್ರಿಮಿನಲ್ ಪ್ರಕರಣ ಹೂಡುವ ಕಾನೂನು ತಿದ್ದುಪಡಿ ತರುವ ಉದ್ದೇಶ ಸರ್ಕಾರಕ್ಕಿದೆಯೇ ? (ವಿವರ ನೀಡುವುದು)

## ಸಣ್ಣ ಪಟ್ಟಣ ಮತ್ತು ಮಧ್ಯಮ ಪಟ್ಟಣ ಯೋಜನೆಯಡಿ ಮೂಲಭೂತ ಸೌಕರ್ಯ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೮೫ (೯೧೭) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರ, ಚಿಕ್ಕಬಳ್ಳಾಪುರ ಮತ್ತು ಹಾವೇರಿ ಪಟ್ಟಣಗಳ ಸಮಗ್ರ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ ತಲಾ ೫೦ ಕೋಟಿ ಹಣವನ್ನು ಒದಗಿಸಲಾಗುವುದು ಎಂದು ನಗರಾಭಿವೃದ್ಧಿ ಇಲಾಖೆ ಘೋಷಣೆ ಮಾಡಿರುವುದು ನಿಜವೇ ; ಹಾಗಿದ್ದಲ್ಲಿ, ಪ್ರತಿ ಪಟ್ಟಣಕ್ಕೆ ನೀಡಿರುವ ಹಣವೆಷ್ಟು ;

(ಆ) ಈ ನಗರಗಳಿಗೆ ಸಮಗ್ರವಾಗಿ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ;

(ಇ) ಚಾಮರಾಜನಗರ ಜಿಲ್ಲೆಯಲ್ಲಿ ಈ ಯೋಜನೆಯಡಿ (ಸಣ್ಣ ಪಟ್ಟಣ ಮತ್ತು ಮಧ್ಯಮ ಪಟ್ಟಣ ಯೋಜನೆ) ಯಾವ ಮೂಲಭೂತ ಸೌಕರ್ಯಗಳನ್ನು ಒದಗಿಸಿಕೊಡಲಾಗಿದೆ ?

## ಸಂಕಷ್ಟದಲ್ಲಿರುವ ರೈತರ ಸಾಲ ಮನ್ನಾ ಮತ್ತು ಸುರಕ್ಷತೆ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೮೬ (೯೭೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬರ, ಸಾಲ, ಆರ್ಥಿಕ ಸುಸ್ಥಿತಿಯಿಂದ ರಾಜ್ಯದ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಪ್ರಕರಣಗಳು ಜಾಸ್ತಿಯಾಗಿವೆಯೇ ; ಕಳೆದ ಒಂದು ವರ್ಷದಿಂದ ಈ ರೀತಿಯ ಪ್ರಕರಣಗಳು ರಾಜ್ಯದಲ್ಲಿ ಎಲ್ಲೆಲ್ಲಿ ಜರುಗಿವೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ರಾಜ್ಯದ ರೈತರ ಸಂಕಷ್ಟ ಪರಿಹರಿಸಲು ಕೈಗೊಂಡ ಕ್ರಮಗಳೇನು ; ಈ ನಿಟ್ಟಿನಲ್ಲಿ ರೈತರ ಸಾಲ ಮನ್ನಾಗೆ ಸರ್ಕಾರ ಮುಂದಾಗುವುದೇ ;

(ಇ) ಇಲ್ಲದಿದ್ದಲ್ಲಿ, ಕಾರಣಗಳೇನು ; ಬರ ಹಾಗೂ ರೈತರ ನೆರವಿಗೆ ಸರ್ಕಾರ ಮುಂದಾಗದಿರುವುದರಿಂದ ರೈತರ ಸಾವು ನೋವಿನ ಸಂಖ್ಯೆ ಜಾಸ್ತಿಯಾಗುವ ಆತಂಕ ಸರ್ಕಾರಕ್ಕಿಲ್ಲವೇ ;

(ಈ) ಒಟ್ಟಾರೆಯಾಗಿ ರೈತರ ಮೇಲಿರುವ ಸಾಲದ ಪ್ರಮಾಣವೆಷ್ಟು; (ಜಿಲ್ಲಾವಾರು ಅಂಕಿ-ಅಂಶ ವಿವರ ನೀಡುವುದು)

(ಉ) ಬೆಳೆ ನಷ್ಟದ ಅಂದಾಜನ್ನು ಇಲಾಖೆ ಸಮರ್ಪಕವಾಗಿ ನಿರ್ವಹಿಸದೆ ವರದಿ ನೀಡುವ ಪ್ರಕರಣಗಳ ಬಗ್ಗೆ ಸರ್ಕಾರದ ನಿಲುವೇನು? (ಕ್ರಮದ ವಿವರಗಳನ್ನು ಒದಗಿಸುವುದು)

## ಲೋಕೋಪಯೋಗಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಡಿಪ್ಲೋಮಾ ವಿದ್ಯಾರ್ಥಿಹೊಂದಿರುವ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಪದೋನ್ನತಿ ಬಗ್ಗೆ

**ಶ್ರೀ ಕೆ.ಬಿ. ಶಾಣಪ್ಪ (ನಾಮನಿರ್ದೇಶನ ಹೊಂದಿದವರು):-**

೧೨೮೭ (೯೪೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ಡಿಪ್ಲೋಮಾ ವಿದ್ಯಾರ್ಹತೆಯ ಒಟ್ಟು ಎಷ್ಟು ಜನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಹುದ್ದೆಯಲ್ಲಿ ಕರ್ತವ್ಯನಿರ್ವಹಿಸುತ್ತಿದ್ದಾರೆ;

(ಆ) ಬೇರೆ ಯಾವ ಯಾವ ಇಲಾಖೆಯಲ್ಲಿ ಲೋಕೋಪಯೋಗಿ ಇಲಾಖೆಯ ಈ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ವರ್ಗಾವಣೆ ಮೇರೆಗೆ ಎರವಲು ಸೇವೆಯ ಮೇರೆಗೆ ಕರ್ತವ್ಯನಿರ್ವಹಿಸುತ್ತಿದ್ದಾರೆ;

(ಇ) ಡಿಪ್ಲೋಮಾ ವಿದ್ಯಾರ್ಹತೆಯ ಮೇರೆಗೆ ಕರ್ತವ್ಯನಿರ್ವಹಿಸುತ್ತಿರುವ ಈ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ತಮ್ಮ ಸೇವಾ ಅವಧಿಯಲ್ಲಿ ಒಟ್ಟು ಎಷ್ಟು ಪದೋನ್ನತಿಗಳು ಪಡೆದುಕೊಳ್ಳುವ ನಿಯಮ ಸರ್ಕಾರದಲ್ಲಿದೆ ;

(ಈ) ಕರ್ನಾಟಕ ರಾಜ್ಯ ಹೊರತುಪಡಿಸಿ ಬೇರೆ ರಾಜ್ಯಗಳಲ್ಲಿ ಡಿಪ್ಲೋಮಾ ಇಂಜಿನಿಯರ್‌ಗಳು ತಮ್ಮ ಸೇವಾವಧಿಯಲ್ಲಿ ಕಾರ್ಯನಿರ್ವಾಹಕ ಅಭಿಯಂತರರೆಂದು ಪದೋನ್ನತಿ ಪಡೆದು ನಿವೃತ್ತಿ ಹೊಂದಿರುವವರ ಮಾಹಿತಿ ಸರ್ಕಾರಕ್ಕೆ ಇದೆಯೇ ; ಇದ್ದಲ್ಲಿ ಇದರ ಪೂರ್ಣ ಮಾಹಿತಿ ಒದಗಿಸುವುದು ;

(ಉ) ಕರ್ನಾಟಕದಲ್ಲಿ ಲೋಕೋಪಯೋಗಿ ಇಲಾಖೆಯ ಡಿಪ್ಲೋಮಾ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ, ಇದುವರೆಗೆ ಕಾರ್ಯನಿರ್ವಾಹಕ ಅಭಿಯಂತರ ಹುದ್ದೆಗೆ ಬಡ್ತಿ ನೀಡದೆ ಇರುವುದಕ್ಕೆ ಕಾರಣಗಳೇನು ;

(ಊ) ಸರ್ಕಾರ ಈ ಇಂಜಿನಿಯರ್‌ಗಳಿಗೆ ಕಾರ್ಯನಿರ್ವಾಹಕ ಅಭಿಯಂತರ ಹುದ್ದೆಗೆ ಪದೋನ್ನತಿ ನೀಡಲು ಸಮಿತಿಯನ್ನೇನಾದರೂ ರಚಿಸಿದೆಯೇ ; ಹಾಗಿದ್ದಲ್ಲಿ, ಸದರಿ ಸಮಿತಿಯ ಶಿಫಾರಸ್ಸಿನ ಮೇರೆಗೆ ಪದೋನ್ನತಿ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಶುಸಂಗೋಪನೆ ಇಲಾಖೆಯಲ್ಲಿನ ಯೋಜನೆ ಕಾರ್ಯಕ್ರಮಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೮೮ (೯೫೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ನಾಲ್ಕು ವರ್ಷಗಳಲ್ಲಿ ಪಶುಸಂಗೋಪನೆ ಇಲಾಖೆಯಿಂದ ಕೃಷಿಕರಿಗೆ ಹಮ್ಮಿಕೊಂಡ ಕಾರ್ಯಕ್ರಮಗಳು ; ಯೋಜನೆಗಳಾವುವು ; (ವಿವರಗಳ ಮಾಹಿತಿ ನೀಡುವುದು)

(ಆ) ಕೊಡಗು ಜಿಲ್ಲೆಗೆ ಈ ಯೋಜನೆ ಕಾರ್ಯಕ್ರಮಗಳಡಿಯಲ್ಲಿ ನೀಡಲಾದ ಅನುದಾನ ಎಷ್ಟು ; (ಫಲಾನುಭವಿಗಳ ವಿವರಗಳೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿರುವ ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಸ್ಥಳಗಳ ಹೆಸರಿನೊಂದಿಗೆ ಅಲ್ಲಿನ ಸಿಬ್ಬಂದಿಗಳು ಹಾಗೂ ಜಿಲ್ಲೆಯಲ್ಲಿನ ಜಾನುವಾರುಗಳ ವಿವರಗಳೊಂದಿಗೆ ತಾಲ್ಲೂಕುವಾರು ವಿವರ ನೀಡುವುದು) ಕೊರತೆ ಇರುವ ವೈದ್ಯರು, ಸಿಬ್ಬಂದಿಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ವಿದ್ಯುತ್ ಎಕ್ಸ್‌ಪ್ರೆಸ್ ಲೈನ್‌ಗಳ ಕಾಮಗಾರಿಗಳು ಕುಂಠಿತಗೊಂಡಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೮೯ (೯೫೪) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೫–೧೬ನೇ ಸಾಲಿನಲ್ಲಿ ರಾಜ್ಯದಲ್ಲಿನ ಎಷ್ಟು ಗ್ರಾಮ ಪಂಚಾಯತ್‌ಗಳ ವ್ಯಾಪ್ತಿಯಲ್ಲಿ ವಿದ್ಯುತ್ ಎಕ್ಸ್‌ಪ್ರೆಸ್ ಮಂಜೂರು ಮಾಡಲಾಗಿದೆ ;

(ಇ) ಕೊಡಗು ಜಿಲ್ಲೆಗೆ ಮಂಜೂರು ಮಾಡಲಾದ ವಿದ್ಯುತ್ ಎಕ್ಸ್‌ಪ್ರೆಸ್ ಲೈನ್‌ನ ಕಾಮಗಾರಿಗಳು ಯಾವ ಹಂತದಲ್ಲಿದೆ ; (ಪ್ರಗತಿ ವಿವರಗಳನ್ನು ನೀಡುವುದು)

(ಈ) ಮಂಜೂರು ಮಾಡಲಾದ ವಿದ್ಯುತ್ ಎಕ್ಸ್‌ಪ್ರೆಸ್ ಲೈನ್‌ನ ಕಾಮಗಾರಿಗಳು ಅಪೂರ್ಣಗೊಂಡಿದ್ದಲ್ಲಿ ಕಾರಣಗಳೇನು ;

(ಉ) ಈ ವಿದ್ಯುತ್ ಎಕ್ಸ್‌ಪ್ರೆಸ್ ಲೈನ್‌ನ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಯಾವಾಗ ?

## ೨೦೧೩ ರಿಂದ ೨೦೧೭ರವರೆಗೆ ಹಾವೇರಿ ಜಿಲ್ಲೆಗೆ ಕೃಷಿ ಇಲಾಖೆಯ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೯೦ (೯೬೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೩ ರಿಂದ ೨೦೧೭ನೇ ಫೆಬ್ರವರಿ–೨೮ ರವರೆಗೆ ಹಾವೇರಿ ಜಿಲ್ಲೆಗೆ ಕೃಷಿ ಇಲಾಖೆಯಿಂದ ಎಸ್.ಸಿ.ಪಿ/ಟಿ.ಎಸ್.ಪಿ ಅಡಿಯಲ್ಲಿ ಬಿಡುಗಡೆಯಾದ ಹಣ ಎಷ್ಟು ; ಆ ಪೈಕಿ ಖರ್ಚು ಮಾಡಲಾದ ಹಣ ಎಷ್ಟು ;

(ಆ) ಯಾವ ಯಾವ ಕಾಮಗಾರಿ ಹಾಗೂ ಕಾರ್ಯಕ್ರಮಗಳಿಗೆ ಎಷ್ಟೆಷ್ಟು ಹಣ ನೀಡಲಾಗಿದೆ ; ಫಲಾನುಭವಿಗಳಿಗೆ ನೀಡಿದ ಮೊತ್ತ ಎಷ್ಟು ಮತ್ತು ಉದ್ದೇಶಗಳೇನು ; (ತಾಲ್ಲೂಕುವಾರು, ವರ್ಷವಾರು ವಿವರ ನೀಡುವುದು)

(ಇ) ಕೃಷಿ ಇಲಾಖಾ ವತಿಯಿಂದ ಅನುಷ್ಠಾನಗೊಳಿಸುವ ಕಾರ್ಯಕ್ರಮಗಳು ಯಾವುವು ? (ವಿವರ ಒದಗಿಸುವುದು)

## ಹಾವೇರಿ ಜಿಲ್ಲೆಯಲ್ಲಿ ೨೦೧೫  ರಿಂದ ೨೦೧೮ ರವರೆಗೆ ಬೆಳೆ ವಿಮೆ ಮಾಡಿದ ರೈತರ ಸಂಖ್ಯೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೯೧ (೯೬೩) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ೨೦೧೫ ರಿಂದ ೨೦೧೮ ರವರೆಗೆ ಬೆಳೆ ವಿಮೆ ಮಾಡಿದ ರೈತರ ಸಂಖ್ಯೆ ಎಷ್ಟು; ಇವರು ಬೆಳೆ ವಿಮೆಗೆ ತುಂಬಿದ ಮೊತ್ತ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈಗಾಗಲೇ ಜಿಲ್ಲೆಯಲ್ಲಿ ಎಷ್ಟು ರೈತರಿಗೆ ಬೆಳೆ ವಿಮೆ ಮಂಜೂರಾಗಿದೆ ; ಎಷ್ಟು ಹಣ ಮಂಜೂರಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈಗಾಗಲೇ ಎಷ್ಟು ಜನ ರೈತರ ಖಾತೆಗೆ ವಿಮಾ ಮಾಡಲಾಗಿದೆ ; ಇದರ ಹಣ ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಜಿಲ್ಲೆಯ ಇನ್ನು ಎಷ್ಟು ಜನರಿಗೆ ಬೆಳೆ ವಿಮೆ ವಿತರಣೆ ಮಾಡಿರುವುದಿಲ್ಲ, ಮಾಡದಿರಲು ಕಾರಣವೇನು ; ಇದರ ಮೊತ್ತ ಎಷ್ಟು ; ಮತ್ತು ಯಾವ ಯಾವ ಬ್ಯಾಂಕಿನಲ್ಲಿ ಯಾವಾಗ ವಿವರಣೆ ಮಾಡಲಾಗುವುದು ?

## ಹಾವೇರಿ ಜಿಲ್ಲೆಯಲ್ಲಿ ೨೦೧೩ ರಿಂದ ೨೦೧೮ ರವರೆಗೆ ಸತ್ತ ಕುರಿ, ಮೇಕೆ ಆಕಳುಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೯೨ (೯೬೨) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ೨೦೧೩ ರಿಂದ ೨೦೧೭ ರವರೆಗೆ ಸತ್ತ ಕುರಿ, ಮೇಕೆ, ಆಕಳು ಎಷ್ಟು ; (ವರ್ಷವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಸತ್ತಂತಹ ಮೇಕೆ, ಕುರಿ ಹಾಗೂ ಆಕಳ ಮಾಲೀಕರಿಗೆ ಪ್ರಾಣಿಗಳವಾರು ಪ್ರತ್ಯೇಕವಾಗಿ ಎಷ್ಟು ರೂಗಳಂತೆ ಪರಿಹಾರ ವಿತರಿಸಲಾಗಿದೆ ; (ವರ್ಷವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಇನ್ನು ಎಷ್ಟು ಜಾನುವಾರುಗಳ ಮಾಲೀಕರಿಗೆ ಪರಿಹಾರ ಕೊಡಬೇಕಾಗಿದೆ ; ಯಾವಾಗ ಮಂಜೂರು ಮಾಡಲಾಗುತ್ತದೆ ? ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿ ರೈತ ಸಂಘಟನೆಗಳು ಬೆಳೆ ವಿಮೆ ಬಗ್ಗೆ ಪ್ರತಿಭಟಿಸುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೯೩ (೯೬೧) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾವೇರಿ ಜಿಲ್ಲೆಯಲ್ಲಿ ರೈತ ಸಂಘಟನೆಗಳು ಬೆಳೆ ವಿಮೆ ಬಗ್ಗೆ ಅನೇಕ ದಿನಗಳಿಂದ ಪ್ರತಿಭಟನೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈ ಬಗ್ಗೆ ಸರ್ಕಾರದ ನಿಲುವೇನು ;

(ಆ) ಜನರ ಬೇಡಿಕೆಯನ್ನು ಸರ್ಕಾರ ಎಷ್ಟು ದಿನದೊಳಗೆ ಬಗೆಹರಿಸುತ್ತದೆ ; ಬಗೆಹರಿಸಲು ಸರ್ಕಾರಕ್ಕಿರುವ ತೊಂದರೆಗಳೇನು ?

# ಹಾವೇರಿ ಜಿಲ್ಲೆಯ ಲೋಕೋಪಯೋಗಿ ಇಲಾಖೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಅನುದಾನ ಬಿಡುಗಡೆಯಾದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೯೪ (೯೬೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಹಾವೇರಿ ಜಿಲ್ಲೆಯ ಲೋಕೋಪಯೋಗಿ ಇಲಾಖೆಗೆ ಯಾವ ಯಾವ ಲೆಕ್ಕ ಶೀರ್ಷಿಕೆಯಡಿ ಎಷ್ಟೆಷ್ಟು ಹಣ ಬಂದಿದೆ ; (ಕಳೆದ ೩ ವರ್ಷಗಳ ವಿವರ ನೀಡುವುದು)

(ಆ) ಯಾವ ಯಾವ ಲೆಕ್ಕ ಶೀರ್ಷಿಕೆಯಡಿ ಎಷ್ಟೆಷ್ಟು ಹಣವನ್ನು ಹಂಚಿಕೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಆ ಹಣವನ್ನು ಯಾವ ಯಾವ ಕಾಮಗಾರಿಗಳಿಗೆ ಹಂಚಿಕೆ ಮಾಡಲಾಗಿದೆ ;

(ಈ) ಸದರಿ ಕಾಮಗಾರಿಗಳ ಪೈಕಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ಕಾಮಗಾರಿ ವಹಿಸಿಕೊಂಡ ಕಂಟ್ರಾಕ್ಟರುಗಳ ಹೆಸರು, ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಉ) ಈ ಕಾಮಗಾರಿಗಳ ಗುಣಮಟ್ಟದಲ್ಲಿ ಲೋಪದೋಷಗಳು ಕಂಡು ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಜರುಗಿಸಲಾಗಿದೆ ?

## ವಿದ್ಯುತ್ ಉತ್ಪಾದನೆ ಕೊರತೆಯ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೯೫ (೧೦೧೯) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಳೆ ವಿಫಲವಾಗಿರುವುದರಿಂದ, ವಿದ್ಯುತ್ ಉತ್ಪಾದನೆಯಲ್ಲಿ ಆಗಿರುವ ಕೊರತೆಯ ಪ್ರಮಾಣವೆಷ್ಟು;

(ಆ) ವಿದ್ಯುತ್ ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಮುಂಜಾಗ್ರತಾ ಕ್ರಮವಾಗಿ ವಿದ್ಯುತ್ ಖರೀದಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಕೆ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೯೬ (೧೦೧೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಿವಮೊಗ್ಗ ಜಿಲ್ಲೆ ಸೊರಬ ತಾಲ್ಲೂಕಿನಲ್ಲಿ ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಕೆ ಕೋರಿ ಎಷ್ಟು ಜನ ಅರ್ಜಿ ಸಲ್ಲಿಸಿದ್ದಾರೆ ; (ಗ್ರಾಮವಾರು ವಿವರ ನೀಡುವುದು)

(ಆ) ಈ ಪೈಕಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಿ ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಸಲಾಗಿದೆ ; ಬಾಕಿ ಇರುವ ಅರ್ಜಿಗಳಿಗೆ ಸಂಬಂಧಪಟ್ಟಂತೆ ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಸದೆ ಇರಲು ಕಾರಣಗಳೇನು ;

(ಇ) ತಾಲ್ಲೂಕಿನ ಬೆಟ್ಟದಕೂರ್ಲಿ ಗ್ರಾಮದಲ್ಲಿ ಲೋವೋಲ್ಟೇಜ್ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸಮಸ್ಯೆ ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು ;

(ಈ) ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಕೆ ಕೋರಿ ಬಂದಿರುವ ಎಲ್ಲಾ ಅರ್ಜಿಗಳನ್ನು ಯಾವಾಗ ಇತ್ಯರ್ಥಪಡಿಸಲಾಗುವುದು ?

## ಗದಗ ಜಿಲ್ಲೆ ವ್ಯಾಪ್ತಿಯ ಗಜೇಂದ್ರಗಡ ಪುರಸಭೆಯ ಕುಡಿಯುವ ನೀರಿನ ಸಮಸ್ಯೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೨೯೭ (೧೦೪೩) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗಜೇಂದ್ರಗಡ ಪಟ್ಟಣದಲ್ಲಿ ಪುರಸಭೆ ವತಿಯಿಂದ ಎರಡೂವರೆ (೨ ೧/೨) ವರ್ಷಗಳ ಹಿಂದೆ ೨ ದಿನಕ್ಕೆ ಒಂದು ಬಾರಿ ಕುಡಿಯುವ ನೀರನ್ನು ನಾಗರಿಕರಿಗೆ ಪೂರೈಸಲಾಗುತ್ತಿತ್ತು ; ಆದರೆ ಸದ್ಯ ೧೫–೨೦ ದಿನಕ್ಕೆ ಒಂದು ಬಾರಿ ನೀರು ಪೂರೈಕೆಯಾಗುತ್ತಿದೆ ಎಂಬ ಸಂಗತಿ ನಿಜವೆ ;

(ಆ) ಹಾಗಿದ್ದಲ್ಲಿ, ಕುಡಿಯುವ ನೀರಿನ ವಿತರಣೆಯಲ್ಲಿ ಇಷ್ಟೊಂದು ವಿಳಂಬವಾಗುಲು ಕಾರಣಗಳೇನು ;

(ಇ) ಸಮರ್ಪಕ ನೀರು ಪೂರೈಕೆಯಲ್ಲಿ ಪುರಸಭೆ ಕೈಗೊಂಡಿರುವ ; ಕ್ರಮವೇನು ;

(ಈ) ಬರುವ ಮೇ ೨೦೧೭ರಲ್ಲಿ ಈ ಸಮಸ್ಯೆ ಇನ್ನೂ ಹೆಚ್ಚು ಗಂಭೀರವಾಗಲಿದ್ದು, ಅದಕ್ಕಾಗಿ ಯಾವ ಪೂರ್ವಭಾವಿ ಸಿದ್ಧತೆಯನ್ನು ಪುರಸಭೆ ಆಡಳಿತ ಮಾಡಿಕೊಂಡಿರುತ್ತದೆ ; (ವಿವರ ನೀಡುವುದು)

(ಉ) ರೋಣ ಪಟ್ಟಣದಲ್ಲಿಯೂ ಸಹಿತ ಪುರಸಭೆಯಿಂದ ಕುಡಿಯುವ ನೀರಿನ ಪೂರೈಕೆಯಲ್ಲಿ ಸಮಸ್ಯೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ಸರಿಪಡಿಸಲು ಏನು ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ನಿರ್ಮಾಣ ಕಾರ್ಯ ಮತ್ತು ತಗುಲಿದ ವೆಚ್ಚ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೨೯೮ (೯೮೨) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ಶಂಕು ಸ್ಥಾಪನೆ ಮತ್ತು ಅವುಗಳ ಉದ್ಘಾಟನೆ ಯಾವ ಯಾವ ವರ್ಷದಲ್ಲಿ ಜರುಗಿದೆ ; ಆ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದ ಮುಖ್ಯ ಮಂತ್ರಿಗಳು ಹಾಗೂ ಇತರೆ ನಾಯಕರುಗಳು ಯಾರ‍್ಯಾರು ; (ಪೂರ್ಣ ವಿವರ ನೀಡುವುದು)

(ಆ) ಸದರಿ ಎರಡೂ ಕಟ್ಟಡಗಳ ನಿರ್ಮಾಣ ಮಾಡಲು ತೆಗೆದುಕೊಂಡ ಅವಧಿ ಎಷ್ಟು ; (ಮಾಹಿತಿ ನೀಡುವುದು)

(ಇ) ವಿಧಾನಸೌಧ ಮತ್ತು ವಿಕಾಸಸೌಧ ಕಟ್ಟಡಗಳ ನಿರ್ಮಾಣಕ್ಕೆ ನಿಗಧಿ ಮಾಡಿದ್ದ ಅಂದಾಜು ವೆಚ್ಚ ಎಷ್ಟು ; ಅಂತಿಮವಾಗಿ ಖರ್ಚು ಮಾಡಿದ ವೆಚ್ಚ ಎಷ್ಟು ; (ಪೂರ್ಣ ವಿವರ ನೀಡುವುದು)

(ಈ) ಈ ಎರಡೂ ಕಟ್ಟಡಗಳ ವಿನ್ಯಾಸವನ್ನು ಮಾಡಿದವರು ಯಾರು ; ಕಟ್ಟಡಗಳ ನಿರ್ಮಾಣ ಮಾಡಲು ಕಾರಣೀಕರ್ತೃಗಳಾದ ನಾಯಕರನ್ನು ಸದಾ ನೆನಪಿಸಿಕೊಳ್ಳಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಬೀದರ್ ಜಿಲ್ಲೆಯಲ್ಲಿ ಪಂಪ್‌ಸೆಟ್‌ಗಳಿಗೆ ಟ್ರಾನ್ಸ್‌ಫಾರಂ ಅಳವಡಿಸುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೯೯ (೯೭೬) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ೨೦೧೫–೧೬ನೇ ಹಾಗೂ ೨೦೧೬–೨೦೧೭ನೇ ಸಾಲಿನಲ್ಲಿ ಎಷ್ಟು ಫಲಾನುಭವಿಗಳಿಗೆ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ವಿತರಣೆ ಮಾಡಿರುವ ಪಂಪ್‌ಸೆಟ್‌ಗಳಿಗೆ ಟ್ರಾನ್ಸ್‌ಫಾರಂಗಳನ್ನು ಅಳವಡಿಕೆ ಮಾಡಲಾಗಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇನ್ನೂ ಎಷ್ಟು ಪಂಪ್‌ಸೆಟ್‌ಗಳಿಗೆ ಟ್ರಾನ್ಸ್‌ಫಾರಂ ಅಳವಡಿಕೆ ಮಾಡಲು ಬಾಕಿ ಇವೆ ? (ವಿವರ ನೀಡುವುದು)

## ರಾಷ್ಟ್ರೀಯ, ರಾಜ್ಯ ಮತ್ತು ಜಿಲ್ಲಾ ಮುಖ್ಯ ರಸ್ತೆಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) :–**

೧೩೦೦ (೯೯೧) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಕಿ.ಮೀ. ಉದ್ದದ ರಾಷ್ಟ್ರೀಯ, ರಾಜ್ಯ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳು ಅಸ್ತಿತ್ವದಲ್ಲಿವೆ ;

(ಆ) ಯಾವ ಯಾವ ತಾಲ್ಲೂಕುಗಳಲ್ಲಿ ಅಂತಹ ರಸ್ತೆಗಳು ಹಾದು ಹೋಗಿವೆ ; (ರಸ್ತೆವಾರು ಮಾಹಿತಿ ನೀಡುವುದು)

(ಇ) ಈ ರಸ್ತೆಗಳ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಇದುವರೆಗೆ ಯಾವ ರಸ್ತೆಗೆ, ಎಷ್ಟು ಹಣವನ್ನು ವೆಚ್ಚ ಮಾಡಲಾಗಿದೆ ; (ವಿವರ ನೀಡುವುದು)

(ಉ) ಯಾವ ಯಾವ ರಸ್ತೆಗಳ ಕಾಮಗಾರಿ ಕಳಪೆ ಎಂದು ಗುರುತಿಸಲಾಗಿದೆ ; ಆ ಕಳಪೆ ಕಾಮಗಾರಿಗಳಿಗೆ ಕಾರಣರಾರು ; ಅವರುಗಳ ಮೇಲೆ ಯಾವ ಕ್ರಮ ಜರುಗಿಸಲಾಗಿದೆ ? (ರಸ್ತೆವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ತೊಗರಿ ಖರೀದಿ ಮಾಡುವ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೧ (೯೭೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ರೈತರಿಂದ ಇಲ್ಲಿಯವರೆಗೆ ಖರೀದಿ ಮಾಡಿದ ತೊಗರಿ ಬೆಳೆ ಎಷ್ಟು ; ಎಷ್ಟು ಜನರು ಖರೀದಿ ಕೇಂದ್ರದಲ್ಲಿ ನೋಂದಣಿ ಮಾಡಿಸಿದ್ದಾರೆ ;

(ಆ) ಮಾರಾಟ ಮಾಡಿದ ರೈತರ ಖಾತೆಗಳಿಗೆ ಹಣ ಜಮಾ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಎಷ್ಟು ಹಣ ಜಮಾ ಮಾಡಲಾಗಿದೆ ; ಇನ್ನು ಎಷ್ಟು ಜಮಾ ಮಾಡಲು ಬಾಕಿ ಇದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ತಾಲ್ಲೂಕು ರಸ್ತೆಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೨ (೯೭೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯ ತಾಲ್ಲೂಕುಗಳಲ್ಲಿ ಅನುಷ್ಠಾನಗೊಳಿಸುತ್ತಿರುವ ರಸ್ತೆಗಳ ಕಾಮಗಾರಿ ಮಂಜೂರು ಆಗಿದ್ದು ಯಾವಾಗ ; (ತಾಲ್ಲೂಕುವಾರು, ರಸ್ತೆವಾರು ವಿವರ ನೀಡುವುದು)

(ಆ) ಈ ರಸ್ತೆ ಕಾಮಗಾರಿ ಅಂದಾಜು ವೆಚ್ಚ ಎಷ್ಟು ; ಎಷ್ಟು ಕಾಮಗಾರಿ ಪೂರ್ಣಗೊಂಡಿದೆ ; (ವಿವರ ನೀಡುವುದು) ಉಳಿದಿರುವ ರಸ್ತೆಗಳ ಕಾಮಗಾರಿಗಳು ಪೂರ್ಣಗೊಳ್ಳುವುದು ಯಾವಾಗ ; (ವಿವರ ನೀಡುವುದು)

(ಇ) ೨೦೧೫–೨೦೧೬ನೇ ಹಾಗೂ ೨೦೧೬–೧೭ನೇ ಸಾಲಿನಲ್ಲಿ ರಸ್ತೆ ನಿರ್ವಹಣೆಗಾಗಿ ಖರ್ಚು ಮಾಡಿದ ಅಂದಾಜು ವೆಚ್ಚ ಎಷ್ಟು ? (ವಿವರ ನೀಡುವುದು)

## ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೩ (೧೦೦೨) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸೌರ ವಿದ್ಯುತ್ ನೀತಿ ೨೦೧೪–೨೦೨೧ರ ಅಡಿಯಲ್ಲಿ ಸೌರ ವಿದ್ಯುತ್ ಉತ್ಪಾದನೆ ಹೆಚ್ಚಿಸಲು ವಿಶೇಷ ಯೋಜನೆ ಜಾರಿಗೆ ತರಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ಯೋಜನೆ ಅಡಿಯಲ್ಲಿ ಎಷ್ಟು ರೈತರು ಸೌರ ವಿದ್ಯುತ್ ಉತ್ಪಾದನೆಗೆ ಅರ್ಜಿಯನ್ನು ಸಲ್ಲಿಸಿರುತ್ತಾರೆ ; (ರೈತರ ಹೆಸರು ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಯೋಜನೆ ಅಡಿಯಲ್ಲಿ ಒಂದೇ ಕುಟುಂಬಕ್ಕೆ ಟೆಂಡರ್ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಈ ಟೆಂಡರ್ ಅವ್ಯವಹಾರದಲ್ಲಿ ತೊಡಗಿದವರ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ?

## ವೃಂದ ಮತ್ತು ನೇಮಕಾತಿ ನಿಯಮ ಪರಿಷ್ಕರಣೆ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೪ (೧೦೦೩) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಕಿರಿಯ ಅಭಿಯಂತರರ ಹುದ್ದೆಯಿಂದ ಸಹಾಯಕ ಅಭಿಯಂತರರ ವಿಭಾಗ–೨ ಹುದ್ದೆಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವರ್ಗದವರಿಗೆ ೧೯೯೬ ರಿಂದ ಇದುವರೆಗೆ ಅನುಕ್ರಮವಾಗಿ ಬಡ್ತಿ ನೀಡಿರುವ ಹುದ್ದೆಗಳೆಷ್ಟು ;

(ಆ) ಹಾಗಿದ್ದಲ್ಲಿ, ಮೀಸಲಾಗಿ ನಿಯಮವನ್ನು ಅನುಸರಿಸಲಾಗಿದೆಯೇ ; ನಿಯಮ ಪಾಲಿಸಿದ್ದಲ್ಲಿ ಡಿ.ಪಿ.ಎ.ಆರ್. ಅಧಿಸೂಚನೆ ಸಂಖ್ಯೆ: ಡಿ.ಪಿ.ಎ.ಆರ್ ೧೨೬ ಎಸ್.ಸಿ.ಆರ್. ೧೯೮೨ ದಿನಾಂಕ: ೨೬–೧೧–೧೯೮೪ ರಂತೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವರ್ಗದ ಕಿರಿಯ ಇಂಜಿನೀಯರುಗಳಿಗೆ ಸಹಾಯಕ ಇಂಜಿನೀಯರ್ ವಿಭಾಗ–೨ ಬಡ್ತಿ ನೀಡುವ ಬಗ್ಗೆ ಅರ್ಹತಾದಾಯಕ ಸೇವೆಯನ್ನು ಪರಿಗಣಿಸಲಾಗಿದೆಯೇ ;

(ಇ) ಪರಿಗಣಿಸಿದ್ದಲ್ಲಿ, ಇವರುಗಳ ಸೇವೆಯನ್ನು ೮ ವರ್ಷಗಳಿಂದ ೩ ವರ್ಷಗಳಿಗೆ ಕಡಿತಗೊಳಿಸುವ ಬಗ್ಗೆ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರಲು ಇದುವರೆಗೆ ತೆಗೆದುಕೊಂಡ ಕ್ರಮಗಳೇನು ;

(ಈ) ಇಲಾಖೆಯಲ್ಲಿ ಡಿಪ್ಲೋಮಾ ಹೊಂದಿದ ಅಭಿಯಂತರರುಗಳಿಗೆ ಕಾರ್ಯಪಾಲಕ ಅಭಿಯಂತರರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ತಿದ್ದುಪಡಿ ತರುವ ಬಗ್ಗೆ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ;

(ಉ) ಲೋಕೋಪಯೋಗಿ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಇಂಜಿನೀಯರುಗಳನ್ನು ವಿಲೀನಗೊಳಿಸುವ ಬಗ್ಗೆ ಮೀಸಲಾತಿ ನಿಯಮಗಳನ್ನು ಅನುಸರಿಸಲಾಗಿದೆಯೇ ; (ಸಂಪೂರ್ಣ ವಿವರ ಒದಗಿಸುವುದು)

(ಊ) ಲೋಕೋಪಯೋಗಿ ಇಲಾಖೆಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ವಿಲೀನಗೊಂಡಿರುವ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ವರ್ಗದ ವಿವಿಧ ದರ್ಜೆಯ ಅಭಿಯಂತರರುಗಳು ಎಷ್ಟು ; ಲೋಕೋಪಯೋಗಿ ಇಲಾಖೆಯಿಂದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ವಿಲೀನಗೊಂಡ ಅಭಿಯಂತರರುಗಳಿಗೆ ಬಡ್ತಿ ನೀಡುವ ಬಗ್ಗೆ ಯಾವ ರೀತಿ ಮೀಸಲಾತಿ ನಿಯಮವನ್ನು ಪಾಲಿಸಲಾಗಿದೆ ? (ವಿವರ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಪಶುಭಾಗ್ಯ ಯೋಜನೆಯ ಫಲಾನುಭವಿಗಳ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೫ (೧೦೩೫) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಪಶುಭಾಗ್ಯ ಯೋಜನೆಯಡಿ ಅನುದಾನ/ ಸಹಾಯಧನ ನೀಡಿದ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಪಶುಭಾಗ್ಯ ಯೋಜನೆ ಪ್ರಾರಂಭವಾದಗಿನಿಂದ ಇಲ್ಲಿಯವರೆಗೆ ಎಷ್ಟು ಫಲಾನುಭವಿಗಳಿಗೆ ಯೋಜನೆಯ ಲಾಭ ದೊರೆತಿದೆ ; (ವರ್ಷವಾರು, ತಾಲ್ಲೂಕುವಾರು, ವರ್ಗವಾರು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಇತರೆ ಸಂಪೂರ್ಣ ವಿವರ ನೀಡುವುದು)

(ಇ) ಸದರಿ ಯೋಜನೆಯ ಮಾನದಂಡ/ನಿಯಮಗಳೇನು ಹಾಗೂ ಈಗಿರುವ ಮಾನದಂಡಗಳನ್ನು ಮತ್ತಷ್ಟು ; ಸರಳೀಕರಿಸಿ ರೈತ ಸ್ನೇಹಿಯನ್ನಾಗಿಸುವ ಉದ್ದೇಶ ಇಲಾಖೆಯ ಮುಂದಿದೆಯೇ ?

## ಕೊಡಗು ಜಿಲ್ಲೆಯ ರಸ್ತೆಗಳ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ(ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦೬ (೧೦೩೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ನಿರ್ಮಾಣಗೊಂಡ/ದುರಸ್ಥಿಯಾದ ರಸ್ತೆಗಳು ಯಾವುವು ; (ವಿವರ ನೀಡುವುದು) (೨೦೧೨–೧೩ ರಿಂದ ಇಲ್ಲಿಯುವರೆಗೆ ವರ್ಷಾವಾರು, ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೧೬–೧೭ನೇ ಸಾಲಿನಲ್ಲಿ ಜಿಲ್ಲೆಯಲ್ಲಿ ನಿರ್ಮಾಣ ಮಾಡಲಿರುವ/ ಮೇಲ್ದರ್ಜೆಗೇರಿಸಲಿರುವ/ ದುರಸ್ಥಿಗೊಳಿಸಲಿರುವ ರಸ್ತೆಗಳು ಯಾವುವು ; (ಸಂಪೂರ್ಣ ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಮಳೆಯ ಪ್ರಮಾಣ ಹೆಚ್ಚಿರುವುದರಿಂದ ರಸ್ತೆಗಳು ದೀರ್ಘಕಾಲ ಬರಲು ಯಾವ ರೀತಿಯ ಉತ್ತಮ ತಾಂತ್ರಿಕತೆಯನ್ನು ಅಳವಡಿಸಿಕೊಳ್ಳಲಾಗಿದೆ ?

## ಹಳ್ಳಿ–ಸಂತೆ ಯೋಜನೆಯ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೭ (೯೬೭) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಳ್ಳಿ–ಸಂತೆ ಯೋಜನೆಯು ರಾಜ್ಯದಲ್ಲಿ ಜಾರಿಯಲ್ಲಿದೆಯೇ ; ಇದ್ದಲ್ಲಿ, ಇದನ್ನು ಯಾವಾಗಿನಿಂದ ಜಾರಿಗೆ ತರಲಾಗಿದೆ ; (ವಿವರ ಹಾಗೂ ಆದೇಶದ ಪ್ರತಿ ನೀಡುವುದು)

(ಆ) ಈ ಯೋಜನೆಯ ಸ್ವರೂಪಗಳೇನು ; ಇದರಿಂದ ರೈತರಿಗೆ ಆಗುವ ಅನುಕೂಲಗಳೇನು ; ಇದನ್ನು ಪ್ರಾರಂಭಿಸಲು ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ ;

(ಇ) ಈ ಯೋಜನೆಯಡಿ ಈವರೆಗೆ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಎಷ್ಟು ಕಡೆಗಳಲ್ಲಿ ಪ್ರಾರಂಭಿಸಲಾಗಿದೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಈ) ಈ ಯೋಜನೆಯುನ್ನು ಅನುಷ್ಠಾನಗೊಳಿಸಲು ಗ್ರಾಮ ಪಂಚಾಯತ್‌ಗಳನ್ನು ಆಯ್ಕೆ ಮಾಡುವಾಗ ಅನುಸರಿಸುವ ಮಾನದಂಡಗಳೇನು ? (ವಿವರ ನೀಡುವುದು)

## ರಸ್ತೆ ನಿರ್ಮಾಣ ಕಾಮಗಾರಿ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೮ (೯೧೮) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಬ್ಬಳ್ಳಿ–ಧಾರವಾಡ ಮಹಾನಗರಗಳಲ್ಲಿ ಕಳೆದ ಒಂದು ವರ್ಷದಿಂದ ಲೋಕೋಪಯೋಗಿ ಇಲಾಖಾ ವತಿಯಿಂದ ಎಷ್ಟು ರಸ್ತೆ ನಿರ್ಮಾಣ ಕಾಮಗಾರಿಗಳನ್ನು ಹಮ್ಮಿಕೊಳ್ಳಲಾಗಿದೆ ;

(ಆ) ಅವುಗಳು ಯಾವುವು ; ಪ್ರಸ್ತುತ ಸದರಿ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿವೆ ;

(ಇ) ಕೈಗೆತ್ತಿಕೊಳ್ಳಲು ಉದ್ದೇಶಿಸಿರುವ ರಸ್ತೆ ನಿರ್ಮಾಣ ಕಾಮಗಾರಿಗಳಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ಕೃಷಿ ರೈತರಿಗೆ ನೀಡುವ ಟಾರ್ಪಾಲ್‌ಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೯ (೯೧೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕೃಷಿ ರೈತರಿಗೆ ವಿತರಿಸಲಾಗಿರುವ ಟಾರ್ಪಾಲ್‌ಗಳೆಷ್ಟು ; ಟಾರ್ಪಾಲ್‌ಗಳ ಒಟ್ಟು ಅನುದಾನವೆಷ್ಟು ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಈ ಜಿಲ್ಲೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರನ್ನು ಒಳಗೊಂಡಂತೆ ಟಾರ್ಪಾಲುಗಳನ್ನು ಪಡೆದ ಫಲಾನುಭವಿಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಿಂದ ಟಾರ್ಪಾಲ್ ಸರಬರಾಜು ಮಾಡಲು ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸಿದ ಏಜೆನ್ಸಿಗಳಾವುವು ? (ಪೂರ್ಣ ವಿವರ ನೀಡುವುದು)

## ಕೃಷಿ ಹೊಂಡಗಳ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೦ (೯೨೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಕಳೆದ ೨ ವರ್ಷಗಳಿಂದ ಸರ್ಕಾರದ ಅತ್ಯುನ್ನತ ಯೋಜನೆಯಾದ ಕೃಷಿ ಭಾಗ್ಯ ಯೋಜನೆಯಡಿ ಈವರೆವಿಗೂ ನಿರ್ಮಿಸಿರುವ ಕೃಷಿ ಹೊಂಡಗಳು ಎಷ್ಟು ; (ತಾಲ್ಲೂಕುವಾರು, ವಿವರ ನೀಡುವುದು)

(ಆ) ಈ ಜಿಲ್ಲೆಗಳಲ್ಲಿ ಮೊದಲು ಸರ್ಕಾರ ಜಿಲ್ಲಾವಾರು ನಿಗಧಿಪಡಿಸಿರುವ ಕೃಷಿ ಹೊಂಡಗಳ ಸಂಖ್ಯೆ ಎಷ್ಟು ; ಎರಡನ್ನು ತುಲನಾತ್ಮಕವಾಗಿ ಪರಿಶೀಲಿಸಿದಾಗ, ಇನ್ನು ಎಷ್ಟು ಕೃಷಿ ಹೊಂಡಗಳನ್ನು ನಿರ್ಮಿಸಬೇಕಿದೆ ? (ಜಿಲ್ಲಾ ಹಾಗೂ ತಾಲ್ಲೂಕುವಾರು ಪೂರ್ಣ ವಿವರ ನೀಡುವುದು)

## ಟಿ.ನರಸೀಪುರ ನೂತನ ಕಪಿಲಾ ಸೇತುವೆಯ ಮೇಲೆ ದೀಪಗಳನ್ನು ಅಳವಡಿಸುವುದು.

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೧ (೯೨೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಟಿ. ನರಸೀಪುರದ ಬಳಿ ನೂತನವಾಗಿ ನಿರ್ಮಿಸಿರುವ ಕಪಿಲಾ ಸೇತುವೆಯ ಮೇಲೆ ವಿದ್ಯುತ್ ದೀಪಗಳಿಲ್ಲದೆ ಸಾರ್ವಜನಿಕರಿಗೆ ವಾಹನ ಚಾಲಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತಿರುಮಕೂಡಲು ವೃತ್ತದಿಂದ, ಗುಂಜಾ ನರಸಿಂಹಸ್ವಾಮಿ ದೇವಾಲಯದವರೆಗೆ ಎರಡೂ ಕಡೆ ವಿದ್ಯುತ್ ದೀಪಗಳನ್ನು ಅಳವಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಹುಣಸೂರು ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆ

**ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೨ (೯೨೬) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕರ ಉದ್ದೆಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹುಣಸೂರು ಪಟ್ಟಣಕ್ಕೆ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವ ಬಗ್ಗೆ ಯೋಜನೆಯನ್ನು ರೂಪಿಸಲಾಗಿದೆಯೇ ; ಈ ಯೋಜನೆಗೆ ಸರ್ಕಾರದ ತಾಂತ್ರಿಕ ಮತ್ತು ಆಡಳಿತಾತ್ಮಕ ಅನುಮೋದನೆ ದೊರಕಿದೆಯೇ ;

(ಆ) ಈ ಯೋಜನೆಯ ಅಂದಾಜು ಮೊತ್ತ ಎಷ್ಟು ; ಈ ಯೋಜನೆಗೆ ಅನುಮೋದನೆ ನೀಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ;

(ಇ) ಹುಣಸೂರು ಪಟ್ಟಣದಲ್ಲಿ ಹೊಸದಾಗಿ ಶುದ್ಧ ನೀರಿನ ಘಟಕ ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗಿದೆಯೇ ; ಇದರ ಅಂದಾಜು ಮೊತ್ತ ಎಷ್ಟು ; ಈ ಘಟಕವನ್ನು ಯಾವಾಗ ಸ್ಥಾಪಿಸಲಾಗುವುದು ?

## ಹನಿ ನೀರಾವರಿ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೩ (೯೪೪) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ತೋಟಗಾರಿಕೆ ಇಲಾಖೆಯಲ್ಲಿ ಕಳೆದ ೪ ವರ್ಷಗಳಿಂದ ಹನಿ ನೀರಾವರಿ ಯೋಜನೆಗೆ ಸರ್ಕಾರಕ್ಕೆ ಅರ್ಜಿ ಸಲ್ಲಿಸಿದ ರೈತ ಫಲಾನುಭವಿಗಳೆಷ್ಟು ; ಎಷ್ಟು ರೈತರಿಗೆ ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಅನುದಾನದಿಂದ ವಂಚಿತರಾಗಿ ಉಳಿದ ರೈತರಿಗೆ ಎಷ್ಟು ದಿನದಲ್ಲಿ ಅನುದಾನ ಬಿಡುಗಡೆ ಮಾಡಲಾಗುವುದು ?

## ಹನಿ ನೀರಾವರಿ ಬಗ್ಗೆ

**ಶ್ರೀ ವಿವೇಕ್‌ರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೪ (೯೪೫) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಹನಿ ನೀರಾವರಿಗಾಗಿ ರೈತರಿಂದ ಒಟ್ಟು ಸ್ವೀಕೃತವಾಗಿರುವ ಅರ್ಜಿಗಳೆಷ್ಟು ; ಆ ಪೈಕಿ ಈಗಾಗಲೇ ಎಷ್ಟು ರೈತರಿಗೆ ಹನಿ ನೀರಾವರಿ ಪದ್ಧತಿ ಅಳವಡಿಸಲಾಗಿದೆ ; ಉಳಿದ ರೈತರೆಷ್ಟು ; ಅವರಿಗೆ ಎಷ್ಟು ದಿನಗಳಲ್ಲಿ ಸಹಾಯಧನ ವಿತರಿಸಲಾಗುವುದು (ತಾಲ್ಲೂಕುವಾರು ವಿವರ ನೀಡುವುದು)

(ಆ) ೨ ವರ್ಷಗಳಲ್ಲಿ ಯಾವ ಬೆಳೆಗಳಿಗೆ ಎಷ್ಟು ಎಕರೆಗೆ ಸಹಾಯಧನ ನೀಡಲಾಗಿದೆ ; ಅದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ನೀಡಿರುವ ಸಹಾಯಧನ ಎಷ್ಟು ; (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ೨೦೧೫-೧೬, ೨೦೧೬-೧೭ನೇ ಸಾಲಿನಲ್ಲಿ ಬಿಡುಗಡೆ ಅನುದಾನದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೧೫ (೯೫೯) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೫-೧೬ ಮತ್ತು ೨೦೧೬-೧೭ನೇ ಸಾಲಿನಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಕೃಷಿ ಇಲಾಖೆಯಿಂದ ಸಣ್ಣ ಹಾಗೂ ಅತಿ ಸಣ್ಣ ರೈತರ ಕೃಷಿ ಉಪಕರಣಗಳಿಗೆ ಸರ್ಕಾರ ನೀಡಿರುವ ಒಟ್ಟು ಅನುದಾನವೆಷ್ಟು ;

(ಆ) ಅದರಲ್ಲಿ ಕೇಂದ್ರ ಸರ್ಕಾರದಿಂದ ಬಂದ ಅನುದಾನವೆಷ್ಟು ; ಹಾಗೂ ರಾಜ್ಯ ಸರ್ಕಾರ ನೀಡಿರುವ ಅನುದಾನವೆಷ್ಟು ; ಹಾಗೂ ಖರ್ಚು ಮಾಡಿರುವ ಅನುದಾನವೆಷ್ಟು ? (ವಿವರಗಳನ್ನು ನೀಡುವುದು)

## ಲೋಕೋಪಯೋಗಿ ಇಲಾಖೆಯಿಂದ ಬಿಡುಗಡೆ ಮಾಡಿದ ಹಣದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೬ (೧೦೪೯) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ, ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಗಳಿಗೆ ಲೋಕೋಪಯೋಗಿ ಇಲಾಖೆಯಿಂದ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚು ಮಾಡಲಾದ ಹಣವೆಷ್ಟು ; (ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಈ ಅನುದಾನದಲ್ಲಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳಾವುವು ; (ವಿವರಗಳನ್ನು ನೀಡುವುದು)

(ಇ) ಸರ್ಕಾರ ಬಿಡುಗಡೆ ಮಾಡಿದ ಅನುದಾನದಲ್ಲಿ ಇದುವರೆವಿಗೂ ಪೂರ್ಣಗೊಂಡ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳಾವುವು ; ಅಪೂರ್ಣಗೊಳ್ಳಲು ಕಾರಣಗಳೇನು ; (ಸಂಪೂರ್ಣ ವಿವರಗಳನ್ನು ಒದಗಿಸುವುದು)

(ಈ) ಈ ಯೋಜನೆಯ ಕಾಮಗಾರಿಗಳನ್ನು ಪೂರ್ಣಗೊಳಿಸಲು ಇರುವ ಕಾಲಮಿತಿ ಏನು ? (ಮಾಹಿತಿ ನೀಡುವುದು)

## ಕೃಷಿ ಇಲಾಖೆಯಿಂದ ಅನುದಾನ ನೀಡಿರುವ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೭ (೧೦೫೦) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ, ಚಾಮರಾಜನಗರ ಮತ್ತು ಮೈಸೂರು ಜಿಲ್ಲೆಗಳಿಗೆ ಕಳೆದ ಮೂರು ವರ್ಷಗಳಲ್ಲಿ ಕೃಷಿ ಇಲಾಖೆಯಿಂದ ಬಿಡುಗಡೆಯಾದ ಅನುದಾನವೆಷ್ಟು ; (ವರ್ಷಾವಾರು ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಈ ಅನುದಾನದಲ್ಲಿ ಯಾವ ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ ; (ವಿವರಗಳನ್ನು ನೀಡುವುದು)

(ಇ) ಸರ್ಕಾರ ಬಿಡುಗಡೆ ಮಾಡಿದ ಅನುದಾನದಲ್ಲಿ ಇದುವರೆವಿಗೂ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಯೋಜನೆಗಳಾವುವು ; (ಯೋಜನೆವಾರು ವಿವರಗಳನ್ನು ಒದಗಿಸುವುದು)

(ಈ) ಈ ಜಿಲ್ಲೆಗಳಲ್ಲಿ ರೈತರಿಗೆ ಸಬ್ಸಿಡಿ ಮೂಲಕ ಕೃಷಿ ಪರಿಕರಗಳನ್ನು ನೀಡಲಾಗಿದೆಯೇ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ಈ ಯೋಜನೆಯ ಫಲಾನುಭವಿ ರೈತರುಗಳ ಸಂಖ್ಯೆ ಎಷ್ಟು ; (ಹೆಸರು ವಿಳಾಸ ಸಹಿತ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಊ) ಈ ಯೋಜನೆಯಡಿ ಫಲಾನುಭವಿ ರೈತರುಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಅನುಸರಿಸಲಾಗುವ ಮಾನದಂಡಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ಹಳಿಯಾಳ ತಾಲ್ಲೂಕಿನ ಸರ್ಕಾರದಿಂದ ದಾಂಡೇಲಿವರೆಗೆ ರಸ್ತೆಯು ಕಳಪೆ ಕಾಮಗಾರಿಯ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೮ (೯೫೭) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಕರ್ಕಾದಿಂದ ದಾಂಡೇಲಿವರೆಗಿನ ರಸ್ತೆ ಮೇಲಿಂದ ಮೇಲೆ ಹದಗೆಡುತ್ತಿದ್ದು, ಲೋಕೋಪಯೋಗಿ ಇಲಾಖೆಯಿಂದ ಮಾಡಿರುವ ಕೆಲಸದಲ್ಲಿ ಸಾಕಷ್ಟು ಅವ್ಯವಹಾರ ಆಗಿರುವುದು ತಿಳಿದು ಬಂದಿದ್ದು ಇದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಕರ್ಕಾದಿಂದ ದಾಂಡೇಲಿವರೆಗಿನ ಇಲಾಖಾ ವತಿಯಿಂದ ಎಷ್ಟು ಬಾರಿ ರಸ್ತೆ ಕಾಮಗಾರಿ ಮಾಡಲಾಗಿದೆ ; (ಪ್ರತಿಯೊಂದು ಕಾಮಗಾರಿಗೆ ಬಿಡುಗಡೆ ಮಾಡಿದ ಮೊತ್ತ ಈ ಕಾಮಗಾರಿ ನಿರ್ವಹಿಸಿದ ಅಭಿಯಂತರರ ವಿವರ ನೀಡುವುದು)

(ಇ) ಈ ರೀತಿ ಇಲಾಖಾ ವತಿಯಿಂದ ಹಣ ಬಿಡುಗಡೆ ಮಾಡಿಕೊಂಡು ಕಳಪೆ ಕಾಮಗಾರಿ ಮಾಡಿರುವ ಸಂಬಂಧಿಸಿದ ಅಭಿಯಂತರರ ಮೇಲೆ ಇಲ್ಲಿಯವರೆಗೆ ಕ್ರಮ ಕೈಗೊಳ್ಳದಿರಲು ಕಾರಣವೇನು ; (ವಿವರ ನೀಡುವುದು) ಕಳಪೆ ಕಾಮಗಾರಿ ಮಾಡಿರುವ ಅಭಿಯಂತರರ ಮೇಲೆ ಈಗಲಾದರೂ ಸರ್ಕಾರ ಶಿಸ್ತಿನ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯಲ್ಲಿ ವಿವಿಧ ಕಾಮಗಾರಿಗಳಿಗೆ ಬಂದಿರುವ ಅನುದಾನದ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೯೯ (೯೫೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಲ್ಲಿ ೨೦೧೫-೧೬ನೇ ಸಾಲಿನಿಂದ ೨೦೧೬-೧೭ನೇ ಸಾಲಿನವರೆಗೆ ವಿವಿಧ ಕಾಮಗಾರಿಗಳಿಗೆ ಒದಗಿಸಲಾಗಿರುವ ಅನುದಾನ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಆ) ೨೦೧೫-೧೬ ಸಾಲಿನಿಂದ ೨೦೧೬-೧೭ನೇ ಸಾಲಿನವರೆಗೆ ಕೇವಲ ಸುಧಾರಣೆ ಕಾಮಗಾರಿಗೆ ಬಂದಿರುವ ಅನುದಾನ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

(ಇ) ಸದರಿ ಸುಧಾರಣೆ ಕಾಮಗಾರಿಗೆ ಒದಗಿಸಲಾದ ಅನುದಾನ ಬಳಸಿಕೊಂಡಿರುವ ಸ್ಥಳ, ನಿರ್ವಹಿಸಿರುವ ಕಾಮಗಾರಿಗಳು ಯಾವುವು ? (ವಿವರ ನೀಡುವುದು)

## ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಬಾಚಣಕೆ ಹತ್ತಿರ ತಂತಿ ಬೇಲಿಯ ಅನುದಾನ ಬಳಕೆಯಾಗದೆ ಇರುವ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೩೨೦ (೯೫೮) ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ಬಾಚಣಕೆ ಹತ್ತಿರ ತೋಟಗಾರಿಕಾ ಕ್ಷೇತ್ರಕ್ಕೆ ತಂತಿ ಬೇಲಿ ನಿರ್ಮಿಸಲು ಮಂಜೂರಾಗಿದ್ದ ೨೦.೫೨ ಲಕ್ಷ ರೂ. ಅನುದಾನವನ್ನು ಜಿಲ್ಲಾ ನಿರ್ಮಿತಿ ಕೇಂದ್ರವು ಎರಡು ವರ್ಷದಿಂದ ಈವರೆಗೆ ತಂತಿ

ಬೇಲಿ ಕಾಮಗಾರಿ ಪೂರ್ಣಗೊಳಿಸದೆ ಹಾಗೆ ಬಿಟ್ಟಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ೨೦೧೩-೧೪ನೇ ಸಾಲಿನಲ್ಲಿ ಸರ್ಕಾರದಿಂದ ಈ ತಂತಿ ಬೇಲಿ ನಿರ್ಮಿಸಲು ಅನುದಾನ ಬಿಡುಗಡೆ ಆಗಿದ್ದರೂ ಕೂಡ ಸದರಿ ಕಾಮಗಾರಿ ಪೂರ್ಣಗೊಳಿಸದೇ ಹಾಗೇ ಬಿಟ್ಟಿರುವುದರಿಂದ, ಈ ಕುರಿತು ತನಿಖೆ ಮಾಡಿ ಸಂಬಂಧಿಸಿದವರ ಮೇಲೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0291/900 ಪ್ರತಿಗಳು/11–03–2017